₹ 4 ಪುಟ: 4 ಸಂಪುಟ: 4 ಸಂಚಿಕೆ 88 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 Issue: 88 Saturday, 20, MAY, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24

## ಇಂದಿನಿಂದ 'ಸಿಇಟಿ' ಪರೀಕ್ಷೆ ಆರಂಭ

ಬೆಂಗಳೂರು : ಇಂದಿನಿಂದ ರಾಜ್ಯದ 592 ಕೇಂದ್ರಗಳಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ 2023 ರ ಸಿಇಟಿ ಪರೀಕ್ಷೆ ನಡೆಸಲಿದ್ದು, ಈ ಬಾರಿ 2.61 ಲಕ್ಷ ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ.

ಕೆಇಎ ನಡೆಸುವ 2023 ರ ಸಿಇಟಿ ಮೇ. 20 ರಿಂದ 22 ರವರೆಗೆ ನಡೆಯಲಿದ್ದು, ಈ ಬಾರಿ ಪರೀಕ್ಷೆಗೆ 2.61 ಲಕ್ಷ ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ಇದರಲ್ಲಿ 1.40 ಲಕ್ಷ ಬಾಲಕಿಯರು ಮತ್ತು 1.21 ಲಕ್ಷ ಬಾಲಕರು ಹಾಗೂ 8 ಮಂದಿ ತೃತೀಯ ಲಿಂಗಿಗಳು ಸಿಇಟಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ.

## ಕಂಠೀರವ ಕ್ರೀಡಾಂಗಣದಲ್ಲಿ ಸಿಎಂ–ಡಿಸಿಎಂ ಪ್ರಮಾಣವಚನ ಸ್ವೀಕಾರ ಸಮಾರಂಭ



ಬೆಂಗಳೂರು: ಕರ್ನಾಟಕದ ನೂತನ ಸರ್ಕಾರದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಹಾಗೂ ಶಾಸಕರ ಪ್ರಮಾಣವಚನ ಸ್ವೀಕಾರ ಸಮಾರಂಭ ಶನಿವಾರ ಮಧ್ಯಾಹ್ನ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿದೆ.

ಸಿದ್ದರಾಮಯ್ಯ ಅವರನ್ನು ಸಿಎಂ ಆಗಿ, ಡಿ.ಕೆ.ಶಿವಕುಮಾರ್ ಅವರನ್ನು ಉಪಮುಖ್ಯಮಂತ್ರಿಯಾಗಿ ಕಾಂಗ್ರೆಸ್ ಹೈಕಮಾಂಡ್ ಘೋಷಣೆ ಮಾಡಲಾಗಿದೆ. ಇಂದು (ಮೇ 20) ಬೆಂಗಳೂರಿನ ಕಂಠೀರವ ಸ್ಟೇಡಿಯಂನಲ್ಲಿ ಪ್ರತಿಜ್ಞಾವಿಧಿ ಸಮಾರಂಭ ನಡೆಯಲಿದೆ. ಕಾರ್ಯಕ್ರಮದಲ್ಲಿ ಕೇಂದ್ರದ ಘಟಾನುಘಟಿ ನಾಯಕರು ಭಾಗಿಯಾಗಲಿದ್ದು, ಬರುವ ವಿವಿಐಪಿಗಳಿಗೆ Z+, CRPF ASL ಪ್ರೊಟೆಕ್ಷನ್‌ನಿಂದ ಭದ್ರತೆ ಒದಗಿಸಲಾಗಿದೆ. ವಿವಿಧ 8 ರಾಜ್ಯದ ಮುಖ್ಯಮಂತ್ರಿಗಳಿಗೆ Z+ ಮತ್ತು Z ಕ್ಯಾಟಗರಿ ಭದ್ರತೆ ನೀಡಲಾಗುತ್ತಿದೆ. ಕಂಠೀರವ ಕ್ರೀಡಾಂಗಣ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕೂಡ ಒದಗಿಸಲಾಗಿದೆ.

ಹೆಚ್ಚುವರಿ ಪೊಲೀಸರ ನಿಯೋಜನೆ: ಇಬ್ಬರು ಜಂಟಿ ಪೊಲೀಸ್ ಆಯುಕ್ತರು ಸೇರಿ ಹೆಚ್ಚುವರಿ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ಭದ್ರತೆ ಒದಲಾಗಿಸಲಾಗಿದ್ದು, ಎಂಟು ಮಂದಿ ಡಿಸಿಪಿ, 10 ಮಂದಿ ಎಸಿಪಿ, 28 ಇನ್ಸ್ಪೆಕ್ಟರ್‌ಗಳು, 1,500ಕ್ಕೂ ಹೆಚ್ಚು ಪೊಲೀಸರು ಮತ್ತು ಸಂಚಾರ ನಿರ್ವಹಣೆಗಾಗಿ 500 ಸಂಚಾರಿ ಪೊಲೀಸರ ನಿಯೋಜನೆ ಮಾಡಲಾಗಿದೆ.

ವಿವಿಐಪಿ ಎಂಟ್ರಿಗೆ ಪ್ರತ್ಯೇಕವಾಗಿ ವ್ಯವಸ್ಥೆ ಮಾಡಲಿರುವ ಪೊಲೀಸರು, 2 ಗೇಟ್‌ಗಳಲ್ಲಿ ವಿವಿಐಪಿ ವಾಹನಗಳ ಪ್ರವೇಶಕ್ಕೆ ಮಾತ್ರ ಅವಕಾಶವಿದೆ. ಕಂಠೀರವ ಕ್ರೀಡಾಂಗಣದಲ್ಲಿ ಭರ್ಜರಿ ತಯಾರಿ ನಡೆದಿದ್ದು, ಸುಮಾರು 2 ಲಕ್ಷಕ್ಕೂ ಅಧಿಕ ಜನ ಸೇರುವ ನಿರೀಕ್ಷೆ ಇದೆ. ಹೀಗಾಗಿ ಒಂದು ಲಕ್ಷಕ್ಕೂ ಹೆಚ್ಚು ಆಸನದ ವ್ಯವಸ್ಥೆ ಮಾಡಲಾಗಿದೆ.

ಪ್ರಮಾಣ ವಚನಕ್ಕೆ ಗಣ್ಯರ ದಂಡು: ರಾಜಸ್ಥಾನ ಸಿಎಂ ಅಶೋಕ್ ಗೆಹ್ಲೋಟ್, ಹಿಮಾಚಲಪ್ರದೇಶ ಸಿಎಂ ಸುಖ್ ವಿಂದರ್ ಸಿಂಗ್ ಸುಖು, ಛತ್ತೀಸ್ಗಢ ಸಿಎಂ ಭೂಪೇಶ್ ಬಘೇಲ್, ಪಶ್ಚಿಮ ಬಂಗಾಳ ಸಿಎಂ ಮಮತಾ ಬ್ಯಾನರ್ಜಿ, ಬಿಹಾರ ಸಿಎಂ ನಿತೀಶ್ ಕುಮಾರ್, ತಮಿಳುನಾಡು ಸಿಎಂ ಎಂ.ಕೆ.ಸ್ಟಾಲಿನ್, ಪುದುಚೇರಿ ಸಿಎಂ ರಂಗಸ್ವಾಮಿ, ಜಾರ್ಖಂಡ್ ಸಿಎಂ ಹೇಮಂತ್ ಸೋರೇನ್ ಮತ್ತು ಓಅಕ ಮುಖ್ಯಸ್ಥ ಶರದ್ ಪವಾರ್ ಆಗಮಿಸುತ್ತಿದ್ದಾರೆ.

## ಮೊದಲ ಸಂಪುಟದಲ್ಲೇ ಜನರಿಗೆ ನೀಡಿದ ಭರವಸೆ ಈಡೇರಿಸುತ್ತೇವೆ: ಡಿ.ಕೆ.ಶಿ

ಬೆಂಗಳೂರು : ಶನಿವಾರ ನೂತನ ಸರ್ಕಾರ ರಚನೆಯಾಗಲಿದೆ. ಮೊದಲ ಸಂಪುಟದಲ್ಲೇ ಜನರಿಗೆ ನೀಡಿದ ಭರವಸೆ ಈಡೇ–ರಿಸುತ್ತೇವೆ ಎಂದು ನಿಯೋಜಿತ ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ.

ದೆಹಲಿಗೂ ಹೊರಡುವ ಮುನ್ನ ಸುದ್ದಿಗಾರರ ಜೊತೆ ಮಾತನಾಡಿದ ಡಿಕೆಶಿ ಶನಿವಾರ ನೂತನ ಸರ್ಕಾರ ರಚನೆಯಾಗಲಿದೆ. ಮೊದಲ ಸಂಪುಟದಲ್ಲೇ ಜನರಿಗೆ ನೀಡಿದ ಭರವಸೆ ಈಡೇರಿಸುತ್ತೇವೆ. ಶನಿವಾರೆ ಪ್ರತಿಜ್ಞಾವಿಧಿ ಕಾರ್ಯಕ್ರಮಕ್ಕೆ ಬರುವಂತೆ ನಮ್ಮ ಪಕ್ಷದ ಮುಖಂಡರು. ಬಿಜೆಪಿ ಕಾರ್ಯಕರ್ತ–ರಿಗೆ ಆಹ್ವಾನಿಸುತ್ತೇವೆ. ನಾನು ಸಿದ್ದರಾಮಯ್ಯ ಇಬ್ಬರು ದೆಹಲಿಗೆ ಹೋಗುತ್ತಿದ್ದೇವೆ ಎಂದು



ಡಿಕೆಶಿ ಹೇಳಿದ್ದಾರೆ.

ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತ–ರಿಗೆ ಆಹ್ವಾನಿಸುತ್ತೇವೆ. ಕಾರ್ಯಕ್ರಮಕ್ಕೆ ಜೆಡಿಎಸ್, ಬಿಜೆಪಿ ಮುಖಂಡರಿಗೂ ಆಹ್ವಾನಿಸುತ್ತೇವೆ. ಪ್ರತಿಜ್ಞಾವಿಧಿ ಕಾರ್ಯಕ್ರಮಕ್ಕೆ ರಾಷ್ಟ್ರೀಯ ನಾಯಕರೂ ಬರುತ್ತಿದ್ದಾರೆ ಎಂದರು. ಸಚಿವ ಸಂಪುಟ ರಚನೆ ಕು–ರಿತು ಮಾತನಾಡಿದ ಡಿಕೆಶಿ ಈಗಲೇ ಏನೂ ಹೇಳುವುದಿಲ್ಲ,ಎಲ್ಲವೂ ಫೈನಲ್ ಆದ ಮೇಲೆ ಈ ಬಗ್ಗೆ ಮಾಹಿತಿ ನೀಡುತ್ತೇವೆ ಎಂದರು.

ರಾಜ್ಯದ 31 ನೇ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವರು ಮೇ. 20 ರ ಶನಿವಾರ ಮಧ್ಯಾಹ್ನ 12.30 ಕ್ಕೆ ಕಂಠೀರ ಕ್ರೀಡಾಂಗಣದಲ್ಲಿ ಪ್ರಮಾಣವಚನ ಸ್ವೀಕಾರ ಮಾಡಲಿದ್ದಾರೆ. ರಾಜ್ಯದ ನೂತನ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಗೆ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಶುಭ ಕೋರಿದ್ದಾರೆ.



## ರಾಹುಲ್ ಗಾಂಧಿ ಅಮೆರಿಕ ಪ್ರವಾಸ ಮೇ.28 ಕ್ಕೆ ಮರು ನಿಗದಿ

ನವದೆಹಲಿ: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮೇ 31 ರಂದು 10 ದಿನಗಳ ಕಾಲ ಅಮೆರಿಕ ಪ್ರವಾಸ ನಿಗದಿಯಾಗಿತ್ತು. ಆದರೆ, ಇದೀಗ ಮೇ 28 ರಂದೇ ಅವರು ಪ್ರಯಾಣಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ?

ರಾಹುಲ್ ಗಾಂಧಿ ಮೇ 29–30 ರಂದು ಸ್ಟ್ಯಾನ್ಫೋರ್ಡ್ ವಿಶ್ವ ವಿದ್ಯಾನಿಲಯದಲ್ಲಿ ಕಾರ್ಯ ಕ್ರಮವೊಂದರಲ್ಲಿ ಪಾಲ್ಗೊಳ್ಳಲಿದ್ದು, ಅನಿವಾಸಿ ಭಾರತೀಯರ ನ್ನು ಭೇಟಿಯಾಗಲಿದ್ದಾರೆ. ಜೂನ್ 4 ರಂದು ಅಮೆರಿಕದ ಮ್ಯಾಡಿಸನ್ ಸ್ಕ್ವೇರ್ ನಲ್ಲಿ ರಾಹುಲ್ ಗಾಂಧಿ ರ್ಯಾಲಿ ರಾಹುಲ್ ಗಾಂಧಿ ಮಾರ್ಚ್ ನಲ್ಲಿ ಲಂಡನ್ ನಿಂದ ಹಿಂತಿ–ರುಗಿದ ನಂತರ ಕೇಂಬ್ರಿಡ್ಜ್ ವಿಶ್ವವಿದ್ಯಾನಿಲಯದಲ್ಲಿ ಮಾಡಿದ್ದ ಭಾಷಣ–ಕ್ಕಾಗಿ ಆಡಳಿತಾರೂಢ ಬಿಜೆಪಿಯಿಂದ ತೀವ್ರ ಟೀಕೆಗೆ ಗುರಿಯಾಗಿದ್ದರು. ಭಾರತೀಯ ಪ್ರಜಾಪ್ರಭುತ್ವದ ಮೂಲ ರಚನೆಯ ಮೇಲೆ ದಾಳಿ ಎದುರಿಸುತ್ತಿದ್ದೇವೆ ಎಂದು ಹೇಳಿದ್ದರು.

ಅದಕ್ಕೆ ಅವರು ಕ್ಷಮೆಯಾಚಿಸುವಂತೆ ಬಿಜೆಪಿ ನಾಯಕರು ಒತ್ತಾಯಿಸಿದ್ದರು. ಜೂನ್ 4 ರಂದು ರಾಹುಲ್ ಗಾಂಧಿ ನ್ಯೂಯಾರ್ಕ್ನ ಮ್ಯಾಡಿಸನ್ ಸ್ಕ್ವೇರ್ ಗಾರ್ಡನ್ನಲ್ಲಿ ರ್ಯಾಲಿ ನಡೆಸಲಿದ್ದಾರೆ. ಇದರಲ್ಲಿ ಸುಮಾರು 5,000 ಅನಿವಾಸಿ ಭಾರತೀಯರು ಭಾಗವಹಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

## ನವೆಂಬರ್ ವೇಳೆಗೆ ರಾಜ್ಯ ರಾಜಕೀಯದಲ್ಲಿ ಮಹತ್ವ ಬದಲಾವಣೆ: ಕುಮಾರಸ್ವಾಮಿ ಭವಿಷ್ಯ



ರಾಮನಗರ: ನವೆಂಬರ್ ವೇಳೆಗೆ ರಾಜ್ಯ ರಾಜ–ಕಾರಣದಲ್ಲಿ ಬಾರಿ ಬದಲಾವಣೆಗಳು ಆಗಲಿವೆ, ಕಾದು ನೋಡಿ ಎಂದು ಹೇಳುವ ಮೂಲಕ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹೊಸ ಬಾಂಬ್ ಸಿಡಿಸಿದ್ದಾರೆ.

ಸ್ವಕ್ಷೇತ್ರದ ಮತದಾರರಿಗೆ ಕೃತಜ್ಞತಾ ಸಭೆ ನಡೆಸಿ ಮಾತನಾಡಿದ ಅವರು, ಬಹುಮತದ ಸರ್ಕಾರ ಬಂದಿದೆ ಎಂದು ಭಾವಿಸಬೇಡಿ. ಲೋಕಸಭಾ ಚುನಾವಣೆ ಬಳಿಕ ಏನು ಬೆಳವಣಿಗೆ ಆಗುತ್ತದೆ ಎಂದು ನೋಡೋಣ. ಈಗಿನ ರಾಜಕೀಯ ಬೆಳವಣಿಗೆ ಬಗ್ಗೆ ಯಾವುದೇ ಅಂಜಿಕೆ ಬೇಡ ಎಂದರು.

ಬಿಜೆಪಿಯವರು ಲೂಟಿ ಮಾಡಿದ ರೀತಿಯಲ್ಲೆ ಕಾಂಗ್ರೆಸ್ ನವರು ಲೂಟಿಗೆ ಇಳಿಯಲಿದ್ದಾರೆ ಅದರಲ್ಲೇನು ಹೊಸತಿಲ್ಲ, ಯಾರನ್ನು ಎಲ್ಲಿ ಹಿಡಿಯಬೇಕೆಂದು ನನಗೆ ಚೆನ್ನಾಗಿ ತಿಳಿದಿದೆ. ನಾನು ಹೋರಾಟ ಮಾಡಲು ಸಿದ್ದನಿದ್ದೇನೆ, ಯಾವುದೇ ಕಾರಣಕ್ಕೂ ಈ ಸರ್ಕಾರದ ಮಂತ್ರಿಗಳ ಬಳಿ ಕೈ ಚಾಚುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಾಂಗ್ರೆಸ್ ಪಕ್ಷ ನೀಡಿರುವ ಗ್ಯಾರಂಟಿ ಸೇರಿದಂತೆ ಯಾವುದೇ ಯೋಜನೆಯನ್ನು ಜಾರಿಗೆ ತರುವುದು ಸುಲಭವಲ್ಲ. ಈ ಹಿಂದೆ ಜಾರಿಯಲ್ಲಿರುವ ಕಾರ್ಯಕ್ರಮಗಳೇ ಮುಂದುವರಿಯುವ ಅನುಮಾನವಿದೆ. ಅವರ ಯೋಜನೆಗಳಿಗೆ 60 ರಿಂದ 70 ಸಾವಿರ ಕೋಟಿ ರೂ. ಬೇಕು. ಅವರು ಎಲ್ಲಿಂದ ಅನುದಾನ ತರುತ್ತಾರೆ.ಯಾವುದೇ ಕಾರಣಕ್ಕೂ ನಿರೀಕ್ಷೆ ಇಟ್ಟುಕೊಳ್ಳಬೇಡಿ ಎಂದರು.

ಜೆಡಿಎಸ್ ಈ ಬಾರಿ 60 ಕ್ಕಿಂತ ಹೆಚ್ಚು ಸ್ಥಾನಗಳಲ್ಲಿ ಗೆಲ್ಲಬೇಕಿತ್ತು. ಆದರೆ, ಕೆಲವರ ಪಿತೂರಿ ಮತ್ತು ಸುಳ್ಳು ಆರೋಪಗಳಿಂದ ಎರಡು ಮೂರು ಸಮಾಜದ ಮತಗಳು ನಮ್ಮ ಪಕ್ಷಕ್ಕೆ ಬರಲಿಲ್ಲ. ಜೆಡಿಎಸ್ ಬಿಜೆಪಿ ಜೊತೆ ಹೋಗುತ್ತದೆ ಎಂದು ಸುಳ್ಳು ಸುದ್ದಿ ಹಬ್ಬಿಸಿದರು.

ಬಿಜೆಪಿ ರಾಷ್ಟ್ರೀಯ ನಾಯಕರು ಏನೇನು ಮಾಡಿದ್ದಾರೆ ಗೊತ್ತು, ನಮ್ಮನ್ನು ಮುಗಿಸಲು ಹೋಗಿ ಇದೀಗ ಅವರೇ ಮುಗಿದಿದ್ದಾರೆ. ನಮ್ಮ ಕುಟುಂಬ ಇದಕ್ಕಿಂತ ಹೆಚ್ಚಿನ ಆಘಾತವನ್ನು ಎದುರಿಸಿ ನಂತರ ರಾಷ್ಟ್ರಮಟ್ಟದಲ್ಲಿ ಹೆಸರು ಮಾಡಿದೇವೆ. ದೇವರ ಹಾಗೂ ಜನರ ಅನುಗ್ರಹ ನಮ್ಮ ಪಕ್ಷದ ಮೇಲಿದ್ದು, ಸೋಲಿ ಗೆಲ್ಲಲಿ ಸಂಘಟನೆ ಮುಂದುವರೆಸಲಿದ್ದೇವೆ. ಮುಂದೆ ನಮ್ಮ ಪಕ್ಷ ಸ್ವತಂತ್ರವಾಗಿ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



## ಸಿದ್ದರಾಮಯ್ಯ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಮಮತಾ ಬ್ಯಾನರ್ಜಿ ಗೈರು

ಬೆಂಗಳೂರು: ಲೋಕಸಭಾ ಚುನಾವಣೆಗೆ ಇನ್ನೂ ಒಂದು ವರ್ಷ ಬಾಕಿಯಿರುವಂತೆಯೇ ರಾಜ್ಯದಲ್ಲಿ ಭರ್ಜರಿ ಜಯ ಭೇರಿ ಕಾಂಗ್ರೆಸ್ ಪ್ರತಿಪಕ್ಷಗಳನ್ನು ಒಗ್ಗೂಡಿಸುವ ನಿಟ್ಟಿನಲ್ಲಿಯೂ ಕಾರ್ಯತಂತ್ರ ರೂಪಿಸುತ್ತಿದೆ. ಈ ನಿಟ್ಟಿನಲ್ಲಿ ನಾಳೆ ನಡೆಯಲಿರುವ ನೂತನ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಮಮತಾ ಬ್ಯಾನರ್ಜಿ, ಡಿಎಂಕೆ ಮುಖ್ಯಸ್ಥ ಎಂಕೆ ಸ್ಟಾಲಿನ್, ತೆಲಂಗಾಣ ಮುಖ್ಯಮಂತ್ರಿ ಕೆ. ಚಂದ್ರಶೇಖರ್ ರಾವ್ ಸೇರಿದಂತೆ ವಿವಿಧ ಪ್ರತಿಪಕ್ಷಗಳ ಮುಖಂಡರು ಪಾಲ್ಗೊಳ್ಳುವಂತೆ ಆಹ್ವಾನ ನೀಡಲಾಗಿತ್ತು.

ಆದರೆ, ಈ ಕಾರ್ಯಕ್ರಮಕ್ಕೆ ಮಮತಾ ಬ್ಯಾನರ್ಜಿ ಆಗಮಿಸುತ್ತಿಲ್ಲ. ಅವರ ಬದಲಿಗೆ ಪಕ್ಷದ ನಾಯಕ ಕಾಕೋಲಿ ಘೋಷ್ ದಸ್ತಿದಾರ್ ಆಗಮಿಸುತ್ತಿದ್ದಾರೆ ಎಂದು ತೃಣಮೂಲ ಕಾಂಗ್ರೆಸ್ ನಾಯಕರೊಬ್ಬರು ತಿಳಿಸಿದ್ದಾರೆ.


ಈ ಕುರಿತು ಟ್ವೀಟ್ ಮಾಡಿರುವ ರಾಜ್ಯಸಭಾ ಪಕ್ಷದ ನಾಯಕ ಡೆರೆಕ್ ಓ ಬ್ರಿಯಾನ್, ಕರ್ನಾಟಕದ ನಿಯೋಜಿತ ಸಿಎಂ ಸಿದ್ದರಾಮಯ್ಯ ಮತ್ತು ಅವರ ಸಹೋದ್ಯೋಗಿಗಳ ಪ್ರಮಾಣ ವಚನ ಸಮಾರಂಭಕ್ಕೆ ಎಐಸಿಸಿ ಅಧ್ಯಕ್ಷರೇ ವೈಯಕ್ತಿಕವಾಗಿ ಮಮತಾ ಬ್ಯಾನರ್ಜಿ ಅವರನ್ನು ಆಹ್ವಾನಿಸಿದ್ದರು. ಆದರೆ, ಅವರ ಪರವಾಗಿ ಲೋಕಸಭೆಯಲ್ಲಿನ ಟಿಎಂಸಿ ಉಪ ನಾಯಕ ಕಾಕೊಲಿ ಘೋಷ್ ದಸ್ತಿದಾರ್ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

## ಇಬ್ಬರು ಸುಪ್ರೀಂ ಕೋರ್ಟ್ ನೂತನ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕಾರ

ನವದೆಹಲಿ: ಸುಪ್ರೀಂ ಕೋರ್ಟ್‌ನಲ್ಲಿ ಇಬ್ಬರು ಹೊಸ ನ್ಯಾಯಾಧೀಶರು ಪ್ರಮಾಣ ವಚನ ಸ್ವೀಕ–ರಿಸಿದ್ದಾರೆ. ಆಂಧ್ರಪ್ರದೇಶ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಪ್ರಶಾಂತ್ ಕುಮಾರ್ ಮಿಶ್ರಾ ಮತ್ತು ಹಿರಿಯ ವಕೀಲ ಕೆ.ವಿ.ವಿಶ್ವನಾಥನ್ ಅವರು ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ನ್ಯಾಯಮೂರ್ತಿ ವಿಶ್ವನಾಥನ್ ಅವರು ಆಗಸ್ಟ್ 2030 ರಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ವಹಿಸಿಕೊಳ್ಳಲಿದ್ದಾರೆ ಮತ್ತು ಮೇ 24, 2031 ರವರೆಗೆ ಒಂಬತ್ತು ತಿಂಗಳಿಗೂ ಹೆಚ್ಚು ಕಾಲ ಸುಪ್ರೀಂ ಕೋರ್ಟ್ನ ಮುಖ್ಯಸ್ಥರಾಗಲಿದ್ದಾರೆ. ಬಾರ್ ಅಸೋಸಿಯೇಷನ್ನಿಂದ ನೇರವಾಗಿ ಸಿಜೆಐ ಆದ ನಾಲ್ಕನೇ ನ್ಯಾಯಾಧೀಶರಾಗಲಿದ್ದಾರೆ.

ಸುಪ್ರೀಂ ಕೋರ್ಟ್ ಕೊಲಿಜಿಯಂ ಬಾರ್ ಅಸೋಸಿಯೇಷನ್ನ ಪ್ರಸಿದ್ಧ ಸದಸ್ಯರ ಹೆಸರುಗಳನ್ನು



ಸಹ ಪರಿಗಣಿಸಿದೆ. ಅವರ ಅಭಿಪ್ರಾಯದಲ್ಲಿ, ಹಿರಿಯ ವಕೀಲ ಕೆ.ವಿ.ವಿಶ್ವನಾಥನ್ ಅವರು ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಳ್ಳಲು ಸಂಪೂರ್ಣವಾಗಿ ಸೂಕ್ತರಾಗಿದ್ದಾರೆ. ಅವರ ನೇಮಕವು ಸರ್ವೋಚ್ಚ ನ್ಯಾಯಾಲಯದ ರಚನೆಯಲ್ಲಿ ವಕೀಲರ ಪ್ರಾತಿನಿಧ್ಯವನ್ನು ಹೆಚ್ಚಿಸುತ್ತದೆ.

ಅವರು, ಸುಪ್ರೀಂ ಕೋರ್ಟ್ ಬಾರ್ ನ ಗೌರವಾನ್ವಿತ ಸದಸ್ಯರಾಗಿದ್ದಾರೆ. ಅವರ ಅಪಾರ ಅನುಭವ ಮತ್ತು ಕಾನೂನು ಮತ್ತು ನ್ಯಾಯಶಾಸ್ತ್ರದಲ್ಲಿ ಆಳವಾದ ಜ್ಞಾನವು ಸುಪ್ರೀಂ ಕೋರ್ಟ್ಗೆ ಗಮನಾರ್ಹ ಮೌಲ್ಯವನ್ನು ನೀಡುತ್ತದೆ.

## ಬಿಜೆಪಿ ಚುನಾವಣೆಯಲ್ಲಿ ಸೋತಿದ್ದೇಕೆ, ಪಕ್ಷದಲ್ಲಿ ಎಷ್ಟು ಒಡಕಿದೆ ಎಂಬುದರತ್ತ ಯೋಚಿಸಬೇಕು: ಪ್ರಿಯಾಂಕ್ ಖರ್ಗೆ




ನವದೆಹಲಿ: ಸರ್ಕಾರ ರಚನೆಯಲ್ಲಿ ವಿಳಂಬ ಹಾಗೂ ಕಾಂಗ್ರೆಸ್ ಗ್ಯಾರಂಟಿ ಭರವಸೆ ಕು–ರಿತು ಟೀಕಿಸುತ್ತಿರುವ ಬಿಜೆಪಿ ನಾಯಕರ ವಿರುದ್ಧ ಚಿತ್ತಾಪುರದಿಂದ ಆಯ್ಕೆಯಾಗಿರುವ ನೂತನ ಶಾಸಕ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಸೋತಿದ್ದು ಏಕೆ, ಆ ಪಕ್ಷದಲ್ಲಿ ಎಷ್ಟು ಒಡಕಿದೆ ಎಂಬುದರತ್ತ ಯೋಚಿಸಬೇಕಾಗಿದೆ.

ಕರ್ನಾಟಕದ ಜನರು ಅಭಿವೃದ್ಧಿಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿದ್ದಾರೆ ಎಂದರು.

ಸಚಿವ ಸಂಪುಟದಲ್ಲಿ ಯಾರಿಗೆ ಸ್ಥಾನ ಕೊಡಬೇಕು ಎಂಬುದರ ಬಗ್ಗೆ ಚರ್ಚೆ ನಡೆಯುತ್ತಿದೆ.

ಈ ವಿಚಾರದಲ್ಲಿ ನಿಯೋಜಿತ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ.

ಉಸ್ತುವಾರಿ ಪ್ರಧಾನ ಕಾರ್ಯದರ್ಶಿಯೊಂದಿಗೆ ಮಾತುಕತೆ ನಡೆಸಿ ಅಂತಿಮ ಪಟ್ಟಿಯನ್ನು ಸಿದ್ಧಪಡಿಸಲಾಗಿತ್ತು. ನಂತರ ಅವರು ಅದನ್ನು ಕಾಂಗ್ರೆಸ್ ಅಧ್ಯಕ್ಷರಿಗೆ ಹಸ್ತಾಂತರಿಸಲಿದ್ದಾರೆ ಎಂದು ಅವರು ತಿಳಿಸಿದರು.

## ಕುಸ್ತಿಪಟುಗಳ ಪ್ರತಿಭಟನಾ ಸ್ಥಳಕ್ಕೆ ಸಚಿನ್ ಪೈಲಟ್ ಭೇಟಿ, ಬೆಂಬಲ

ನವದೆಹಲಿ: ಲೈಂಗಿಕ ಕಿರುಕುಳದ ಆರೋಪ ಎದುರಿಸುತ್ತಿರುವ ಭಾರತೀಯ ಕುಸ್ತಿ ಫೆಡರೇಷನ್ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಂತರ್ ಮಂತರ್ ನಲ್ಲಿ ಪ್ರತಿಭಟನೆ ನಡೆಸುತ್ತಿರುವ ಕುಸ್ತಿಪಟುಗಳನ್ನು ಭೇಟಿಯಾದ ಕಾಂಗ್ರೆಸ್ ನಾಯಕ ಸಚಿನ್ ಪೈಲಟ್ ಬೆಂಬಲ ಸೂಚಿಸಿದ್ದಾರೆ.

ನಂತರ ಮಾತನಾಡಿದ ಅವರು, ದೇಶವನ್ನು ಹೆಮ್ಮೆಪಡುವಂತೆ ಮಾಡಿದವರಿಗೆ ನ್ಯಾಯದಾನ ಏಕೆ ವಿಳಂಬವಾಗುತ್ತಿದೆ ಎಂದು ಪ್ರಶ್ನಿಸಿದರು. ಕಳೆದ 26 ದಿನಗಳಿಂದ ಪ್ರತಿಭಟನೆ ನಡೆಸುತ್ತಿರುವ ಕುಸ್ತಿಪಟುಗಳಿಗೆ ನ್ಯಾಯ ಸಿಗಬೇಕು. ಈ ನಿಟ್ಟಿನಲ್ಲಿ ಆಡಳಿತ




ಮತ್ತು ಪೊಲೀಸರು ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ರಾಜಕೀಯ ಒತ್ತಡದ ನಡುವೆಯೂ ಐಪಿಎಲ್ ವೀಕ್ಷಿಸಿ ರಿಲ್ಯಾಕ್ಸ್ ಆದ ನೂತನ ಸಿಎಂ ಸಿದ್ದರಾಮಯ್ಯ

ಬೆಂಗಳೂರು: ತಾನೊಬ್ಬ ಅಪ್ಪಟ ಕ್ರಿಕೆಟ್ ಅಭಿಮಾನಿ ಎಂಬುದನ್ನು ಸಿದ್ದರಾಮಯ್ಯ ಅವರು ಮತ್ತೊಮ್ಮೆ ಸಾಬೀತು ಪಡಿಸಿದ್ದಾರೆ.

ಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದು ಬೀಗಿದ ಬಳಿಕ ಸಿದ್ದರಾಮಯ್ಯ ಸಿಎಂ ಆಗಿ ಆಯ್ಕೆ ಆಗಿದ್ದು, ಡಿಕೆಶಿ ಡಿಸಿಎಂ ಆಗಿದ್ದಾರೆ. ಈ ಬೆನ್ನಲ್ಲೇ ಇದೀಗ ಕಾಂಗ್ರೆಸ್ನಲ್ಲಿ ಸಚಿವ ಸ್ಥಾನಕ್ಕೆ ಲಾಬಿ ಕೂಡ ಶುರುವಾಗಿದೆ. ಆದರೆ ಈ ಎಲ್ಲಾ ರಾಜಕೀಯ ಒತ್ತಡಗಳ ನಡುವೆ ಸಿದ್ದರಾಮಯ್ಯ ಐಪಿಎಲ್ ಪಂದ್ಯ



ವೀಕ್ಷಿಸುತ್ತಿರುವ ಫೋಟೋವೊಂದು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ.

ರಾಜಕೀಯ ಒತ್ತಡದ ನಡುವೆಯೂ ಗುರುವಾರ ರಾತ್ರಿ ರಿಲ್ಯಾಕ್ಸ್ ಆಗಲು ಸಿದ್ದರಾಮಯ್ಯ ಆರ್ ಸಿಬಿ ಕಡೇ ಓವರ್ ಗಳ ಮ್ಯಾಚ್ ನೋಡಿದ್ದಾರೆ. ಸಿಎಲ್ಪಿ ಸಭೆ ಮುಗಿಸಿ ನಿವಾಸಕ್ಕೆ ಹೋದ ಬಳಿಕ ಬೆಂಬಲಿಗರ ಜೊತೆ ಕೆಲಕಾಲ ಐಪಿಎಲ್ ವೀಕ್ಷಣೆ ಮಾಡಿದ್ದಾರೆ. ಸಿದ್ದರಾಮಯ್ಯ ಅವರು ಈ ಹಿಂದೆಯೂ ಚುನಾವಣಾ ಪ್ರಚಾರಕ್ಕೆ ವಿರಾಮ ನೀಡಿ ಕ್ರೀಡಾಂಗಣದಲ್ಲಿ ಆಟ ನೋಡಿ ಆನಂದಿಸಿದ್ದರು. ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ನಡುವಿನ ಐಪಿಎಲ್ ಪಂದ್ಯವನ್ನು ವೀಕ್ಷಿಸಲು ಸಿದ್ದರಾಮಯ್ಯ ಅವರು ತಮ್ಮ ಹಿರಿಯ ಕಾಂಗ್ರೆಸ್ ನಾಯಕರ ಜೊತೆ ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಭೇಟಿ ನೀಡಿ ಪಂದ್ಯ ವೀಕ್ಷಿಸಿ ಎಂಜಾಯ್ ಮಾಡಿದ್ದರು.

## ಪಿಯುಸಿ ಮರು ಮೌಲ್ಯಮಾಪನ


### ರಾಜ್ಯಕ್ಕೆ ಪ್ರಥಮ ರ್‍ಯಾಂಕ್ ಪಡೆದ ವಿಶೇಷ ಚೇತನ ವಿದ್ಯಾರ್ಥಿ



ಬೆಂಗಳೂರು: ಕಲಾ ವಿಭಾಗದಲ್ಲಿ ವಿದ್ಯಾರ್ಥಿ ಕುಶಾಲ್ ನಾಯ್ಕ್ ಪಿಯುಸಿ ಮರು ಮೌಲ್ಯಮಾಪನದಲ್ಲಿ ಹೆಚ್ಚಿನ ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದುಕೊಂಡಿದ್ದಾನೆ.

ಆ ಮೂಲಕ ಬೆಂಗಳೂರಿನ ಜಯನಗರ ಕಾಲೇಜಿನ ವಿದ್ಯಾರ್ಥಿನಿ ತಬಸುಮ್ ಶೇಖ್ನನ್ನು ಹಿಂದಿಕ್ಕಿದ್ದಾನೆ. ತಬಸುಮ್ ಶೇಖ್ 593 ಅಂಕ ಪಡೆದು ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥ–ಮ ಸ್ಥಾನ ಪಡೆದುಕೊಂಡಿದ್ದರು. ಆದರೆ ಮರು ಮೌಲ್ಯಮಾಪನದಲ್ಲಿ ವಿಜಯನಗರ ಜಿಲ್ಲೆಯ ಕೊಟ್ಟೂರಿನ ವಿಶೇಷ ಚೇತನ ವಿದ್ಯಾರ್ಥಿ ಕುಶಾಲ್ ನಾಯ್ಕ್ ದ್ವಿತೀಯ ಪಿಯುಸಿನಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ಕುಶ್ ನಾಯ್ಕ್ ಮೌಲ್ಯಮಾಪನ ಫಲಿತಾಂಶದಲ್ಲಿ ಕಲಾ ವಿಭಾಗದ ಐಚ್ಛಿಕ ಕನ್ನಡ ವಿಷಯದಲ್ಲಿ 592 ಅಂಕಗಳಿಂದ 594 ಅಂಕಗಳನ್ನು ಪಡೆದು ರಾಜ್ಯಕ್ಕೆ ಪ್ರಥಮ ರ್‍ಯಾಂಕ್ ಬಂದಿದ್ದಾರೆ.

## ಐಪಿಎಲ್ ನಲ್ಲಿ 6ನೇ ಶತಕ ಸಿಡಿಸಿದ ಕೊಹ್ಲಿ



ಹೈದರಾಬಾದ್: ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಆರ್ಸಿಬಿ ಎಂಟು ವಿಕೆಟ್ ಗಳ ಭರ್ಜರಿ ಜಯ ದಾಖಲಿಸಿದೆ. ಆರ್ಸಿಬಿ ಆಟಗಾರ ವಿರಾಟ್ ಕೊಹ್ಲಿ 62 ಎಸೆತಗಳಲ್ಲಿ ಶತಕ ಗಳಿಸಿದ್ದಾರೆ. 63 ಎಸೆತದಲ್ಲಿ 12 ಬೌಂಡರಿ, 4 ಸಿಕ್ಸರ್ ಸಿಡಿಸಿ ಔಟ್ ಆದ ಕೊಹ್ಲಿ ಟಿ20 ಕ್ರಿಕೆಟ್ ನಲ್ಲಿ ಅತಿ ಹೆಚ್ಚು ಶತಕ ಬಾರಿಸಿದ ಆಟಗಾರರ ಪಟ್ಟಿಯಲ್ಲಿ ಮೊದಲ ಸ್ಥಾನಕ್ಕೇರಿದ್ದಾರೆ.

ಐಪಿಎಲ್ ನಲ್ಲಿ 6, ಅಂತರರಾಷ್ಟ್ರೀಯ ಟಿ20 ಯಲ್ಲಿ ಒಂದು ಶತಕ ಬಾರಿಸಿದ್ದಾರೆ. ರೋಹಿತ್ ಶರ್ಮಾ ಮತ್ತು ಕೆ.ಎಲ್. ರಾಹುಲ್ ತಲಾ ಆರು ಶತಕಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ.

ವಿರಾಟ್ ಕೊಹ್ಲಿ ಐಪಿಎಲ್ ನಲ್ಲಿ 6ನೇ ಶತಕ ಬಾರಿಸಿದ್ದು ಅತಿ ಹೆಚ್ಚು ಶತಕ ದಾಖಲಿಸಿದ ಆಟಗಾರರ ಪಟ್ಟಿಯಲ್ಲಿ ಕ್ರಿಸ್ ಗೇಲ್ ಜೊತೆಗೆ ಜಂ–ಟಿಯಾಗಿ ಮೊದಲ ಸ್ಥಾನ ಹಂಚಿಕೊಂಡಿದ್ದಾರೆ.

2016ರಲ್ಲಿ ನಾಲ್ಕು ಶತಕ ಸಿಡಿಸಿದ್ದ ಕೊಹ್ಲಿ 2019ರಲ್ಲಿ ಒಂದು ಶತಕ, ಈ ಸಲ ಮತ್ತೊಂದು ಶತಕ ದಾಖಲಿಸಿದ್ದಾರೆ.

2018ರ ನಂತರ ವಿರಾಟ್ ಕೊಹ್ಲಿ ಐಪಿ–ಎಲ್ ಆವೃತ್ತಿ ಒಂದರಲ್ಲಿ 500ಕ್ಕೂ ಹೆಚ್ಚು ರನ್ ದಾಖಲಿಸಿದ್ದಾರೆ. ಈ ಬಾರಿ 13 ಪಂದ್ಯಗಳಲ್ಲಿ 538 ಕಲೆ ಹಾಕಿದ್ದಾರೆ.

ಐಪಿಎಲ್ ಆವೃತ್ತಿ ಒಂದರಲ್ಲಿ ಇದೇ ಮೊದಲ ಬಾರಿಗೆ ಐವರು ಭಾರತೀಯರು ಶತಕ ಬಾರಿಸಿದ್ದಾರೆ. ವೆಂಕಟೇಶ್ ಅಯ್ಯರ್, ಯಶಸ್ವಿ ಜೈಸ್ವಾಲ್, ಸೂರ್ಯಕುಮಾರ್ ಪ್ರಭ್ ಸಿಮ್ರನ್, ಕೊಹ್ಲಿ ಶತಕ ಬಾರಿಸಿದವರು.

ವಿರಾಟ್ ಕೊಹ್ಲಿ ಮೂರನೇ ಬಾರಿಗೆ ಸಿಕ್ಸರ್ ನೊಂದಿಗೆ ಐಪಿಎಲ್ ಶತಕ ಪೂರೈಸಿದ್ದು ದಾಖಲೆಯಾಗಿದೆ. ಆಮ್ಲ ಎರಡು ಬಾರಿ ಈ ಸಾಧನೆ ಮಾಡಿದ್ದಾರೆ.

## ನಾಲ್ವರು ಯುವಕರಿಂದ ಮಹಿಳೆ ಮೇಲೆ ಹಲವು ಬಾರಿ ಸಾಮೂಹಿಕ ಅತ್ಯಾಚಾರ

ಬಾಗ್‌ಪತ್: ಉತ್ತರ ಪ್ರದೇಶದ ಬಾಗ್‌ಪತ್ ನಲ್ಲಿ 35 ವರ್ಷದ ಮಹಿಳೆಯೊಬ್ಬರ ಮೇಲೆ ಆಕೆಯ ಗ್ರಾಮದ ನಾಲ್ವರು ಯುವಕರು ಹಲವು ಬಾರಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಪೊಲೀಸರು ಶುಕ್ರವಾರ ತಿಳಿಸಿದ್ದಾರೆ.

ಸರ್ಕಾರಿ ನೌಕರಿ ಬಯಸುತ್ತಿದ್ದ ಸಂತ್ರಸ್ತ ಮಹಿಳೆಗೆ ಆರೋಪಿಗಳು ಸಹಾಯ ಮಾಡುವ ಭರವಸೆ ನೀಡಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಅವರು ಹೇಳಿದ್ದಾರೆ.

ಫೆಬ್ರವರಿ 14 ರಂದು ಸರ್ಕಾರಿ



ಉದ್ಯೋಗದ ಭರವಸೆ ನೀಡಿದ ಹತ್ತು ದಿನಗಳ ನಂತರ, ಆರೋಪಿಗಳಾದ ಸೌರಭ್, ಕಮಲ್, ಶುಭಂ ಮತ್ತು ಸಾಗರ್ ಎಂಬ ನಾಲ್ವರು ನನ್ನ ಮನೆಗೆ ಬಂದು ಮಾದಕ ದ್ರವ್ಯ ಬೆರೆಸಿದ ತಂಪು ಪಾನೀಯ ಕುಡಿಸಿ, ಅತ್ಯಾಚಾರ ಎಸಗಿದ್ದಾರೆ ಎಂದು ವಿಚ್ಛೇದಿತ ಮಹಿಳೆ ತನ್ನ ದೂರಿನಲ್ಲಿ ತಿಳಿಸಿರುವುದಾಗಿ ಪೊಲೀಸರು ಹೇಳಿದ್ದಾರೆ.

ಪ್ರಜ್ಞಾಹೀನಳಾಗಿದ್ದ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ ಇಡೀ ಘಟನೆಯನ್ನು ಯುವಕರು ಚಿತ್ರೀಕ–ರಿಸಿದ್ದಾರೆ. ನಂತರ ಘಟನೆಯ ಬಗ್ಗೆ ಯಾರಿಗಾದರೂ ಹೇಳಿದರೆ ವೀಡಿಯೊ ಬಹಿರಂಗಪಡಿಸುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಆಕೆಯ ಪರಿಸ್ಥಿತಿಯನ್ನು ಬಳಸಿಕೊಂಡ ಯುವಕರು ಮಹಿಳೆ ಮೇಲೆ ಹಲವು ಬಾರಿ ಅತ್ಯಾಚಾರ ಎಸಗಿದ್ದಾರೆ ಮತ್ತು ಮಹಿಳೆ ವಿರೋಧಿಸಿದಾಗಲೆಲ್ಲಾ ಆಕೆಯ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಹಿಳೆಯ ದೂರಿನ ಆಧಾರ ದ ಮೇಲೆ ಪೊಲೀಸರು ಆರೋಪಿಗಳ ವಿರುದ್ಧ ಗುರುವಾರ ಪ್ರಕರಣ ದಾಖಲಿಸಿ ಕೊಂಡಿದ್ದಾರೆ. ಆರೋಪಿಗಳು ಎಲ್ಲರೂ 20 ರಿಂದ 26 ವರ್ಷ ವಯಸ್ಸಿನವರಾಗಿದ್ದಾರೆ ಎಂದು ಅವರು ಹೇಳಿದ್ದಾರೆ.

## ಅವಧಿ ವಿಸ್ತರಣೆ

ಮಂಗಳೂರು: ಇಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ನಲ್ಲಿ 2023–24ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಕೋರ್ಸ್ಗಳಿಗೆ ಮೆರಿಟ್ ಆಧಾರಿತ ಆನ್ಲೈನ್ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸಲ್ಲಿಸುವ ಅವಧಿಯನ್ನು ಮೇ.22ರ ವರೆಗೆ ವಿಸ್ತ–ರಿಸಲಾಗಿದೆ.

ಇಲಾಖೆಯ ಅಧಿಕೃತ ವೆಬ್ಸೈಟ್ಗಳಿಂದ ಅರ್ಜಿ ಡೌನ್ಲೋಡ್ ಮಾಡಿಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಮೇ.22ರೊಳಗೆ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಬೇಕು.

ಮೇ.23ರಂದು ಅಂತಿಮ ಮೆರಿಟ್ ಪಟ್ಟಿ ಪ್ರಕಟಣೆ ದಿನ, ಮೇ.24ರಂದು ಸೀಟು ಹಂಚಿಕೆಯ ಪ್ರಕಟಣೆಯ ದಿನ, ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ನಿಗದಿತ ಶುಲ್ಕದೊಂದಿಗೆ ಪ್ರವೇಶ ಪಡೆಯಲು ಮೇ.27ರಂದು ಕೊನೆಯ ದಿನ. ಸೀಟುಗಳು ಭರ್ತಿಯಾಗದೇ ಉಳಿಕೆಯಾಗಿದ್ದಲ್ಲಿ ಅಂತಹ ಸೀಟುಗಳನ್ನು ಮೊದಲು ಬಂದವರಿಗೆ ಮೊದಲ ಆದ್ಯತೆಯ ಮೇಲೆ ಪ್ರಾಂಶುಪಾಲರ ಹಂತದಲ್ಲಿಯೇ ಆಫ್–ಲೈನ್ ಮೂಲಕ ಮೇ.29ರಿಂದ ಜೂನ್ 6ರವರೆಗೆ ಹಂಚಿಕೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ಇಲಾಖೆಯ ಅಧಿಕೃತ ವೆಬ್ಸೈಟ್ ತಿತಿತಿ.ಜಣಜಇ.ಇಚಿಡಿ.ಟಿಥಿ.ಟಿ ಅಥವಾ ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್ ಮಂಗಳೂರು ಕಚೇರಿಯ ದೂರವಾಣಿ ಸಂಖ್ಯೆ: 0824–2211636, 3500437 ಅನ್ನು ಸಂಪರ್ಕಿಸಬಹುದು ಎಂದು ಪಾಲಿಟೆಕ್ನಿಕ್ನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನಿಂದ ಬೇಸಿಗೆ ಶಿಬಿರ ಆರಂಭ

ಮಂಗಳೂರು: ಶಿಶು ಅಭಿವೃದ್ಧಿ ಯೋಜನೆಯ ಮಂಗಳೂರು ಗ್ರಾಮಾಂತರ ವ್ಯಾಪ್ತಿಗೊಳಪಟ್ಟ 5 ರಿಂದ 16 ವರ್ಷದವರೆಗಿನ ಮಕ್ಕಳಿಗೆಫ ಉಳ್ಳಾಲ ತಾಲೂಕಿನ ಕುತ್ತಾರು ಪದವಿನ ದುರ್ಗಾ ವಾಹಿನಿ ಮಹಿಳಾ ಮಂಡಲದ ಆವರಣದಲ್ಲಿ ಮೇ.20ರಿಂದ 27ರವರೆಗೆ ಬೇಸಿಗೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ಚಿತ್ರಕಲೆ, ಕರಕುಶಲ, ಜೇಡಿ ಮಣ್ಣಿನ ಕಲೆ, ಸಮೂಹ ನೃತ್ಯ, ಸಮೂಹ ಗೀತೆ, ಯೋಗ ಮತ್ತು ಇತರ ಚಟುವಟಿಕೆಗಳ ತರಬೇತಿ ನೀಡಲಾಗುತ್ತದೆ.

ಆಸಕ್ತ ಮಕ್ಕಳ ಪೋಷಕರು ನಿಗದಿತ ನಮೂನೆಯಲ್ಲಿ ಅರ್ಜಿ ಹಾಗೂ ಜನ್ಮದಿನದ ದಾಖಲೆಯೊಂದಿಗೆ ಮೇ.20ರಂದು ಕುತ್ತಾರು ಪದವಿನ ದುರ್ಗಾವಾಹಿನಿ ಮಹಿಳಾ ಮಂಡಲದಲ್ಲಿ ನೇರವಾಗಿ ಸಲ್ಲಿಸುವಂತೆ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನಿಂದ ಸಿಇಟಿ ಪರೀಕ್ಷೆ: ಜಿಲ್ಲಾಡಳಿತದಿಂದ ಅಗತ್ಯ ಸಿದ್ಧತೆ

ಮಂಗಳೂರು: ಕರ್ನಾಟಕಥ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ಮೇ.20 ಹಾಗೂ 21ರಂದು ನಡೆಯಲಿರುವ ಸಿಇಟಿ ಪರೀಕ್ಷೆಗೆ ಜಿಲ್ಲೆಯಲ್ಲಿ ಸಕಲ ಸಿದ್ದತೆ ಮಾಡಿಕೊಳ್ಳಲಾಗಿದೆ. ಒಟ್ಟು 28 ಪರೀಕ್ಷಾ ಕೇಂದ್ರಗಳಲ್ಲಿ 16,113 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

ಬೆಳ್ತಂಗಡಿ ತಾಲೂಕಿನ 5 ಪರೀಕ್ಷಾ ಕೇಂದ್ರಗಳಲ್ಲಿ ಒಟ್ಟು 2,320 ವಿದ್ಯಾರ್ಥಿಗಳು, ಮಂಗಳೂರು ತಾಲೂಕಿನ 14 ಪರೀಕ್ಷಾ ಕೇಂದ್ರಗಳಲ್ಲಿ 6,892, ಮೂಡಬಿದ್ರೆ ತಾಲೂಕಿನ 6 ಪರೀಕ್ಷಾ ಕೇಂದ್ರಗಳಲ್ಲಿ 4,296 ಹಾಗೂ ಪುತ್ತೂರು ತಾಲೂಕಿನ 3 ಪರೀಕ್ಷಾ ಕೇಂದ್ರಗಳಲ್ಲಿ 2,605 ವಿದ್ಯಾರ್ಥಿಗಳು ಸಿಇಟಿ ಪರೀಕ್ಷೆ ಎದುರಿಸಲಿದ್ದು, ಪರೀಕ್ಷೆ ಸುಸೂತ್ರವಾಗಿ ನಡೆಸಲು ಎಲ್ಲಾ ರೀತಿಯ ಅಗತ್ಯ ಸಿದ್ದತೆಗಳನ್ನು ಜಿಲ್ಲಾಡಳಿತದಿಂದ ಮಾಡಿಕೊಳ್ಳಲಾಗಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನಿಂದ "ನನ್ನ ಲೈಫ್, ನನ್ನ ಸ್ವಚ್ಛ ನಗರ ಯೋಜನೆ" ಆರಂಭ

ಮಂಗಳೂರು: ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ಸ್ವಚ್ಛ ಭಾರತ ಮಿಷನ್ ನಗರ 2.0 ಯೋಜನೆಯಡಿ ಸ್ಥಳೀಯ ಮಟ್ಟದಲ್ಲಿ ಅತ್ಯಂತ ಪರಿಣಾಮ ಬೀರುವ ಅಭಿಯಾನ ಆರಂಭಿಸಿದೆ.

ನವೀಕರಿಸಿ ಮರು ಬಳಸಬಹುದಾದಂತಹ ವಸ್ತುಗಳ ಉತ್ಪಾದನೆಯನ್ನು ಕಡಿಮೆಗೊಳಿಸಲು ಹಾಗೂ ಸುಸ್ಥಿರ ಜೀವನ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಪರಿಸರವನ್ನು ರಕ್ಷಿಸುವ ಪ್ರಮುಖ ಉದ್ದೇಶದಿಂದ "ನನ್ನ ಲೈಫ್ ನನ್ನ ಸ್ವಚ್ಛ ನಗರ ಯೋಜನೆ" ಕಾರ್ಯಕ್ರಮದಡಿ ಕಡಿಮೆಗೊಳಿಸುವುದು, ಮರುಬಳಕೆ ಮತ್ತು ಪುನರ್ ಬಳಕೆ ಕೇಂದ್ರಗಳನ್ನು ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗಳಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಒಣ ತ್ಯಾಜ್ಯ ಸಂಗ್ರಹಣಾ ಕೇಂದ್ರ ಅಥವಾ ಗುರುತಿಸಲಾದ ಮೆಟೀರಿಯಲ್ ರಿಕವರಿ ಫೆಸಿಲಿಟಿ (ಎಂಆರ್‌ಎಫ್) ಗಳಲ್ಲಿ ಹಾಗೂ ನಗರದ ಪ್ರಮುಖ ಸ್ಥಳಗಳಲ್ಲಿ ಬಳಸಿದ ಹಳೆ ವಸ್ತುಗಳನ್ನು ಮರು ಪಡೆಯುವ ಸೌಲಭ್ಯ ಕೇಂದ್ರಗಳನ್ನು ಕಡಿಮೆಗೊಳಿಸುವುದು, ಮರುಬಳಕೆ ಮತ್ತು ಪುನರ್ ಬಳಕೆ ಕೇಂದ್ರಗಳನ್ನು ಬಳಸಿ ನನ್ನ ಲೈಫ್ ನನ್ನ ಸ್ವಚ್ಛ ನಗರ ಯೋಜನೆಯನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಲು ಮಂಗಳೂರು ಮಹಾನಗರ ಪಾಲಿಕೆ ತೀರ್ಮಾನಿಸಿದೆ.

ಅದರ ಹಿನ್ನಲೆಯಲ್ಲಿ ಇದೇ ಮೇ.20ರಿಂದ ಜೂನ್ 5ರ ವರೆಗೆ ನಗರದ ಹಲವೆಡೆ ಹಳೆ ವಸ್ತುಗಳನ್ನು ಮರು ಪಡೆಯುವ ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಲಾಗಿದೆ.

ಕೇಂದ್ರಗಳ ವಿವರ:

ಮಂಗಳೂರು ಮಹಾನಗರ ಪಾಲಿಕೆಯ ಸುರತ್ಕಲ್ ವಲಯ ಕಚೇರಿ, ಲಾಲ್ ಭಾಗ್ನಲ್ಲಿರುವ ಮಂಗಳೂರು ಮಹಾನಗರ ಪಾಲಿಕೆಯ ಕೇಂದ್ರ ಕಚೇರಿ, ಮಂಗಳೂರು ಮಹಾನಗರ ಪಾಲಿಕೆಯ ಮಣ್ಣಗುಡ್ಡ ಹಾಗೂ ವೆಲೆನ್ಸಿಯಾ ವಾರ್ಡ್ ಕಚೇರಿ, ಕಾವೂರು ಮಾರುಕಟ್ಟೆ, ಹಂಪನಕಟ್ಟೆಯ ಕುದ್ಮಲ್ ರಂಗರಾವ್ ಪುರಭವನ ಹಾಗೂ ಸುರತ್ಕಲ್ನ ಮಾಧವನಗರ, ಜಜಾಲ್ ಹಾಗೂ ಕಾವೂರಿನ ಒಣ ತ್ಯಾಜ್ಯ ಸಂಗ್ರಹ ಕೇಂದ್ರ, ತಣ್ಣೀರುಬಾವಿ ಬೀಚ್ನಲ್ಲಿ ಮರು ಬಳಕೆ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಸಾರ್ವಜನಿಕರು ಈ ಕೇಂದ್ರಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಪ್ಲಾಸ್ಟಿಕ್ ಕ್ಯಾರಿಬ್ಯಾಗ್ ಸೇರಿದಂತೆ ಹಳೆಯ ಆಟಿಕೆ ವಸ್ತುಗಳನ್ನು, ಬಳಸಿದ ಬಟ್ಟೆ ಹಾಗೂ ಚಪ್ಪಲಿಗಳು, ದಿನಪತ್ರಿಕೆಗಳನ್ನು, ಹಳೆಯ ಪುಸ್ತಕಗಳು ಹಾಗೂ ಎಲೆಕ್ಟ್ರಾನಿಕ್ ವಸ್ತುಗಳಂತಹ ವಿವಿಧ ಬಗೆಯ ನವೀಕರಿಸಿ ಮರುಬಳಸಬಹುದಾದ ವಸ್ತುಗಳನ್ನು ಈ ಕೇಂದ್ರಗಳಿಗೆ ನೀಡಿ ಕಾರ್ಯಕ್ರಮದ ಉಪಯೋಗ ಪಡೆಯುವಂತೆ ಹಾಗೂ ಸುಸ್ಥಿರ ಜೀವನ ಪದ್ದತಿಳನ್ನು ಅಳವಡಿಸಿಕೊಳ್ಳುವ ಮೂಲಕ ಪರಿಸರವನ್ನು ರಕ್ಷಿಸುವ ಪ್ರಮುಖ ಉದ್ದೇಶವನ್ನು ಮನಗಂಡು ಮಂಗಳೂರು ಮಹಾನಗರ ಪಾಲಿಕೆಯೊಂದಿಗೆ ಸಹಕರಿಸುವಂತೆ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ಶಿಕ್ಷಣ ಕ್ಷೇತ್ರಕ್ಕೆ ನ್ಯಾಷನಲ್ ಕಾಲೇಜಿನ ಕೊಡುಗೆ ಅಪಾರ: ಅನಂತ್ ಕುಲಕರ್ಣಿ



ಬೆಂಗಳೂರು: ರಾಜ್ಯದ ಶಿಕ್ಷಣ ಕ್ಷೇತ್ರಕ್ಕೆ ನ್ಯಾಷನಲ್ ಕಾಲೇಜಿನ ಕೊಡುಗೆ ಅಪಾರ. ನ್ಯಾಷನಲ್ ಕಾಲೇಜಿನ ವೈಭವವನ್ನು ಮತ್ತಷ್ಟು ಹೆಚ್ಚಿಸಲು ಹಲವು ಯೋಜನೆಗಳನ್ನು ಹಮ್ಮಿಕೊಂಡಿದ್ದು, ವಿದ್ಯಾರ್ಥಿಗಳು ಹೆಚ್ಚಿನ ಅಂಕ ಮತ್ತು ಜ್ಞಾನ ಪಡೆಯುವತ್ತ ಗಮನ ಹರಿಸಬೇಕು ಎಂದು ಬೇಸ್ ಎಜುಕೇಶನಲ್ ಸೊಸೈಟಿಯ ಸಿಇಓ ಅನಂತ ಕುಲಕರ್ಣಿ ಕರೆ ನೀಡಿದರು.

ಜಯನಗರದ ನ್ಯಾಷನಲ್ ಕಾಲೇಜಿನ ಪಿಯು ಆಡಳಿತ ವಿಭಾಗ ಮತ್ತು ನೂತನ ವೆಬ್‌ಸೈಟ್ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು, ಎಚ್ ಎನ್ ನರಸಿಂಹಯ್ಯ ಅವರ ಮುಂದಾಳತ್ವದಲ್ಲಿ ನ್ಯಾಷನಲ್ ಕಾಲೇಜು ರಾಜ್ಯದ ಶಿಕ್ಷಣ ಕ್ಷೇತ್ರಕ್ಕೆ ಕೊಡುಗೆಯನ್ನು ನೀಡಿದೆ. ಕಾಲೇಜಿನ ಆಡಳಿತ ಮಂಡಳಿ ಕಾಲೇಜಿನ ವೈಭವವನ್ನು ಮತ್ತಷ್ಟು ಹೆಚ್ಚಿಸಲು ಹಾಗೂ ಕಾಲೇಜಿನ ಅಭಿವೃದ್ದಿಗೆ ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿರುವುದನ್ನ ಕಂಡು ಸಂತಸವಾಯಿತು. ವಿದ್ಯಾರ್ಥಿಗಳು ಇಲ್ಲಿರುವ ಅತ್ಯಾಧುನಿಕ ಸೌಲಭ್ಯಗಳನ್ನ ಉಪಯೋಗಿಸಿಕೊಂಡು ಹೆಚ್ಚಿನ ಅಂಕಗಳನ್ನು ಮತ್ತು ಜ್ಞಾನಾರ್ಜನೆಯನ್ನ ಪಡೆದುಕೊಳ್ಳುವತ್ತ ಗಮನ ಹರಿಸಬೇಕು ಎಂದು ಕರೆ ನೀಡಿದರು.

ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕದ ಅಧ್ಯಕ್ಷರಾದ ಡಾ. ಎಚ್.ಎನ್. ಸುಬ್ರಹ್ಮಣ್ಯ ಮಾತನಾಡಿ, ಶಿಥಿಲಾವಸ್ಥೆಯಲ್ಲಿದ್ದ ನ್ಯಾಷನಲ್ ಕಾಲೇಜಿನ ಕಟ್ಟಡಗಳನ್ನು ದುರಸ್ಥಿಗೊಳಿಸುವ ಮೂಲಕ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲಾಗಿದೆ. ಕಲಾ ಮಂದಿರದಲ್ಲಿ ವಿಶ್ವಮಟ್ಟದ ನೂತನ ಸಭಾಭವನ ನಿರ್ಮಾಣದ ಕಾರ್ಯವನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದರು.

ನ್ಯಾಷನಲ್ ಎಜುಕೇಷನ್ ಸೊಸೈಟಿ ಆಫ್ ಕರ್ನಾಟಕ ಕಾರ್ಯದರ್ಶಿಗಳಾದ ವೆಂಕಟಶಿವಾ ರೆಡ್ಡಿ ಅವರು ಮಾತನಾಡಿ, ನ್ಯಾಷನಲ್ ಕಾಲೇಜ್‌ನ ವೈಭವವನ್ನು ಮತ್ತಷ್ಟು ಹೆಚ್ಚಿಸಲು ಹಲವು ಯೋಜನೆಗಳನ್ನು ಹಮ್ಮಿಕೊಳ್ಳುವ ಮೂಲಕ ಎಚ್.ಎಂ ನರಸಿಂಹಯ್ಯ ಅವರ ಹೆಸರನ್ನು ಸ್ಥಿರಸ್ಥಾಯಿಯಾಗಿ ಉಳಿಸಲಾಗುವುದೆಂದರು. ಮಕ್ಕಳಿಗೆ ಅತ್ಯುತ್ತಮ ಶಿಕ್ಷಣ ನೀಡಲು ಅತ್ಯುತ್ತಮ ಶಿಕ್ಷಕರನ್ನು ನೇಮಿಸಲಾಗಿದ್ದು, ಸಿಇಟಿ ತರಬೇತಿ ಸೇರಿದಂತೆ ವೃತ್ತಿಪರ ಕೋರ್ಸ್‌ಗಳನ್ನು ಶೀಘ್ರದಲ್ಲೇ ಆರಂಭಿಸಲಾಗುವುದು ಹಾಗೂ ಮುಂದಿನ ದಿನಗಳಲ್ಲಿ ಇಂಜಿನೀಯರಿಂಗ್ ಕಾಲೇಜ್ ಸ್ಥಾಪಿಸುವ ಉದ್ದೇಶ ಹೊಂದಿದ್ದೇವೆ ತಿಳಿಸಿದರು. ಉತ್ತಮ ಸೌಲಭ್ಯಗಳನ್ನು ಹೊಂದಿರುವ ಬಸವನಗುಡಿ ಮತ್ತು ಜಯನಗರದ ನ್ಯಾಷನಲ್ ಕಾಲೇಜಿನ ಪದವಿ ಪೂರ್ವ ವಿಭಾಗಕ್ಕೆ ಮೂಲಸೌಕರ್ಯಗಳನ್ನು ಒದಗಿಸಲು ನಾವು ಬದ್ಧರಾಗಿದ್ದೇವೆ ಇದನ್ನು ವಿದ್ಯಾರ್ಥಿಗಳನ್ನು ಸದ್ಬಳಕೆ ಮಾಡಿಕೊಂಡು ಅತ್ಯುತ್ತಮ ಫಲಿತಾಂಶ ನೀಡಬೇಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿಗಳಾದ ಅರುಣ್‌ಕುಮಾರ್, ಜಂಟಿ ಕಾರ್ಯದರ್ಶಿಗಳಾದ ಸುಧಾಕರ್ ಇಸ್ತೂರಿ, ಖಜಾಂಚಿಯಾದ ತಲ್ಲಂ ಆರ್. ದ್ವಾರಕನಾಥ್ ಕಾಲೇಜ್‌ನ ಅಧ್ಯಕ್ಷರಾದ ಡಾ. ಪಿ.ಎಲ್ ವೆಂಕಟರಮಣರೆಡ್ಡಿ, ಪ್ರಾಂಶುಪಾಲರಾದ ಮಮತಾ .ಎಸ್ ಸೇರಿದಂತೆ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

## ಅಂಬೇಡ್ಕರ್ ವಿರುದ್ಧ ನಾಲಿಗೆ ಹರಿಬಿಟ್ಟ ಯುವತಿ: ಅರೆಸ್ಟ್



ತುಮಕೂರು: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ವಿರುದ್ಧ ನಾಲಿಗೆ ಹರಿಬಿಟ್ಟಿದ್ದ ಯುವತಿಯನ್ನು ತುಮಕೂರು ಪೊಲೀಸರು ಬಂಧಿಸಿದ್ದಾರೆ.


ವೇದಾವತಿ (22) ಬಂಧಿತ ಯುವತಿ. ಈಕೆ ಕ್ಯಾತಸಂದ್ರ ಸಮೀಪದ ಕಲ್ಲಹಳ್ಳಿ ಗ್ರಾಮದ ನಿವಾಸಿ. ನನಗೆ ಅನ್ಯಾಯವಾಗಿದೆ. ಇದಕ್ಕೆ ಅಂಬೇಡ್ಕರ್ ಅವರು ರಚಿಸಿರುವ ಸಂವಿಧಾನ ಕಾರಣ ಎನ್ನುತ್ತಾ ಅವಾಚ್ಯ ಶಬ್ದಗಳಿಂದ ಅಂಬೇಡ್ಕರ್ ಅವರನ್ನು ನಿಂದಿಸಿ, ವಿಡಿಯೋ ಹರಿಬಿಟ್ಟಿದ್ದಳು.

ವಿಡಿಯೋ ವೈರಲ್ ಆದ ಬಳಿಕ ವೇದಾವತಿ ವಿರುದ್ಧ ಎನ್.ಇ.ಪಿ.ಎಸ್ ಪೊಲೀಸ್ ಠಾಣೆಗೆ ಶ್ರೀನಿವಾಸ್ ಎಂಬುವರು ದೂರು ನೀಡಿದ್ದರು. ಇದರ ಆಧಾರದ ಮೇಲೆ ವೇದಾವತಿಯನ್ನು ಬಂಧಿಸಲಾಗಿದೆ. ಪಿಟಿ ಮೇಷ್ಟ್ರು ಮೇಲಿನ ದ್ವೇಷಕ್ಕೆ ಅಂಬೇಡ್ಕರ್‌ರನ್ನು ನಿಂದನೆ ಮಾಡಿರುವುದು ವಿಚಾರಣೆ ವೇಳೆ ಬೆಳಕಿಗೆ ಬಂದಿದೆ.

ಕೈಕೊಟ್ಟ ಪಿಟಿ ಮೇಷ್ಟ್ರು: 9ನೇ ತರಗತಿ ಓದುತ್ತಿದ್ದಾಗ ವೇದಾವತಿ ತನ್ನ ಶಾಲೆಯ ದೈಹಿಕ ಶಿಕ್ಷಕನನ್ನು ಪ್ರೀತಿ ಮಾಡುತ್ತಿದ್ದಳು. ಆದರೆ, ದೈಹಿಕ ಶಿಕ್ಷಕ ವಂಚನೆ ಮಾಡಿದ್ದಾನೆ ಎಂದು ಆರೋಪಿಸಿದ್ದಾಳೆ. ಈ ಸಂಬಂಧ ವೇದಾವತಿ ತುಮಕೂರು ಮಹಿಳಾ ಠಾಣೆಗೆ ದೂರು ನೀಡಿದ್ದಳು. ಬಳಿಕ ಈ ಪ್ರಕರಣ ನ್ಯಾಯಾಲಯದ ಮೆಟ್ಟಿಲೇರಿತ್ತು. ಆದರೆ, ನ್ಯಾಯಾಲಯದಲ್ಲಿ ದಾಖಲೆ ಹಾಗೂ ಸಾಕ್ಷಿ ಕೇಳಲಾಗಿತ್ತು.

ವಿಡಿಯೋ ವೈರಲ್: ಸಾಕ್ಷಿ ಕೇಳಿದ್ದರಿಂದ ಬೇಸತ್ತ ವೇದಾವತಿ ಸಂವಿಧಾನ ಬರೆದ ಡಾ. ಬಿ.ಆರ್ ಅಂಬೇಡ್ಕರ್ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ವಿಡಿಯೋ ಹರಿಬಿಟ್ಟಿದ್ದಳು. ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ವೈರಲ್ ಆದ ಬಳಿಕ ಶ್ರೀನಿವಾಸ್ ಎಂಬುವರು ನೀಡಿದ ದೂರಿನ ಆಧಾರದ ಮೇಲೆ ವೇದಾವತಿಯನ್ನು ಬಂಧಿಸಲಾಗಿದೆ.

## ಕಾಲುವೆಗೆ ನೀರು ಬಿಡುವಂತೆ ರೈತರ ಒತ್ತಾಯ



ಬೆಳಗಾವಿ: ಬಿಸಿಲು ಹೆಚ್ಚಾಗಿರುವ ಕಾರಣ ಘಟಪ್ರಭಾ ಎಡದಂಡೆ ಮತ್ತು ಬಲದಂಡೆ ಕಾಲುವೆಗೆ ನೀರು ಹರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜೇರಿ ಸೇ–ರಿದಂತೆ ನೂರಾರು ರೈತರು ಜಿಲ್ಲಾ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಬೇಸಿಗೆಯ ತಾಪಮಾನ ಹೆಚ್ಚಾದ ಕಾರಣ ಹಳ್ಳ ಬೋರ್ ವೆಲ್ಲ ಗಲ್ಲಿ ನೀರು ಕಡಿಮೆಯಾಗಿವೆ ಹೀಗಾಗಿ ದನ ಕರುಗಳಿಗೆ ಕುಡಿಯಲು ನೀರಿಲ್ಲದ ಪರಿಸ್ಥಿತಿ ಬಂದೊದಗಿದೆ ಹಾಗಾಗಿ ಬೆಳಗಾವಿ ಜಿಲ್ಲೆಯ ಗೋಕಾಕ್, ರಾಯಬಾಗ, ಜಮಖಂಡಿ,ಮೂಡಲಾಗಿ ತಾಲೂಕಿನ ಗ್ರಾಮಗಳಿಗೆ 20 ದಿನಗಳ ಕಾಲ ತತ್ ಕ್ಷಣ ನೀರು ಪೂರೈಸುವ ಕುರಿತು ಈಗಾಗಲೇ ಪ್ರಾದೇಶಿಕ ಆಯುಕ್ತರು ನೀರಾವರಿ ಮುಖ್ಯ ಆಯುಕ್ತರು ಹಾಗೂ ಜಿಲ್ಲಾಧಿಕಾ–ರಿಗಳಿಗೆ ಈಗಾಗಲೇ ಮನವಿ ಸಲ್ಲಿಸಿದ್ದೆ ಅದೇರೀತಿ ಸೋಮವಾರ ದಿನ ನೀರು ಬಿಡುವುದಾಗಿ ಭರವಸೆ ನೀಡಿದ್ದಾರೆ.ಬಿಡದೆ ಇದ್ದ ಪಕ್ಷದಲ್ಲಿ ಸಾವಿರಾರು ರೈತರು ಸಮ್ಮುಖದಲ್ಲಿ ರಾಷ್ಟ್ರೀಯ ಹೆದ್ದಾರಿಗಳನ್ನು ತಡೆದು ಪ್ರತಿಭಟನೆ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಇನ್ನು ಮನವಿ ಸಲ್ಲಿಸುವ ವೇಳೆ ರೈತ ಸಂಘದ ರಾಜ್ಯಾಧ್ಯಕ್ಷ ಚೂನಪ್ಪ ಪೂಜೆರಿ ನೇತೃತ್ವದಲ್ಲಿ ಜಿಲ್ಲೆಯ ವಿವಿಧ ತಾಲೂಕ ರೈತ ಮುಖಂಡರುಹಾಗೂ ನೂರಾರು ರೈತರು ಭಾಗಿಯಾಗಿದ್ದರು.

## ಬೆಂಕಿ ತಗುಲಿ ಟ್ರ್ಯಾಕ್ಟರ್ ಭಸ್ಮ



ಹುಳಿಯಾರು: ಹೊಲದ ಬದುವಿನ ಬೇಲಿಗೆ ಇಟ್ಟಿದ್ದ ಬೆಂಕಿ ತಗುಲಿ ಟ್ರ್ಯಾಕ್ಟರ್ ಸುಟ್ಟು ಭಸ್ಮವಾದ ಘಟನೆ ಹುಳಿಯಾರು ಹೋಬಳಿಯ ಯಳನಾಡು ಪಂಚಾಯ್ತಿಯ ಮರಾಠಿಪಾಳ್ಯದಲ್ಲಿ ಶುಕ್ರವಾರ ಬೆಳಗ್ಗೆ ಜರುಗಿದೆ.

ಬೆಂಕಿಯ ಕೆನ್ನಾಲಿಗೆಗೆ ಭಸ್ಮಾವಾದ ಟ್ರ್ಯಾಕ್ಟರ್ ಯಳನಾಡು ಗ್ರಾಮದ ಮ–ರಿಯಪ್ಪ ಅವರಿಗೆ ಸೇರಿದ್ದಾಗಿದೆ. ಇವರು ಮರಾಠಿಪಾಳ್ಯದ ತಮ್ಮ ಜಮೀನಿನಲ್ಲಿ ಟ್ರ್ಯಾಕ್ಟರ್ ಮೂಲಕ ಹುಕ್ಕೆ ಹೊಡೆಯುತ್ತಿದ್ದರು. ಡಿಸೆಲ್ ಖಾಲಿಯಾದ ಪರಿಣಾಮ ಟ್ರ್ಯಾಕ್ಟರ್ ಹೊಲದಲ್ಲೇ ನಿಲ್ಲಿಸಿ ಡಿಸೆಲ್ ತರಲು ಹೊಸಹಳ್ಳಿ ಕೈಮರದ ಪೆಟ್ರೋಲ್ ಬಂಕ್‌ಗೆ ಬಂದಿದ್ದಾರೆ.

ಅಷ್ಟರಲ್ಲಿ ಹೊಲದ ಬದುವಿನ ಬೇಲಿಗೆ ಇಟ್ಟಿದ್ದ ಬೆಂಕಿ ಟ್ರ್ಯಾಕ್ಟರ್ ಟೈರ್‌ಗೆ ತಗುಲಿ ಬೆಂಕಿ ಹೊತ್ತಿಕೊಂಡಿದೆ. ಬಂಕ್‌ನಿಂದ ಡಿಸೆಲ್ ತೆಗೆದುಕೊಂಡು ಹೋಗುವಷ್ಟರಲ್ಲಿ ಟ್ರ್ಯಾಕ್ಟರ್‌ನ ಎರಡೂ ಟೈರ್, ಸ್ಟೇರಿಂಗ್, ಸೀಟು ಸುಟ್ಟು ಕರಕಲಾಗಿದೆ.

ಮರಿಯಪ್ಪ ಕೂಗಿಕೊಂಡಾಗ ಅಕ್ಕಪಕ್ಕದ ಜಮೀನಿನವರು ಓಡೋಡಿ ಬಂದು ಬಿಂದಿಗೆಯ ಮೂಲಕ ನೀರು ಹಾಕಿ ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ.

## ಸಿದ್ದರಾಮಯ್ಯ ಸಿಎಂ ಘೋಷಣೆ ಖುಷಿಯಲ್ಲಿ ಭರ್ಜರಿ ಡ್ಯಾನ್ಸ್ ಮಾಡಿದ 75ರ ಅಜ್ಜ



ಬೀದರ್: ಸಿದ್ದರಾಮಯ್ಯ ಸಿಎಂ ಎಂದು ಕಾಂಗ್ರೆಸ್ ಹೈಕಮಾಂಡ್ ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ಕೈಯಲ್ಲಿ ಕೋಲು ಹಿಡಿದು ಗಡಿ ಜಿಲ್ಲೆ ಬೀದರ್‌ನಲ್ಲಿ 75 ವರ್ಷದ ಅಜ್ಜ ಭರ್ಜರಿ ಡ್ಯಾನ್ಸ್ ಮಾಡಿದ್ದಾರೆ.

ಸಿದ್ದರಾಮಯ್ಯ ಹಾಗೂ ಡಿಕೆ ಶಿವಕುಮಾರ್ ನಡುವೆ ಸಿಎಂ ಸ್ಥಾನಕ್ಕಾಗಿ ಜಟಾಪಟಿ ನಡೆಯುತ್ತಿತ್ತು. ಕೊನೆಗೂ ಸಿದ್ದರಾಮಯ್ಯ ಸಿಎಂ ಎಂದು ಕಾಂಗ್ರೆಸ್ ಹೈಕಮಾಂಡ್ ಘೋಷಣೆ ಮಾಡಿದೆ. ಇದರಿಂದ ಫುಲ್ ಖುಷಿಯಾದ ಬೀದರ್ ತಾಲೂಕಿನ ಮಲ್ಕಾಪೂರ್ ಗ್ರಾಮದ ಅಜ್ಜ ಡ್ಯಾನ್ಸ್ ಮಾಡಿ ಸಿದ್ದು ಮೇಲಿನ ಅಭಿಮಾನವನ್ನು ಮೆರೆದಿದ್ದಾರೆ.

ಸಿದ್ದರಾಮಯ್ಯ ಸಿಎಂ ಘೋಷಣೆ ಹಿನ್ನೆಲೆ ಕುರುಬ ಸಮಾಜದಿಂದ ಸಂಭ್ರಮಾಚರಣೆ ಮಾಡಲಾಗುತ್ತಿತ್ತು. ಈ ವೇಳೆ ಏಕಾಏಕಿ ಬಂದ ಅಜ್ಜ ಸಖತ್ ಸ್ಟೆಪ್ ಹಾಕಿದ್ದಾರೆ. ಬೀದರ್ ನಗರದ ಅಂಬೇಡ್ಕರ್ ವೃತದಲ್ಲಿ 75 ವರ್ಷದ ಅಜ್ಜ ಭರ್ಜರಿ ಡ್ಯಾನ್ಸ್ ಮಾಡುವ ವೀಡಿಯೋ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.


## ಅಪರಿಚಿತ ಮೃತ ವ್ಯಕ್ತಿಯ ಪತ್ತೆಗೆ ಕೋರಿಕೆ

ಮಂಗಳೂರು: ನಗರದ ಬಿಜೈ ಭಾರತ್ ಮಾಲ್ ಬಳಿ ಇರುವ ಸುರಭಿ ಲಾಡ್ಜ್ ಸಮೀಪ (ಸುಮಾರು 40–45 ವರ್ಷ) ಅಪರಿಚಿತ ವ್ಯಕಿಯೊಬ್ಬರು ಮಲಗಿದ್ದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಅವರನ್ನು ನಗರದ ವೆನ್ಲಾಕ್ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದಾಗ ಪರಿಶೀಲಿಸಿದ ವೈದ್ಯರು ಮೃತ ಪಟ್ಟಿರುವುದಾಗಿ ತಿಳಿಸಿರುತ್ತಾರೆ. ಈ ಬಗ್ಗೆ ನಗರದ ಉರ್ವಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

**ಚಹರೆ:** 4.10 ಅಡಿ ಎತ್ತರ, ಸಪೂರ ಶರೀರ, ಕೋಲು ಮುಖ, ಕಪ್ಪು ಮೈ ಬಣ್ಣ ಹಾಗೂ 2 ಇಂಚು ಕಪ್ಪು ಬಿಳಿ ಮಿಶ್ರಿತ ಕೂದಲು ಹೊಂದಿರುತ್ತಾರೆ. ಬೂದು ಬಣ್ಣದ ತುಂಬು ತೋಳಿನ ಶರ್ಟ್ ಹಾಗೂ ಗುಲಾಬಿ ಬಣ್ಣದ ಬರ್ಮುಡಾ ಧರಿಸಿರುತ್ತಾರೆ.

ಈ ವ್ಯಕ್ತಿಯ ವಾರಸುದಾರರು ಇದ್ದಲ್ಲಿ ಪೊಲೀಸ್ ಕಂಟ್ರೋಲ್ ರೂಮ್ ದೂ.ಸಂಖ್ಯೆ: 0824–2220500, 0824–222521, 9480802323 ಮೂಲಕ ಕರೆ ಮಾಡಿ ಸಂಪರ್ಕಿಸುವಂತೆ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಸಂಪುಟದಲ್ಲಿ ಬೆಂಗಳೂರಿನ ಶಾಸಕ ಡಾ. ಸುಧಾಕರರವರಿಗೆ ಸಚಿವ ಸ್ಥಾನ ನೀಡಿರಿ: ಜೈನ್ ಸಮಾಜದ ಬೇಡಿಕೆ



ಬೆಂಗಳೂರು: ಜೈನ ಸಮಾಜ ಹಾಗೂ ಕಾಂಗ್ರೆಸ್ ಪಕ್ಷದ ಅನುಣ್ಯ ಸಂಬಂಧವಿದೆ. ಶೇಡಬಾಳದ ಸುಪುತ್ರರು ಹಾಗೂ ಜೈನ್ ಸಮಾಜದ ರಾಷ್ಟ್ರಸಂತರಾದ ವಿದ್ಯಾನಂದ ಮುನಿ ಮಹಾರಾಜರು ದೇಶದ ಆಗೀಣ ಪ್ರಧಾನಿ ಇಂದಿರಾ ಗಾಂಧಿಯವರಿಗೆ ಪಕ್ಷ ಸಂಕಟದಲ್ಲಿದ್ದಾಗ ಹಸ್ತ ಚಿಹ್ನೆ ನೀಡಿದ್ದರು.

ಆಗಿಂದ ಈ ವರೆಗೆ ಜೈನ್ ಸಮಾಜವು ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಒಲವು ತೊರುತ್ತಿದೆ.

ಸಿದ್ದರಾಮಯ್ಯನವರ ನೇತೃತ್ವದಲ್ಲಿ ರಾಜ್ಯದ ಸಂಪುಟ ರಚನೆವಾಗುತ್ತಿದ್ದು, ಜೈನ್ ಸಮಾಜದ ಏಕೈಕ್ಯ ಶಾಸಕ ಡಿ. ಸುಧಾಕರ ಇವರು ಚುನಾಯಿತಗೊಂಡಿದ್ದು, ಇವರಿಗೆ ಸಂಪುಟದಲ್ಲಿ ಒಳ್ಳೆ ಸ್ಥಾನಮಾನ ನೀಡಿ ರಾಜ್ಯದಲ್ಲಿಯ ಜೈನ ಸಮಾಜ ಪರ ತಮ್ಮಲ್ಲಿರುವ ಆದರ ಭಾವನೆ ವ್ಯಕ್ತಮಾಡಿ–ರಿಯೆಂದು ಭಾರತೀಯ ಜೈನ ಸಂಘಟನೆಯ ಬೆಳಗಾವಿ ವಿಭಾಗದ ಅಧ್ಯಕ್ಷರಾದ ಅರುಣ ಯಲಗುದ್ರಿ ಕಾಗವಾಡದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯಲ್ಲಿ ಶುಕ್ರವಾರ ರಂದು ಮನವಿ ಮುಖಾಂತರ ಸಿದ್ದರಾಮಯ್ಯನವರಿಗೆ ಕೇಳಿಕೊಂಡಿದ್ದಾರೆ.

ಭಾರತದಲ್ಲಿ 94% ಸುಶಿಕ್ಷಿತ, ಅಹಿಂಸಾವಾದಿ, ಸಹನಶೀಲ ಜೈನ ಸಮಾಜದ ಏಕೈಕ ಶಾಸಕರಾದ ಡಿ. ಸುಧಾಕರ ಅವರು ಆಯ್ಕೆಯಾಗಿದ್ದಾರೆ. ಈ ಹಿಂದಿನ ಮುಖ್ಯಮಂತ್ರಿಗಳಾದ ದೇವರಾಜ ಅರಸು, ಆರ್. ಗುಂಡೂರಾವ್, ವೀರೇಂದ್ರ ಪಾಟೀಲ, ಎಸ್. ಬಂಗಾರೆಪ್ಪ, ವೀರಪ್ಪ ಮೊಯ್ಲಿ, ಎಸ್ ಎಂ ಕೃಷ್ಣ, ಧರ್ಮಸಿಂಗ್ ಹಾಗೂ ಸಿದ್ದರಾಮಯ್ಯ ಅವರು ತಮ್ಮ ಸಚಿವ ಸಂಪುಟದಲ್ಲಿ ಜೈನ ಸಮುದಾಯದವರಿಗೂ ಅವಕಾಶ ಕಲ್ಪಿಸಿ ಸಾಮಾಜಿಕ ನ್ಯಾಯ ಎತ್ತಿ ಹಿಡಿದಿದ್ದರು. ಅದರಂತೆ ಈ ಬಾರಿಯೂ ಕೂಡ ಸಾಮಾಜಿಕ ನ್ಯಾಯದಡಿ ತಮ್ಮ ಸಚಿವ ಸಂಪುಟದಲ್ಲಿ ಜೈನ ಸಮುದಾಯದವರಿಗೂ ಸ್ಥಾನ ಕಲ್ಪಿಸಿ ಶ್ರೀ ಡಿ ಸುಧಾಕರ ಅವರಿಗೆ ಸಚಿವ ಸ್ಥಾನ ಕೊಡಬೇಕೆಂದು ವಿನಂತಿಸಿಕೊಂಡರು.

ಈ ವೇಳೆ ಕರ್ನಾಟಕ ಜೈನ ಅಸೋಶಿಯೇಶನ್ ಬೆಂಗಳೂ–ರಿನ ಉಪಾಧ್ಯಕ್ಷರಾದ ಎ.ಸಿ.ಪಾಟೀಲ, ನ್ಯಾಯವಾದಿಗಳಾದ ಸಂಜಯ ಕುಚನೂರೆ, ತಾತ್ಯಾಸಾಹೇಬ ಧೋತರೆ, ಅಭಿನಂದನ ಪಡನಾಡ, ಮಿಲಿಂದ ಪಾಟೀಲ, ಶ್ರೀಕಾಂತ ಅಸ್ಕಿ, ಸುರೇಶ ಚೌಗುಲೆ ಮತ್ತಿತರರು ಉಪಸ್ಥಿತರಿದ್ದರು.

## ಜನರ ಪ್ರೀತಿ ವಿಸ್ವಾಸಕ್ಕೆ ಚಿರಋಣಿ: ಶಾಸಕ ಸಿ.ಬಿ.ಸುರೇಶ್‌ಬಾಬು



ಹುಳಿಯಾರು: ನನ್ನ ಮೇಲೆ ವಿಶ್ವಾಸ ಇಟ್ಟು ನಾಲ್ಕನೆ ಬಾರಿಗೆ ಶಾಸಕನನ್ನಾಗಿ ಆಯ್ಕೆ ಮಾಡಿದ ಕ್ಷೇತ್ರದ ಜನರ ಪ್ರೀತಿಗೆ ಸದಾ ಋಣಿಯಾಗಿರುತ್ತೇನೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ಹೇಳಿದರು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ತಿಮ್ಮನಹಳ್ಳಿ ಪಂಚಾಯ್ತಿ ವ್ಯಾಪ್ತಿಯ ಹಳ್ಳಿಗಳಿಗೆ ತೆರಳಿ ಮತದಾರರಿಗೆ ಕೃತಜ್ಞತೆ ಸಲ್ಲಿಸುವ ಸಂದರ್ಭದಲ್ಲಿ ಅವರು ಮಾತನಾಡಿದರು.

ನನ್ನ ಮೇಲೆ ಪ್ರೀತಿ, ವಿಶ್ವಾಸ ಅಭಿಮಾನವಿಟ್ಟು ಮತ ನೀಡಿ ರಾಜಕೀಯ ಜೀವನದ ಪಯಣಕ್ಕೆ ಅನುವು ಮಾಡಿ ಕೊಟ್ಟಿರುವಿರಿ. ನಿಮ್ಮ ಮತಕ್ಕೆ ಬೆಲೆ ಬರುವ ರೀತಿಯಲ್ಲಿ ನಡೆದುಕೊಳ್ಳುತ್ತೇನೆ.

ಕ್ಷೇತ್ರದ ಜನರ ನಂಬಿಕೆಗೆ ಚ್ಯುತಿ ಬರದಂತೆ ಮುಂದಿನ ಐದು ವರ್ಷಗಳ ಕಾಲ ಕೆಲಸ ಮಾಡುತ್ತೇನೆ. ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ದುಡಿಯುತ್ತೇನೆ ಎಂದು ಭರವಸೆ ನೀಡಿದರು.

ಡಿಸಿಸಿ ಬ್ಯಾಂಕ್ ನಿರ್ದೇಶಕ ಸಿಂಗದಹಳ್ಳಿ ರಾಜ್‌ಕುಮಾರ್, ತಾಲೂಕು ಜೆಡಿಎಸ್ ಅಧ್ಯಕ್ಷ ರಾಮಚಂದ್ರಯ್ಯ, ಜಿಪಂ ಮಾಜಿ ಸದಸ್ಯ ಕಲ್ಲೇಶ್, ತಾಪಂ ಮಾಜಿ ಅಧ್ಯಕ್ಷ ಶಶಿಧರ್, ಮುಖಂಡರಾದ ತಿಮ್ಮನಹಳ್ಳಿ ಶ್ರೀಹರ್ಷ, ಬೆಳವಾಡಿಕುಮಾರ್ ಸೇರಿದಂತೆ ಅನೇಕರು ಇದ್ದರು.

# ಮೂಢನಂಬಿಕೆ ಬದಿಗಿಟ್ಟು ರಾಹುಕಾಲದಲ್ಲಿ ನಾಮಪತ್ರ ಸಲ್ಲಿಕೆ: ಸತೀಶ್ ಜಾರಕಿಹೊಳಿ ಭರ್ಜರಿ ಗೆಲುವು



ಬೆಳಗಾವಿ: ಕಾಂಗ್ರೆಸ್ ಸರ್ಕಾರ 2023ರಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ಭವಿಷ್ಯ ನುಡಿದು, 2020ರಲ್ಲಿಯೇ ತೆಗೆದುಕೊಂಡಿದ್ದ ಹೊಸ ಕಾರಿಗೆ 2023 ಎಂದು ನಂಬರ್ ಪ್ಲೇಟ್ ಹಾಕಿಸಿ ಸ್ಮಶಾನದಲ್ಲಿ ಪೂಜೆ ಮಾಡಿಸಿದ್ದ ಸತೀಶ್ ಜಾರಕಿಹೊಳಿ ಅವರ ಭವಿಷ್ಯ ನಿಜವಾಗಿದೆ. ಈಗ ಕಾಂಗ್ರೆಸ್ 135 ಕ್ಷೇತ್ರಗಳಲ್ಲಿ ಗೆದ್ದು ಬಹುಮತದಿಂದ ಸರ್ಕಾರ ರಚನೆ ಮಾಡುತ್ತಿದೆ.

ಹೊಸ ಕಾರಿಗೆ 2023 ಎಂದು ನಂಬರ್ ಪ್ಲೇಟ್ ತೆಗೆದುಕೊಂಡು ಮೂಢನಂಬಿಕೆಗಳಿಗೆ ಸೆಡ್ಡು ಹೊಡೆದು ಆ ಕಾರ್‌ನ್ನು 2020ರಲ್ಲೇ ಸ್ಮಶಾನದಲ್ಲೇ ಲೋಕಾರ್ಪಣೆ ಮಾಡಿದ್ದ ಶಾಸಕ ಸತೀಶ ಜಾರಕಿಹೊಳಿ ಅವರ ಭವಿಷ್ಯ ಇಂದು ಖಚಿತವಾಗಿದೆ. ಇದೀಗ ಕಾಂಗ್ರೆಸ್ ಸರ್ಕಾರ 135 ಸ್ಥಾನ ಗೆದ್ದು ರಾಜ್ಯದಲ್ಲಿ ಸರ್ಕಾರ ರಚನೆ ಮಾಡುತ್ತಿದೆ. ಸದಾ ಮೂಢನಂಬಿಕೆಗಳ ವಿರುದ್ಧ ಧ್ವನಿ ಎತ್ತುವ ಶಾಸಕ ಸತೀಶ ಜಾರಕಿಹೊಳಿ ಅವರು 2020ರಲ್ಲೇ ತಮ್ಮ "ನೂತನ ಕಾರ್‌ಗೆ 2023 ಎಂದು ನಂಬರ್ ಪ್ಲೇಟ್" ತೆಗೆದುಕೊಂಡಿದ್ದರು.

ಆದರೆ, ಹಲವರು ಅವರ ಭವಿಷ್ಯವನ್ನು ಅಲ್ಲಗಳೆದಿದ್ದಲ್ಲದೆ, ಚುನಾವಣೆಯಲ್ಲಿ ಯಮಕನಮರಡಿ ಕ್ಷೇತ್ರವನ್ನು ಕಳೆದುಕೊಳ್ಳುತ್ತಾರೆ ಎಂದು ಹೇಳಿದರು. ಆದರೆ, ಜಾರಕಿಹೊಳಿ ಅವರು ಯಮಕನಮರಡಿಯಿಂದ ಕಣಕ್ಕಿಳಿದಿರುವ ಪ್ರಚಂಡ ಗೆಲುವು ಮತ್ತು ಅಂತಿಮವಾಗಿ ಕಾಂಗ್ರೆಸ್ ಪಕ್ಷದ ಗೆಲುವು ಅವರ ಅನೇಕ ರಾಜಕೀಯ ಪ್ರತಿಸ್ಪರ್ಧಿಗಳಿಗೆ ಮುಜುಗರ ತಂದಿದೆ.

ಹೊಸ ಟೊಯೊಟಾ ಫಾರ್ಚುನರ್ ಎಸ್‌ಯುವಿ ಖರೀದಿಸಿದ ನಂತರ, ಜಾರಕಿಹೊಳಿ ಮತ್ತು ಅವರ ಬೆಂಬಲಿಗರು ವಾಹನವನ್ನು ಬೆಳಗಾವಿಯ ಸದಾಶಿವ ನಗರದ ಸ್ಮಶಾನಕ್ಕೆ ತಂದು ಅಲ್ಲಿ ಅದ್ದೂರಿ ಸಮಾರಂಭದಲ್ಲಿ ಬಿಡುಗಡೆ ಮಾಡಿದರು.

SUV ನ ನೋಂದಣಿ ಸಂಖ್ಯೆ KA-49 N2023 ಆಗಿದೆ. ಇತ್ತೀಚಿನ ಚುನಾವಣೆಯ ಪ್ರಚಾರವನ್ನು ಪ್ರಾರಂಭಿಸುವ ಮೊದಲು ಅವರು ಸ್ಮಶಾನದಲ್ಲಿ ಮೊದಲ ಬಾರಿಗೆ ಇತ್ತೀಚಿನ ಚುನಾವಣಾ ಪ್ರಚಾರಕ್ಕಾಗಿ ವಿಶೇಷವಾಗಿ ಮಾರ್ಪಡಿಸಿದ ತಮ್ಮ ವಾಹನಕ್ಕೆ ಪ್ರಾರ್ಥನೆ ಸಲ್ಲಿಸಿದ್ದರು.

ಚುನಾವಣಾ ಕಣದಲ್ಲಿರುವ ಬಹುತೇಕ ಅಭ್ಯರ್ಥಿಗಳು ನಾಮಪತ್ರ ಸಲ್ಲಿಕೆಗೂ ಮುನ್ನ ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸುವ ಕಾರ್ಯದಲ್ಲಿ ನಿರತರಾಗಿದ್ದಾಗ ಜಾರಕಿಹೊಳಿ ಅವರು ಅಮವಾಸ್ಯೆಯ ದಿನವೇ ರಾಹುಕಾಲಕ್ಕೆ ಸರಿಯಾಗಿ ನಾಮಪತ್ರ ಸಲ್ಲಿಸಿದರು. ಸಾಮಾನ್ಯವಾಗಿ, ರಾಹುಕಾಲವನ್ನು ಅಶುಭ ದಿನವೆಂದು ಪರಿಗಣಿಸಲಾಗುತ್ತದೆ. ಆ ಸಮಯದಲ್ಲಿ ಜನರು ಯಾವುದೇ ಹೊಸ ಉದ್ಯಮಗಳು ಅಥವಾ ಕೆಲಸಗಳನ್ನು ಪ್ರಾರಂಭಿಸುವುದಿಲ್ಲ.

ಆದರೆ, ಹಿಂದಿನಿಂದಲೂ ಮೂಢನಂಬಿಕೆ ವಿರುದ್ಧ ಹೋರಾಟ ನಡೆಸುತ್ತಿರುವ ಜಾರಕಿಹೊಳಿ ಅದಕ್ಕೆ ಸವಾಲು ಹಾಕಲು ನಿರ್ಧರಿಸಿದ್ದಾರೆ. ಅಂತಿಮವಾಗಿ ಯಮಕನಮರಡಿ ವಿಧಾನಸಭಾ ಕ್ಷೇತ್ರದಿಂದ ತಮ್ಮ ಸಮೀಪದ ಪ್ರತಿಸ್ಪರ್ಧಿ ವಿರುದ್ಧ 70 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಜಾರಕಿಹೊಳಿ ಗೆಲುವು ಸಾಧಿಸಿದ್ದಾರೆ.

ಜಾರಕಿಹೊಳಿ ಅವರು ಪ್ರತಿ ಡಿಸೆಂಬರ್ 6 ರಂದು ಬೆಳಗಾವಿಯ ಸ್ಮಶಾನದಲ್ಲಿ ತಮ್ಮ ಅಪಾರ ಸಂಖ್ಯೆಯ ಬೆಂಬಲಿಗರೊಂದಿಗೆ ಅದ್ದೂರಿ ಕಾರ್ಯಕ್ರಮವನ್ನು ಆಯೋಜಿಸುತ್ತಾರೆ ಮತ್ತು ಇಡೀ ಹಗಲು ರಾತ್ರಿ ಸ್ಮಶಾನದಲ್ಲಿ ಮಧ್ಯಾಹ್ನ ಮತ್ತು ರಾತ್ರಿ ಊಟವನ್ನು ಮಾಡುತ್ತಾರೆ, ಜೊತೆಗೆ ವಿಚಾರ ಸಂಕಿರಣಗಳು ಮತ್ತು ಕಾರ್ಯಾಗಾರಗಳನ್ನು ಆಯೋಜಿಸುತ್ತಾರೆ, ಮೂಢನಂಬಿಕೆ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುತ್ತಾರೆ.

# ಭಾರತದ ಆಧುನಿಕ ಇತಿಹಾಸದಲ್ಲಿ ನಾಲ್ವರು ಗುಜರಾತಿಗಳು ದೊಡ್ಡ ಕೊಡುಗೆ ನೀಡಿದ್ದಾರೆ: ಅಮಿತ್ ಶಾ

ನವದೆಹಲಿ: ಭಾರತದ ಆಧುನಿಕ ಇತಿಹಾಸದಲ್ಲಿ ನಾಲ್ವರು ಗುಜರಾತಿಗಳಾದ ಮಹಾತ್ಮ ಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್, ಮೊರಾರ್ಜಿ ದೇಸಾಯಿ ಮತ್ತು ನರೇಂದ್ರ ಮೋದಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಶ್ರೀ ದೆಹಲಿ ಗುಜರಾತಿ ಸಮಾಜ 125 ವರ್ಷಗಳನ್ನು ಪೂರೈಸಿದ ಸಂದರ್ಭದಲ್ಲಿ ಆಯೋಜಿಸಲಾದ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಶಾ, ಪ್ರಧಾನಿ ನರೇಂದ್ರ ಮೋದಿಯವರಿಂದಾಗಿ ಭಾರತದ ಕೀರ್ತಿ ಪ್ರಪಂಚದಾದ್ಯಂತ ಹರಡುತ್ತಿದೆ ಎಂದು ಹೇಳಿದರು.

ಮಹಾತ್ಮಾ ಗಾಂಧಿ, ಸರ್ದಾರ್ ವಲ್ಲಭಭಾಯಿ ಪಟೇಲ್, ಮೊರಾರ್ಜಿ ದೇಸಾಯಿ ಮತ್ತು ನರೇಂದ್ರ ಮೋದಿ, ಈ ನಾಲ್ವರು ಗುಜರಾತಿಗಳು ಭಾರತದ ಆಧುನಿಕ ಇತಿಹಾಸದಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ" ಎಂದು ಅವರು ಹೇಳಿದರು.

ಗಾಂಧೀಜಿಯವರ ಪ್ರಯತ್ನದಿಂದ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿತು, ಸರ್ದಾರ್ ಪಟೇಲ್‌ನಿಂದ ದೇಶವು ಒಂದಾಯಿತು, ಮೊರಾರ್ಜಿ ದೇಸಾಯಿ ಅವರಿಂದ ದೇಶದ ಪ್ರಜಾಪ್ರಭುತ್ವ ಪುನರುಜ್ಜೀವನಗೊಂಡಿತು. ನರೇಂದ್ರ ಮೋದಿಯವರಿಂದಾಗಿ ಭಾರತವು ವಿಶ್ವಾದ್ಯಂತ ತನ್ನ ಕೀರ್ತಿ ಪತಾಕೆಯನ್ನು ಹಾರಿಸುತ್ತಿದೆ ಎಂದರು.

ಈ ನಾಲ್ವರು ಗುಜರಾತಿಗಳು ಉತ್ತಮ ಸಾಧನೆ ಮಾಡಿದ್ದಾರೆ. ಅವರು ಇಡೀ ರಾಷ್ಟ್ರದ ಹೆಮ್ಮೆ ಎಂದು ಗುಜರಾತಿ ಭಾಷೆಯಲ್ಲಿ ಅಮಿತ್ ಶಾ ಭಾಷಣ ಮಾಡಿದರು. ಗುಜರಾತಿ ಸಮುದಾಯವು ದೇಶ ಮತ್ತು ಪ್ರಪಂಚದಾದ್ಯಂತ ಪ್ರಸ್ತುತವಾಗಿದೆ. ಯಾವುದೇ ಸಮಾಜದಲ್ಲಿ ಯಾವಾಗಲೂ ಚೆನ್ನಾಗಿ ಬೆರೆತಿದೆ ಮತ್ತು ಸೇವೆ ಸಲ್ಲಿಸುತ್ತಿದೆ ಎಂದು ಶಾ ಹೇಳಿದರು.



ಪ್ರಧಾನಿ ಮೋದಿಯವರ ಕಳೆದ ಒಂಬತ್ತು ವರ್ಷಗಳ ಅಧಿಕಾರಾವಧಿಯನ್ನು ಉಲ್ಲೇಖಿಸಿದ ಶಾ, ಈ ಅವಧಿಯಲ್ಲಿ ದೇಶವು ಅನೇಕ ಸಾಧನೆಗಳನ್ನು ಮಾಡಿದೆ ಎಂದು ಹೇಳಿದರು.

2014ರಲ್ಲಿ ಮೋದಿ ಪ್ರಧಾನಿಯಾದಾಗ ಭಾರತದ ಆರ್ಥಿಕತೆ ವಿಶ್ವದಲ್ಲಿ 11ನೇ ಸ್ಥಾನದಲ್ಲಿತ್ತು, ಇಂದು ಒಂಬತ್ತು ವರ್ಷಗಳ ನಂತರ ಭಾರತದ ಆರ್ಥಿಕತೆ ವಿಶ್ವದಲ್ಲಿ 5ನೇ ಸ್ಥಾನದಲ್ಲಿದೆ ಎಂದರು. ಈಗ ಐಎಂಎಫ್ ಸೇರಿದಂತೆ ಹಲವು ಏಜೆನ್ಸಿಗಳು ಭಾರತದ ಆರ್ಥಿಕತೆಯನ್ನು ಪ್ರಕಾಶಮಾನವಾದ ತಾಣವಾಗಿ ನೋಡುತ್ತಿವೆ ಎಂದರು.

ಮೋದಿಯವರ ನಿರ್ಣಾಯಕ ನಾಯಕತ್ವದಲ್ಲಿ ಸರ್ಜಿಕಲ್ ಮತ್ತು ವೈಮಾನಿಕ ದಾಳಿಗಳನ್ನು ನಡೆಸುವ ಮೂಲಕ ಭಾರತವು ಜಗತ್ತಿಗೆ ಭಾರತದ ಗಡಿಯನ್ನು ಯಾರೂ ಹಾಳುಮಾಡಲು ಸಾಧ್ಯವಿಲ್ಲ ಎಂಬ ಸಂದೇಶವನ್ನು ನೀಡಿದೆ. 130 ಕೋಟಿ ಜನರಿರುವ ಭಾರತದಂತಹ ವಿಶಾಲ ದೇಶದಲ್ಲಿ ಕೋವಿಡ್ ಲಸಿಕೆ ಅಭಿಯಾನವನ್ನು ಸುಗಮ ರೀತಿಯಲ್ಲಿ ಪೂರ್ಣಗೊಳಿಸಲಾಗಿದೆ ಎಂದು ಶಾ ಹೇಳಿದರು.

ಪ್ರಧಾನಿ ಮೋದಿಯವರ ನಾಯಕತ್ವದಲ್ಲಿ ಭಾರತವು ವಿಶ್ವದ ಅತಿದೊಡ್ಡ ಮೊಬೈಲ್ ಉತ್ಪಾದಕ ರಾಷ್ಟ್ರವಾಗಿದೆ, ಭಾರತವು ಸ್ಟಾರ್ಟ್‌ಅಪ್‌ಗಳ ಕ್ಷೇತ್ರದಲ್ಲಿ ಮೂರನೇ ಮತ್ತು ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ನಾಲ್ಕನೇ ಸ್ಥಾನದಲ್ಲಿದೆ.

ಜಮ್ಮು ಮತ್ತು ಕಾಶ್ಮೀರದಿಂದ ಯಾವುದೇ ಹಿಂಸಾಚಾರದ ವರದಿಗಳಿಲ್ಲದೆ 370 ನೇ ವಿಧಿಯನ್ನು ರದ್ದುಗೊಳಿಸುವ ಕೆಲಸವನ್ನು ಪ್ರಧಾನಿ ಮಾಡಿದ್ದಾರೆ, ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ನೀತಿಯನ್ನು ತಂದರು, ಇದರ ಪರಿಣಾಮವಾಗಿ ಒಂಬತ್ತು ವರ್ಷಗಳಲ್ಲಿ ಯಾವುದೇ ಒಂದು ದೊಡ್ಡ ಭಯೋತ್ಪಾದನೆ ಘಟನೆ ನಡೆದಿಲ್ಲ ಎಂದರು.

ದೇಶದ ಆಂತರಿಕ ಭದ್ರತೆ ಮತ್ತು ಗಡಿಗಳ ಭದ್ರತೆಯನ್ನು ಬಲಪಡಿಸಲು ಮೋದಿ ಹಲವಾರು ಪ್ರಯತ್ನಗಳನ್ನು ಮಾಡಿದ್ದಾರೆ ಎಂದು ಅಮಿತ್ ಶಾ ಶ್ಲಾಘಿಸಿದರು.

## ಕೆ.ಸಿ.ವೇಣುಗೋಪಾಲ್ ಮೇಲೆ ಸೈಬರ್ ವಂಚಕರ ಕೆಂಗಣ್ಣು ಫೋನ್ ನಂಬರ್ ಬಳಸಿ, ಹಲವರಿಗೆ ಸೀಟು ನೀಡುವ ಆಮಿಷ

ಕೊಚ್ಚಿ: ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಿದ್ದು, ಇದರ ಬೆನ್ನಲ್ಲೇ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಅವರು ಸೈಬರ್ ವಂಚಕರ ಕೆಂಗಣ್ಣಿಗೆ ಗುರಿಯಾಗಿದ್ದರು ಎಂಬುದು ಇದೀಗ ಬೆಳಕಿಗೆ ಬಂದಿದೆ.

ವೇಣುಗೋಪಾಲ್ ಅವರ ಫೋನ್ ನಂಬರ್'ನ್ನು ಬಳಸಿಕೊಂಡು ಸೈಬರ್ ವಂಚಕರು ಹಲವು ನಾಯಕರ ಸಂಪರ್ಕಿಸಿದ್ದು, ಸೀಟು ನೀಡುವುದಾಗಿ ಆಮಿಷ ಒಡ್ಡಿದ್ದಾರೆ.

ಈ ವಿಚಾರ ತಿಳಿದ ವೇಣುಗೋಪಾಲ್ ಅವರ ಕಾರ್ಯದರ್ಶಿ ಶರತ್ ಚಂದ್ರನ್ ಕೆ ಅವರು, ಪೊಲೀಸರನ್ನು ಸಂಪರ್ಕಿಸಿದ್ದು, ದೂರು ದಾಖಲಿಸಿದ್ದಾರೆಂದು ತಿಳಿದುಬಂದಿದೆ.

ಮೇ 14 ರಂದು ಕೊಚ್ಚಿ ಸೈಬರ್ ಪೊಲೀಸ್ ಠಾಣೆಯಲ್ಲಿ ಶರತ್ ಅವರು, ಪ್ರಕರಣ ದಾಖಲಿಸಿದ್ದಾರೆಂದು ತಿಳಿದುಬಂದಿದೆ.

ಏಪ್ರಿಲ್ 4 ರಂದು ವೇಣುಗೋಪಾಲ್ ಅವರ ಫೋನ್ ನಾಲ್ವರಿಗೆ ದೂರವಾಣಿ ಕರೆಗಳು ಹೋಗಿವೆ. ಈ ಸಂಬಂಧ ತನಿಖೆ ಪ್ರಗತಿಯಲ್ಲಿದೆ. ವಂಚಕರ ಪತ್ತೆಗೆ ಪ್ರಯತ್ನ ನಡೆಸಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ.

ಈ ಸಮಯದಲ್ಲಿ, ಕಾಂಗ್ರೆಸ್ ವಿಧಾನಸಭಾ ಕ್ಷೇತ್ರಗಳಿಗೆ ಪಕ್ಷದ ಅಭ್ಯರ್ಥಿಗಳನ್ನು ಅಂತಿಮಗೊಳಿಸುತ್ತಿತ್ತು. ಈ ಸಂದರ್ಭದಲ್ಲಿ ವೇಣುಗೋಪಾಲ್ ಅವರ ಫೋನ್ ನಂಬರ್ ಬಳಸಿಕೊಂಡಿರುವ ವಂಚಕರು, ಟಿಕೆಟ್'ಗೆ ಬದಲಾಗಿ ಹಣ ನೀಡುವಂತೆ ನಾಲ್ವರನ್ನು ಸಂಪರ್ಕಿಸಿದ್ದಾರೆ. ಈ ಟ್ರ್ಯಾಪ್ ನಲ್ಲಿ ಯಾರೂದರೂ ಹಣ ಕಳೆದುಕೊಂಡಿದ್ದಾರೆಂಮೇ ಎಂಬುದು ಇನ್ನೂ ತಿಳಿದುಬಂದಿಲ್ಲ. ಈ ನಿಟ್ಟಿನಲ್ಲಿಯೂ ತನಿಖೆ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



"ಮೊಬೈಲ್ ಆ್ಯಪ್ ಬಳಸಿ ಈ ವಂಚನೆ ನಡೆಸಲಾಗಿದೆ ಎಂಬುದು ನಮ ಗೆ ತಿಳಿದು ಬಂದಿದೆ. ಈ ವಂಚನೆಯಲ್ಲಿ ರಾಜಸ್ಥಾನ ಮೂಲದ ಗ್ಯಾಂಗ್‌ನ ಕೈವಾಡವಿರುವ ಶಂಕೆಗಳಿವೆ. ವಂಚಕರು ಮಾಡಿದ ದೂರವಾಣಿ ಕರೆಯನ್ನು ಯೋಗೇಶ್ ಬಾಬು ಮತ್ತು ಮನಮೋಹನ್ ಎಂಬ ಇಬ್ಬರು ವ್ಯಕ್ತಿಗಳು ಸ್ವೀಕರಿಸಿರುವುದು ತಿಳಿದುಬಂದಿದೆ ಎಂದು ಮಾಹಿತಿ ನೀಡಿದ್ದಾರೆ.

ಚುನಾವಣೆ ಸಂದರ್ಭದಲ್ಲಿ ಜನರಿಂದ ಹಣ ಲಪಟಾಯಿಸಲು ವಂಚಕರು ಇಂತಹ ಪ್ರಯತ್ನಗಳನ್ನು ಮಾಡುತ್ತಿರುತ್ತಾರೆ. ಆದರೆ, ವೇಣುಗೋಪಾರ್ ರಂತಹ ದೊಡ್ಡ ವ್ಯಕ್ತಿಯೊಬ್ಬರು ವಂಚಕರ ಗುರಿಯಾಗಿರುವುದು ಇದೇ ಮೊದಲು. ಇದು ಸಂಘಟಿತ ಸೈಬರ್ ವಂಚಕರ ಕೃತ್ಯವೆಂದು ಶಂಕಿಸಲಾಗಿದೆ ಎಂದು ಹೇಳಿದ್ದಾರೆ.

ಸೈಬರ್ ಸೆಕ್ಯುರಿಟಿ ಸ್ಟಾರ್ಟ್‌ಅಪ್ ಟೆಕ್ನಿಸಾಂಕ್ಟ್‌ನ ಸಂಸ್ಥಾಪಕ ಮತ್ತು ಸಿಇಒ ನಂದಕಿಶೋರ್ ಹರಿಕುಮಾರ್ ಮಾತನಾಡಿ, ಇಂತಹ ವಂಚನಗಳಿಗೆ ಅಪ್ಲಿಕೇಶನ್‌ಗಳು ಲಭ್ಯವಿದೆ. ಇಂತಹ ವಂಚನೆಗಳನ್ನು ಸಾಮಾನ್ಯ ಕರೆಗಳಂತೆ ಕಾಣುವ ಇಂಟರ್ನೆಟ್ ಕರೆಗಳ ಮೂಲಕ ನಡೆಸಲಾಗುತ್ತದೆ. ಕಾಲರ್ ಐಡಿಗಳಿಂದಲೂ ಸಂಖ್ಯೆಯನ್ನು ಮರೆಮಾಚುವ ತಂತ್ರಗಳಿವೆ. ಕೆಲವು ವರ್ಷಗಳ ಹಿಂದೆ, ತಮ್ಮ ಮೇಲಿನ ಪ್ರಕರಣಗಳ ಮುಚ್ಚಿಹಾಕುವಂತೆ ಸರ್ಕಾರಿ ಕಚೇರಿಗಳ ಸಂಖ್ಯೆಗಳಿಂದ ದೂರವಾಣಿ ಕರೆಗಳ ಮಾಡಿರುವುದೂ ವರದಿಯಾಗಿತ್ತು. ಸಾಮಾನ್ಯವಾಗಿ ಇಂತಹ ಆ್ಯಪ್ ಗಳನ್ನು ಆಪ್ ಸ್ಟೋರ್ ಗಳಿಂದ ತೆಗೆದುಹಾಕಲಾಗುತ್ತದೆ ಎಂದು ಹೇಳಿದ್ದಾರೆ.

## ಪುತ್ತೂರಿನ ಘಟನೆಗೆ ಪ್ರಭಾಕರ್ ಭಟ್, ಕಟೀಲ್ ಕಾರಣ: ಮಾಜಿ ಸಚಿವ ಅಭಯ್ ಚಂದ್ರ ಜೈನ್



ಮಂಗಳೂರು: ಪುತ್ತೂರಿನಲ್ಲಿ ಬಿಜೆಪಿ ಕಾರ್ಯಕರ್ತರ ಮೇಲೆ ನಡೆದ ಹಲ್ಲೆಗೆ ಕಲ್ಲಡ್ಕ ಪ್ರಭಾಕರ್ ಭಟ್ ಹಾಗೂ ನಳಿನ್ ಕುಮಾರ್ ಕಟೀಲ್ ಅವರೇ ಕಾರಣ ಎಂದು ಮಾಜಿ ಸಚಿವ ಅಭಯ್ ಚಂದ್ರ ಜೈನ್ ಗಂಭೀರ ಆರೋಪ ಮಾಡಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಘಟನೆಗೆ ನೇರ ಕಾರಣ ಕಲ್ಲಡ್ಕ ಪ್ರಭಾಕರ್ ಭಟ್ ಮತ್ತು ನಳಿನ್ ಕುಮಾರ್ ಕಟೀಲ್ ಕಾರಣ.

ಸಿದ್ದರಾಮಯ್ಯ ಶನಿವಾರ ಅಧಿಕಾರ ಸ್ವೀಕಾರ ಮಾಡಬೇಕು. ಕಲ್ಲಡ್ಕ ಭಟ್ ಈ ಘಟನೆಗೆ ಕಾಂಗ್ರೆಸ್ ಕಾರಣ ಅಂತಾ ಹೇಳುತ್ತಾರೆ. ಕಟೀಲ್ ಲೋಕಸಭಾ ಸದಸ್ಯನಾಗಿ ಕಾರ್ಯಕರ್ತರಿಗೆ ಸಾಯುವ ಹಾಗೆ ಹೊಡಿಸ್ತಾರೆ ಅಂದ್ರೆ ಅವರಿಗೆ ಮಾನವೀಯತೆ ಇದ್ಯಾ ಎಂದು ಜೈನ್ ಪ್ರಶ್ನಿಸಿದರು.

ಇದೇ ವೇಳೆ ಬಿ.ಕೆ ಹರಿಪ್ರಸಾದ್ ರನ್ನು ದ.ಕ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮಾಡಿ ಎಂದು ಒತ್ತಾಯಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾಂಗ್ರೆಸ್ ನಲ್ಲಿ ನಾಯಕತ್ವದ ಕೊರತೆ ಇದೆ. ಮೊಯ್ಲಿ, ಆಸ್ಕರ್, ಪೂಜಾರಿಯವರಂತಹ ನಾಯಕ ನಮಗೆ ಬೇಕು. ಈ ಜಿಲ್ಲೆಗೆ ಬಲಿಷ್ಠ ನಾಯಕ ಬೇಕು.

ಇದನ್ನು ಹೈಕಮಾಂಡ್, ಕಾಂಗ್ರೆಸ್ ಪ್ರಮುಖರು ಇದನ್ನು ಅರಿಯಬೇಕು. ಹೀಗಾಗಿ ಬಿ.ಕೆ ಹರಿಪ್ರಸಾದ್ ಅವರನ್ನು ಗೃಹ ಸಚಿವರನ್ನಾಗಿ ಮಾಡಬೇಕು. ಹಾಗೆಯೇ ದ.ಕ ಜಿಲ್ಲೆಯ ಉಸ್ತುವಾರಿ ಸಚಿವರನ್ನಾಗಿಯೂ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

## ಸತೀಶ್ ಜಾರಕಿಹೊಳಿಗೆ ಡಿಸಿಎಂ, ಪ್ರಸಾದ ಅಬ್ಬಯ್ಯಗೆ ಸಚಿವ ಸ್ಥಾನ ನೀಡಲು ಒತ್ತಾಯ

ಹುಕ್ಕೇರಿ: ರಾಜ್ಯದ ನೂತನ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ಕಾಂಗ್ರೆಸ್ ಸಚಿವ ಸಂಪುಟದಲ್ಲಿ ಪ್ರಭಾವಿ ನಾಯಕ ಸತೀಶ ಜಾರಕಿಹೊಳಿ, ಪ್ರಸಾದ ಅಬ್ಬಯ್ಯ ಅವರಿಗೆ ಸಂಪುಟ ದರ್ಜೆ ಸಚಿವ ಸ್ಥಾನ ನೀಡಬೇಕು ಎಂದು ವಿವಿಧ ದಲಿತಪರ ಸಂಘಟನೆಗಳ ಕಾರ್ಯಕರ್ತರು ಆಗ್ರಹಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಜಮಾಯಿಸಿದ ವಿವಿಧ ದಲಿತಪರ ಸಂಘಟನೆಗಳ ಕಾರ್ಯಕರ್ತರು, ಕಾಂಗ್ರೆಸ್‌ಗೆ ಐತಿಹಾಸಿಕ, ಅಭೂತಪೂರ್ವ ಸ್ಪಷ್ಟ ಬಹುಮತ ಸಿಕ್ಕಿದೆ.

ಇದರಲ್ಲಿ ಉತ್ತರ ಕರ್ನಾಟಕದ ಕೊಡುಗೆಯೂ ಇದೆ. ಹಾಗಾಗಿ ಅಧಿಕಾರ ಹಂಚಿಕೆಯಲ್ಲಿ ಪ್ರಾದೇಶಿಕ, ಸಾಮಾಜಿಕ ನ್ಯಾಯ ಪಾಲನೆ ಮಾಡಬೇಕು ಎಂದು ಮನವಿ ಮಾಡಿದರು.



ಯಮಕನಮರಡಿ ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಸತತ ನಾಲ್ಕನೇ ಬಾರಿಗೆ ಆಯ್ಕೆಯಾಗಿರುವ ಶಾಸಕ, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರಿಗೆ ಉಪಮುಖ್ಯಮಂತ್ರಿ ಹುದ್ದೆ ಜೊತೆಗೆ ಮಹತ್ವದ ಖಾತೆ ನೀಡಬೇಕು. ಬಾಗಲಕೋಟೆ, ವಿಜಯಪುರ, ಧಾರವಾಡ, ಬೆಳಗಾವಿ, ಹುಬ್ಬಳ್ಳಿ ರಾಜ್ಯ ಇನ್ನೂ ಹಲವು ಕಡೆಗಳಲ್ಲಿ ತಮ್ಮದೇ ಛಾಪು ಮೂಡಿಸಿ ಕಾಂಗ್ರೆಸ್ ಪಕ್ಷ ಕಟ್ಟಿ, ಅಧಿಕಾರ ಚುಕ್ಕಾಣಿ ಹಿಡಿಯಲು ಪ್ರಮುಖ ಪಾತ್ರ ವಹಿಸಿದ್ದನ್ನು ಪರಿಗಣಿಸಿ ಜಾರಕಿಹೊಳಿಗೆ ಉನ್ನತ ಸ್ಥಾನ ನೀಡಬೇಕು ಎಂದು ದಲಿತ ಮುಖಂಡರು ಒತ್ತಾಯಿಸಿದರು.

ಧಾರವಾಡ ದಕ್ಷಿಣ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರದಿಂದ ಹ್ಯಾಟ್ರಿಕ್ ಗೆಲುವು ಸಾಧಿಸಿದ ಪ್ರಸಾದ ಅಬ್ಬಯ್ಯ ಅವರಿಗೆ ಉತ್ತರ ಕರ್ನಾಟಕ ಹಾಗೂ ದಲಿತ ಕೋಟಾದಲ್ಲಿ ಸಚಿವ ಸ್ಥಾನ ನೀಡಬೇಕು. ಈ ಮೂಲಕ ಪರಿಶಿಷ್ಟ ಸಮುದಾಯದ ಆಶಾಕಿರಣವಾಗಿ ಹೊರಹೊಮ್ಮಿರುವ ಪ್ರಸಾದಗೆ ಸಚಿವ ಸ್ಥಾನ ನೀಡುವ ಮೂಲಕ ಸಾಮಾಜಿಕ ನ್ಯಾಯ ಪಾಲಿಸಬೇಕು ಎಂದು ದಲಿತರು ಆಗ್ರಹಿಸಿದರು.

ಪಂಚಮಸಾಲಿ ಲಿಂಗಾಯತ ಕೋಟಾ ಮತ್ತು ಹಿರಿತನ ಆಧಾರದ ಮೇಲೆ ಬೆಳಗಾವಿ ಜಿಲ್ಲೆಯ ಪಕ್ಷದ ಹಿರಿಯ ಮುಖಂಡ, ಮಾಜಿ ಸಚಿವ ಎ.ಬಿ.ಪಾಟೀಲ ಅವರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ನೇಮಕ ಮಾಡಬೇಕು. ಇದರಿಂದ ಹುಕ್ಕೇರಿ ಸೇರಿದಂತೆ ಜಿಲ್ಲೆಯಲ್ಲಿ ಕಾಂಗ್ರೆಸ್ ಬಲವರ್ಧನೆಗೆ ಅನುಕೂಲವಾಗಲಿದೆ.

ಜತೆಗೆ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ನಿಗಮ ಮಂಡಳಿಗಳಿಗೆ ನೇಮಕ ಮಾಡಬೇಕು. ಈ ಎಲ್ಲ ವಿಚಾರಗಳನ್ನು ಪಕ್ಷದ ಹೈಕಮಾಂಡ್ ಪರಿಗಣಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ದಲಿತ ಮುಖಂಡರು ಮನವಿ ಮಾಡಿದರು. ಮುಖಂಡರಾದ ಕೆಂಪಣ್ಣಾ ಶಿರಹಟ್ಟಿ, ಹೂಲಿ, ಕೆ.ವೆಂಕಟೇಶ, ರಾಜು ಮೂಥಾ, ಶಿವು ಮಾಳಗೆ, ಅರುಣ ಬೆಳವಿ, ವಿಶ್ವಜೀತ ದೇವರುಷಿ, ಮಹೇಶ ಮಾಳಗೆ, ಶಿವಶಾಂತ ತೇರದಾಳ, ಸತೀಶ ಮಾಡಲಗಿ, ಮಂಜು ಪಡದಾರ, ಆನಂದ ಖಾತೇದಾರ, ಬಸವರಾಜ ದೇವುಗೋಳ ಮತ್ತಿತರರು ಉಪಸ್ಥಿತರಿದ್ದರು.

## ಶಾಲೆಯ ಕೊಠಡಿಯ ಮುಂದೆ ಯುವಕನ ಕೊಚ್ಚಿ ಕೊಲೆ: ಬೆಚ್ಚಿಬಿದ್ದ ಗ್ರಾಮಸ್ಥರು



ಬೆಳಗಾವಿ : ಬೆಳಗಾವಿ ಜಿಲ್ಲೆ ಮಾರಿಹಾಳ ಸರ್ಕಾರಿ ಕನ್ನಡ ಶಾಲಾ ಕೊಠಡಿಯ ಎದುರು ಕೊಲೆಯಾದ ಸ್ಥಿತಿಯಲ್ಲಿ ಯುವಕನ ಶವ ಪತ್ತೆಯಾದ ಘಟನೆ ನಡೆದಿದೆ.

ಮಾರಕಾಸ್ತ್ರಗಳಿಂದ ಕೊಚ್ಚಿ ಮಹಾಂತೇಶ ರುದ್ರಪ್ಪ ಕರಲಿಂಗಣ್ಣವರ್ (24) ಎಂಬಾತನ ಹತ್ಯೆ ಮಾಡಲಾಗಿದೆ. ಬೆಳ್ಳಂಬೆಳಗ್ಗೆ ರಕ್ತದ ಮಡುವಿನಲ್ಲಿ ಬಿದ್ದ ಯುವಕನ ಮೃತದೇಹ ಕಂಡು ಗ್ರಾಮಸ್ಥರು ಬೆಚ್ಚಿ ಬಿದ್ದಿದ್ದಾರೆ. ಮಧ್ಯರಾತ್ರಿ ಮಹಾಂತೇಶ ಕರಲಿಂಗಣ್ಣವರ್ ಅವರ ಹತ್ಯೆಗೈದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ ಎಂದು ತಿಳಿದುಬಂದಿದೆ. ಕೊಲೆಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಸ್ಥಳದಲ್ಲಿ ಮೃತನ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಸ್ಥಳಕ್ಕೆ ಅಪರಾದ ವಿಭಾಗದ ಡಿಸಿಪಿ ಪಿ.ಸ್ನೇಹ ಮತ್ತು ಮಾರಿಹಾಳ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ

ನವದೆಹಲಿ: 5 ರಿಂದ 18 ವರ್ಷದೊಳಗಿನ ಎಂಟು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪದ ಮೇಲೆ ಬಂಧಿನಕ್ಕೊಳಗಾಗಿರುವ ತಮಿಳುನಾಡಿನ 35 ವರ್ಷದ ಪಿಎಚ್‌ಡಿ ಸಂಶೋಧನಾ ವಿದ್ಯಾರ್ಥಿ ವಿರುದ್ಧ ಸಿಬಿಐ ಚಾರ್ಜ್ ಶೀಟ್ ಸಲ್ಲಿಸಿದೆ ಎಂದು ಶುಕ್ರವಾರ ಅಧಿಕಾರಿಗಳು ಹೇಳಿದ್ದಾರೆ.

ತಮಿಳುನಾಡಿನ ತಂಜಾವೂರಿನ ಪೋಕ್ಸೊ(ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ) ನ್ಯಾಯಾಲಯಕ್ಕೆ ಸಿಬಿಐ ಇತ್ತೀಚೆಗೆ ಸಲ್ಲಿಸಿದ ಚಾರ್ಜ್ ಶೀಟ್‌ನಲ್ಲಿ, ಆರೋಪಿ ವಿಕ್ಟರ್ ಜೇಮ್ಸ್ ರಾಜಾ ಕಳೆದ ನಾಲ್ಕು ವರ್ಷಗಳಿಂದ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ ಎಂದು ಕೇಂದ್ರ ತನಿಖಾ ಸಂಸ್ಥೆ(ಸಿಬಿಐ) ಆರೋಪಿಸಿದೆ.

ಆರೋಪಿ, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿದ ಫೋಟೋಗಳು ಹಾಗೂ ವಿಡಿಯೋಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಾಕುವುದಾಗಿ ಬೆದರಿಕೆ ಹಾಕಿದ್ದಾನೆ.

ಅಲ್ಲದೆ ಇತರ ವಯಸ್ಕರೊಂದಿಗಿನ ಲೈಂಗಿಕ ಕ್ರಿಯೆಗಳನ್ನು ವೀಕ್ಷಿಸುವಂತೆ ಅವರ ಮೇಲೆ ಒತ್ತಡ ಹಾಕಿದ್ದಾನೆ" ಎಂದು ಸಿಬಿಐ ವಕ್ತಾರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂಟರ್‌ಪೋಲ್‌ನ ದತ್ತಾಂಶ ಸಂಗ್ರಹಣೆಯಿಂದ ಈ ಚಿತ್ರಗಳು ಹಾಗೂ ವಿಡಿಯೋಗಳು ಸಿಬಿಐಗೆ ದೊರಕಿದ್ದವು. ನಂತರ ಡಿಜಿಟಲ್ ವಿಧಿವಿಜ್ಞಾನ ಉಪಕರಣಗಳನ್ನು ಬಳಸಿಕೊಂಡು ನಡೆಸಿದ ತನಿಖೆಯಿಂದ ತಂಜಾವೂರಿನ ಈ ಕಾಮುಕನ ಕೃತ್ಯ ಬೆಳಕಿಗೆ ಬಂದಿತ್ತು.

ಕೃತ್ಯಕ್ಕೆ ಬಳಸಲಾದ ಎಲೆಕ್ಟ್ರಾನಿಕ್ ಉಪಕರಣಗಳನ್ನು ಆರೋಪಿಗೆ ಸಂಬಂಧಿಸಿದ ಜಾಗಗಳಲ್ಲಿ ಶೋಧ ನಡೆಸಿ ವಶಪಡಿಸಿಕೊಳ್ಳಲಾಗಿದೆ.

## ಇಂದಿನಿಂದ ನಾಗದೇವತೆ, ನಾಗಚೌಡೇಶ್ವರಿ ಅಮ್ಮನವರ ಮೂರ್ತಿಪ್ರತಿಷ್ಠಾಪನೆ, ಮಹಾ ಚಂಡಿಕಾ ಯಾಗ

ಕೊಪ್ಪಳ : ಜಿಲ್ಲೆಯ ಕುಕನೂರು ತಾಲೂಕಿನ ಐತಿಹಾಸಿಕ ಇಟಗಿ ಗ್ರಾಮದ ಸುರ್ವೆ ಮನೆತನದ ಜಾಗದಲ್ಲಿ ನಿರ್ಮಾಣಗೊಂಡಿರುವ ಜಿಲ್ಲೆಯ ಮೊದಲ ನಾಗದೇವರು ಮತ್ತು ನಾಗಚೌಡೇಶ್ವರಿ ಅಮ್ಮನವರ ದೇವಸ್ಥಾನದ ಮೂರ್ತಿ ಪ್ರತಿಷ್ಠಾಪನೆ ಮತ್ತು ಮಹಾಚಂಡಿಕಾ ಯಾಗವನ್ನು ಮೇ. 20 ರಿಂದ ಮೂರು ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ.

ಇಟಗಿ ಗ್ರಾಮದ ವಾಟರ್ ಟ್ಯಾಂಕ್ ಹತ್ತಿರ ಇರುವ ಹೊಲದಲ್ಲಿ ವಿಶಾಲವಾದ ಜಾಗದಲ್ಲಿ ನಿರ್ಮಾಣ ಮಾಡಿರುವ ದೇವಸ್ಥಾನವನ್ನು ಲೋಕಾರ್ಪಣೆಗೊಳಿಸುವ ಸಮಾರಂಭ ಐದು ನಾಗದೇವರು ಮತ್ತು ನಾಗಚೌಡೇಶ್ವರಿ ಅಮ್ಮನವರ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗುತ್ತಿದ್ದು, ಸದರಿ



ಸಮಾರಂಭದಲ್ಲಿ ಜಿಲ್ಲೆಯಲ್ಲಿಯೇ ಬೃಹತ್ ಪ್ರಮಾಣದ ಚಂಡಿಕಾ ಯಾಗವನ್ನು ಮೊದಲ ಬಾರಿಗೆ ಉಡುಪಿಯ ಶ್ರೀ ದುರ್ಗಾ ಆದಿಶಕ್ತಿ ಕ್ಷೇತ್ರದ ಧರ್ಮದರ್ಶಿಗಳಾದ ಪೂಜ್ಯ ಶ್ರೀ ರಮಾನಂದ ಗುರೂಜಿ ಅವರ ಮಾರ್ಗದರ್ಶನದಲ್ಲಿ ವೇದಮೂರ್ತಿ ಶ್ರೀ ಕೃಷ್ಣಮೂರ್ತಿ ತಂತ್ರಿಗಳು ಮತ್ತು ಹಿರಿಯ ಪುರೋಹಿತರ ನೇತೃತ್ವದಲ್ಲಿ ಶಾಸ್ತ್ರೋಕ್ತವಾಗಿ ಪೂಜಾ ಕೈಂಕರ್ಯಗಳನ್ನು ಮಾಡುತ್ತಿದ್ದಾರೆ.

ಹಿರಿಯ ಪತ್ರಕರ್ತ ರಮೇಶ ಸುರ್ವೆ ಅವರ ಕನಸಿನ ಆಕಾಂಕ್ಷೆಯಾಗಿರುವ ದೇವಸ್ಥಾನವನ್ನು ತಮ್ಮ ಸ್ವಂತ ಖರ್ಚಿನಿಂದ ಸ್ವಂತ ಜಾಗದಲ್ಲಿ ನಿರ್ಮಿಸಿ ಈ ಭಾಗದಲ್ಲಿ ವಿಶೇಷವಾಗಿ ಸರ್ಪ ದೋಷ, ನಾಗ ದೋಷ ಸೇರಿದಂತೆ ದೋಷಗಳ ಪರಿಹಾರಕ್ಕೆ ಒಂದು ವಿಶೇಷವಾದ ಕ್ಷೇತ್ರ ಮಾಡುವ ಉದ್ದೇಶದಿಂದ ದೇವಸ್ಥಾನ ಮಾಡಿದ್ದು, ಮೂರು ದಿನಗಳ ಕಾಲ ನಡೆಯುವ ಪೂಜಾ ಕೈಂಕರ್ಯ ಮತ್ತು ಪ್ರತಿಷ್ಠಾಪನಾ ಮಹೋತ್ಸವದಲ್ಲಿ ಭಕ್ತರು ಪಾಲ್ಗೊಂಡು ಪ್ರಸಾದ ಸ್ವೀಕರಿಸಬೇಕೆಂದು ಶ್ರೀ ಗೋವಿಂದರಾವ್ ಸುರ್ವೆ ಸ್ಮಾರಕ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್‌ನ ಸದಸ್ಯ ಮಂಜುನಾಥ ಜಿ. ಗೊಂಡಬಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೇ. 20 ರಂದು ಶನಿವಾರ 54 ಕಲಶದೊಂದಿಗೆ ಪೂರ್ಣಕುಂಭ ಮೆರವಣಿಗೆಯಲ್ಲಿ ಭಜನಾ ಮತ್ತು ಸಾಂಸ್ಕೃತಿಕ ಕಲಾ ತಂಡಗಳೊಂಡಿದೆ ಸ್ವಾಗತ ಮೆರವಣಿಗೆ, ವೃತ್ವಿಜರ ಆಗಮನ, ಶಿಲ್ಪಿ ಮರ್ಯಾದೆ, ಸಾಮೂಹಿಕ ಪ್ರಾರ್ಥನೆ. ತೋರಣ ಮುಹೂರ್ತ, ಉಗ್ರಾಣ ಮುಹೂರ್ತ ಹಾಗೂ ದೇವರ ಬಿಂಬ ಅದಿವಾಸ ಪ್ರಕ್ರಿಯೆ ನಂತರ ಮೇ. 21 ರಂದು ಬೆಳಿಗ್ಗೆ 8 ಗಂಟೆಯಿಂದ ಸ್ವಸ್ತಿ ಪುಣ್ಯಹವಾಚನ, ಗಣಪತಿ ಹೋಮ, ಪ್ರತಿಷ್ಠಾ ಹೋಮ, ಪ್ರಧಾನ ಹೋಮ, ಪಂಚವಿಂಶತೆ ಕಲಶಾರಾಧನೆ, ತದನಂತರ ಕಳಶಾಭಿಷೇಕ, ಪವಮಾನ ಹೋಮ, ಕುಶ್ಮಾಂಡ ಹೋಮಬ್ರಹ್ಮ ಗಾಯತ್ರಿ ಹೋಮ, ಸರ್ಪತ್ರಯ ಹೋಮ, ಮಹಾಪೂಜೆ ಸಭಾ ಕಾರ್ಯಕ್ರಮ ಜರುಗುವವು.

ಮೇ 22 ಸೋಮವಾರದಂದು ಪ್ರತಿಷ್ಠ ಪ್ರಧಾನ ಹೋಮ, ಪ್ರತಿಷ್ಠಾ ಕಲಶ ನಂತರ ಶ್ರೀ ನಾಗಚೌಡೇಶ್ವರಿ ದೇವಿಯ ಪ್ರತಿಷ್ಠೆ ಹಾಗೂ ಕಲಶ ಅಭಿಷೇಕ ಜೊತೆಗೆ ಚಂಡಿಕಾ ಯಾಗ, ಬ್ರಾಹ್ಮಣ ಸುವಾಸಿನಿ ಆರಾಧನೆ, ಕನ್ನಿಕಾರಾಧನೆ, ಬ್ರಾಹ್ಮಣಾರಾಧನೆ, ಮಹಾಪೂಜೆ, ಮಹಾಅನ್ನಸಂತರ್ಪಣೆ ಜೊತೆಗೆ ಸಭಾ ಕಾರ್ಯಕ್ರಮ, ಗೌರವ ಪ್ರಧಾನ ಮತ್ತು ಪ್ರಶಸ್ತಿ ಪ್ರಧಾನ ಕಾರ್ಯಕ್ರಮಗಳು ಜರುಗುವವು.

ಸದರಿ ಕಾರ್ಯಕ್ರಮಕ್ಕೆ ಅನೇಕ ಮಠಾದೀಶರು, ಜನಪ್ರತಿನಿಧಿಗಳು ಹಾಗೂ ಸಮಾಜ ಸೇವಕರು, ಧಾರ್ಮಿಕ ಮುಖಂಡರು ಭಾಗವಹಿಸುವರು ಎಂದು ಶ್ರೀ ಗೋವಿಂದರಾವ್ ಸುರ್ವೆ ಸ್ಮಾರಕ ಸಾಮಾಜಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್‌ನ ಪ್ರಕಟಣೆ ತಿಳಿಸಿದೆ.

## ಮೇ. 23 ರಿಂದ ಜೂ.03 ರವರೆಗೆ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆ

ಧಾರವಾಡ: ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ಮೇ. 23 ರಿಂದ ಜೂನ್ 03 ರವರೆಗೆ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳು ಜರುಗಲಿವೆ. 7,330 ವಿದ್ಯಾರ್ಥಿಗಳು ಪೂರಕ ಪರೀಕ್ಷೆ ಬರೆಯಲಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ಅವರು ತಿಳಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಬೆಳಿಗ್ಗೆ ಸಭೆ ಜರುಗಿಸಿ, ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಧಾರವಾಡ ಶಹರ–4, ಹುಬ್ಬಳ್ಳಿ ಶಹರ–5, ನವಲಗುಂದ–1, ಕಲಘಟಗಿ–1, ಕುಂದಗೋಳ–1 ಹೀಗೆ ಒಟ್ಟು 12 ಪರೀಕ್ಷಾ ಕೇಂದ್ರಗಳಲ್ಲಿ ಪೂರಕ ಪರೀಕ್ಷೆ ನಡೆಯಲಿವೆ. ಪರೀಕ್ಷಾ ಅಕ್ರಮಗಳಿಗೆ ಆಸ್ಪದವಿಲ್ಲದಂತೆ ಮತ್ತು ಶಿಸ್ತುಬದ್ಧವಾಗಿ ಪರೀಕ್ಷೆಗಳು ಜರುಗುವಂತೆ ನೋಡಿಕೊಳ್ಳಬೇಕು ಎಂದು ಅವರು ಅಧಿಕಾರಿಗಳಿಗೆ ಹೇಳಿದರು.

ಧಾರವಾಡ–2,923, ಹುಬ್ಬಳ್ಳಿ–3,095, ಕುಂದಗೋಳ–564, ಕಲಘಟಗಿ–388 ಹಾಗೂ ನವಲಗುಂದ–350 ವಿದ್ಯಾರ್ಥಿಗಳು ಸೇರಿ ಒಟ್ಟು 7,330 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ.

ಪೊಲೀಸ್ ಆಯುಕ್ತರು ಮತ್ತು ಪೊಲೀಸ್ ವರಿಗಣ್ಠಾಧಿಕಾರಿಗಳು ಪೊಲೀಸ್ ಬಿಗಿಬಂದೋಬಸ್ತಗಳ ಬಗ್ಗೆ ಸೂಕ್ತ ಕ್ರಮ ವಹಿಸಿದ್ದಾರೆ. ಹೆಸ್ಕಾಂನವರು ಪರೀಕ್ಷಾ ದಿನಗಳಂದು ತಡೆರಹಿತ ವಿದ್ಯುತ್ ಪೂರೈಸಲು ಕ್ರಮ ಕೈಗೊಳ್ಳಬೇಕೆಂದು ಅವರು ಸೂಚಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರನ್ನು ಪರೀಕ್ಷೆಯ ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದ್ದು ಜಿಲ್ಲೆಯಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳಿಗೆ ಸಮಯಕ್ಕೆ ಸರಿಯಾಗಿ ಪ್ರಶ್ನೆ ಪತ್ರಿಕೆಗಳನ್ನು ಕೊಂಡೊಯ್ಯಲು ಒಟ್ಟು 6 ಮಾರ್ಗಗಳನ್ನು ಗುರುತಿಸಿ, ಪ್ರತಿ ಮಾರ್ಗಕ್ಕೆ 3 ಜನ ಅಧಿಕಾರಿಗಳ ತಂಡ ರಚಿಸಿ, 18 ಅಧಿಕಾರಿಗಳನ್ನು ಮಾರ್ಗಾಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಜಿಲ್ಲೆಯಲ್ಲಿ 12 ಜನ ವೀಕ್ಷಕರನ್ನು ನೇಮಿಸಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸಿಟಿಂಗ್ ಸ್ಕ್ವಾಡ್ ಭೇಟಿ ನೀಡಿ ಪರೀಕ್ಷೆಗಳನ್ನು ಯಶಸ್ವಿಯಾಗಿ ಜರುಗಿಸಬೇಕೆಂದು ಅಪರ ಜಿಲ್ಲಾಧಿಕಾರಿಗಳು ನಿರ್ದೇಶಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕೃಗಣ್ಣ ನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ತಡಸಿನಕೊಪ್ಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತುಪಾಲನಾ ಕಾಮಗಾರಿ ಮುಂದೂಡಿಕೆ

ಧಾರವಾಡ: ಹೆಸ್ಕಾಂ 110/11 ಕೆವಿ. ತಡಸಿನಕೊಪ್ಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಮೇ.20 ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು 1ನೇ ತ್ರೈಮಾಸಿಕ ತುರ್ತುಪಾಲನಾ ಕಾಮಗಾರಿಯನ್ನು ಕೈಗೊಳ್ಳಲು ಯೋಜಿಸಲಾಗಿತ್ತು. ಆದರೆ ಸದರಿ ಕೆಲಸವನ್ನು ತಾಂತ್ರಿಕ ಕಾರಣಾಂತರಗಳಿಂದ ಮುಂದೂಡಲಾಗಿದೆ ಎಂದು ಹೆಸ್ಕಾಂ ಕಾರ್ಯನಿವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನುಪಯುಕ್ತ ಸಾಮಗ್ರಿಗಳು ಹಾಗೂ ಪೀಠೋಪಕರಣಗಳ ಬಹಿರಂಗ ಹರಾಜು

ಧಾರವಾಡ: ಅನುಪಯುಕ್ತ ಪೀಠೋಪಕರಣ ಹಾಗೂ ಯಂತ್ರೋಪಕರಣಗಳನ್ನು ಕಲಘಟಗಿಯ ದಾಸ್ತಿಕೊಪ್ಪದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಜೂನ್ 12 ರಂದು ಬಹಿರಂಗ ಹರಾಜು ನಡೆಸಲಾಗುವುದು.

ಹರಾಜಿನಲ್ಲಿ ಭಾಗವಹಿಸಲು ಇಚ್ಛಿಸುವವರು ಪ್ರಕ್ರಿಯೆಯು ಪ್ರಾರಂಭವಾಗುವ ಮೊದಲೇ ಸದರಿ ದಿನದ 10 ಗಂಟೆಯ ಒಳಗೆ ರೂ.2,000 (ಎರಡು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ಠೇವಣಿ ನಗದು ರೂಪದಲ್ಲಿ ಇಡಬೇಕು. ಮುಂಗಡ ಠೇವಣಿ ಪಾವತಿಸುವವರಿಗೆ ಮಾತ್ರ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಹರಾಜಿನ ದಿನದಂದು ಹರಾಜು ಪ್ರಕ್ರಿಯೆಯು ಹಾಗೂ ಹರಾಜಿನ ಮೊತ್ತ ತೃಪ್ತಿಕರವಾಗಿಲ್ಲದಿದ್ದಲ್ಲಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ಸಂಪೂರ್ಣ ಅಧಿಕಾರವು ಸಂಸ್ಥೆಯ ಪ್ರಾಚಾರ್ಯರಿಗೆ ಇರುತ್ತದೆ

ಸಾಮಗ್ರಿಗಳನ್ನು ವೀಕ್ಷಿಸಲು ಇಚ್ಛಿಸುವವರು ಕಛೇರಿಯ ಕೆಲಸದ ದಿನಗಳಂದು ಮದ್ಯಾಹ್ನ 3 ರಿಂದ 5 ಗಂಟೆಯ ಅವಧಿಯಲ್ಲಿ ವೀಕ್ಷಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9844480235 ಸಂಪರ್ಕಿಸಬಹುದೆಂದು ಕಲಘಟಗಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿರುಪಯುಕ್ತ ಅರಣ್ಯ ವಸತಿ ಗೃಹಗಳ ಮಾಲು ಹರಾಜು

ಧಾರವಾಡ: ಅರಣ್ಯ ಸಂಕೀರ್ಣದಲ್ಲಿರುವ ಅರಣ್ಯ ವಸತಿಗೃಹಗಳ ಸಂಖ್ಯೆ–43, 44, 45 ಮತ್ತು ಬಣದೂರದಲ್ಲಿರುವ 5 ಅರಣ್ಯ ವಸತಿಗೃಹಗಳು, ಮಾವಿನಕೊಪ್ಪದಲ್ಲಿರುವ 4 ಅರಣ್ಯ ವಸತಿಗೃಹಗಳು ನಿರುಪಯುಕ್ತ ಅರಣ್ಯ ವಸತಿಗೃಹಗಳನ್ನು ನೆಲಸಮಗೊಳಿಸುವ ಉದ್ದೇಶಿಸಿದೆ. ವಸತಿ ಗೃಹಗಳಿಂದ ಹೊರಡಬಹುದಾದ ಮಾಲನ್ನು ಇದ್ದ ಸ್ಥಿತಿಯಲ್ಲಿ ಮೇ.26 ಹಾಗು 29 ರಂದು ಮಧ್ಯಾಹ್ನ 3ಗಂಟೆಗೆ ವಲಯ ಅರಣ್ಯ ಅಧಿಕಾರಿ ಕಛೇರಿ ಆವರಣದಲ್ಲಿ ಹರಾಜು ಮಾಡಲಾಗುವದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0836–2447092 ಸಂಪರ್ಕಿಸಬಹುದೆಂದು ಉಪವಿಭಾಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ: ನಿಯಂತ್ರಣ ತಪ್ಪಿ ಮರಕ್ಕೆ ಬೈಕ್ ಡಿಕ್ಕಿ; ಅಪ್ರಾಪ್ತ ಬಾಲಕರಿಬ್ಬರು ಸ್ಥಳದಲ್ಲೇ ಸಾವು

ಗದಗ: ಸವಾರನ ನಿಯಂತ್ರಣ ತಪ್ಪಿ ಬೈಕ್ ಒಂದು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಅಪ್ರಾಪ್ತ ಬಾಲಕರು ಸಾವನ್ನಪ್ಪಿರುವ ಘಟನೆ ಗದಗ ಜಿಲ್ಲೆ ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದ ಬಳಿ ನಡೆದಿದೆ.

ಮೃತರನ್ನು 15 ವರ್ಷದ ಶ್ರೀಧರ ಗಡಗಿ ಹಾಗೂ 16 ವರ್ಷದ ಅನೂಪ್ ಕುಮಾರ ಇಟಗಿ ಎಂದು ಗುರುತಿಸಲಾಗಿದೆ. ಒಂದು ಬೈಕ್ ನಲ್ಲಿ ಮೂವರು ತೆರಳುತ್ತಿದ್ದಾಗ ಈ ಅಪಘಾತ ಸಂಭವಿಸಿದ್ದು ಶ್ರೀಧರ ಗಡಗಿ ಮತ್ತು ಅನೂಪ್ ಸ್ಥಳದಲ್ಲೇ ಸಾವನ್ನಪ್ಪಿದ್ದರೆ ಮೌನೇಶ ಎಂಬಾತ ಗಂಭೀರವಾಗಿ ಗಾಯಗೊಂಡಿದ್ದು ಆತನನ್ನು ಗದಗ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಮಕ್ಕಳನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿದೆ. ಇನ್ನು ಅಪಘಾತಕ್ಕೆ ಸಂಬಂಧಿಸಿದಂತೆ ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರಸ್ತೆ ಡಾಂಬರೀಕರಣಕ್ಕೆ ಆಗ್ರಹ



ಇಂಡಿ: ಪಟ್ಟಣದ 19ನೇ ವಾರ್ಡಿನ ದೇವರ ಅವರ ಮನೆಯಿಂದ ವಿಜಯಪುರ ರಸ್ತೆ ಕೂಡುವ ಡಾ॥ ಸಂತೋಷ ಪಾಟೀಲ ದವಾಖಾನೆ ಕೂಡುವ ರಸ್ತೆ ಡಾಂಬರೀಕರಣ ಮಾಡಲು 19 ನೇ ವಾರ್ಡಿನ ಸದಸ್ಯ ಉಮೇಶ ದೇಗಿನಾಳ ಆಗ್ರಹಿಸಿದ್ದಾರೆ.

ಸುಮಾರು ದಿನಗಳ ಕಾಲ ರಸ್ತೆ ಕೆದರಿ ಬಿಡಲಾಗಿತ್ತು. ನಂತರ ಕೆಲವು ದಿನಗಳ ಕಾಲ ಗರಸು ಹಾಕಿ ಬಿಡಲಾಗಿತ್ತು. ಈಗ ಕಳೆದ ಎರಡು ತಿಂಗಳಿಂದ ಖಡಿ ಹಾಕಿ ಬಿಟ್ಟಿದ್ದಾರೆ.

ಕಳೆದ ಎರಡು ತಿಂಗಳಿಂದ ಡಾಂಬರೀಕರಣ ಭಾಗ್ಯ ಸಿಕ್ಕಿಲ್ಲ. ಇದರಿಂದ ಸಾರ್ವಜನಿಕರು ತಿರುಗಾಡಲು ತೊಂದರೆ ಯಾಗುತ್ತಿದೆ. ದೊಡ್ಡ ವಾಹನ ಹೋಗುವಾಗ ಖಡಿ ಹಾರಿ ಮಕ್ಕಳಿಗೆ ಸಾರ್ವಜನಿಕರಿಗೆ ಬಡಿದು ತೊಂದರೆ ಯಾಗುತ್ತಿದೆ.

## "ನನ್ನ ಲೈಪ್ ನನ್ನ ಸ್ವಚ್ಛ ನಗರ" ಅಭಿಯಾನ ಮೇ.20 ರಿಂದ ಜೂನ್.5 ರವರೆಗೆ

ಬೆಳಗಾವಿ: ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಸ್ವಚ್ಛ ಭಾರತ ಮಿಷನ್ ನಗರ 2.0 ಯೋಜನೆಯಡಿ ರಾಷ್ಟ್ರಮಟ್ಟದಲ್ಲಿ ಹೆಚ್ಚಿನ ರೀತಿಯಲ್ಲಿ ಪರಿಣಾಮ ಬೀರುವ "ನನ್ನ ಲೈಪ್ ನನ್ನ ಸ್ವಚ್ಛ ನಗರ" ಅಭಿಯಾನವನ್ನು ಮೇ.20 2023 ರಿಂದ ಜೂನ್.5 2023 ರ ವರೆಗೆ ಹಮ್ಮಿಕೊಳ್ಳಲಾದೆ.

ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್ ಸೇರಿದಂತೆ ಆಟಿಕೆ ವಸ್ತುಗಳು, ಬಳಸಿದ ಬಟ್ಟೆ, ದಿನಪತ್ರಿಕೆಗಳು, ಹಳೆಯ ಪುಸ್ತಕಗಳು ಹಾಗೂ ಎಲೆಕ್ಟ್ರಾನಿಕ್ ವಸ್ತುಗಳಂತಹ 06 ಬಗೆಯ ನವೀಕರಿಸಿ ಮರುಬಳಸಬಹುದಾದಂತಹ ವಸ್ತುಗಳ ಉತ್ಪಾದನೆಯನ್ನು ಕಡಿಮೆಗೊಳಿಸಲು ಮತ್ತು ಸುಸ್ಥಿರ ಜೀವನ ಪದ್ದತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಪರಿಸರವನ್ನು ರಕ್ಷಿಸುವುದು ಲೈಪ್ ಮಿಷನ್‌ನ ಪ್ರಮುಖ ಉದ್ದೇಶವಾಗಿರುತ್ತದೆ.

ಅದರಂತೆ "ಮೇರಿ ಲೈಪ್ ಮೇರಾ ಸ್ವಚ್ಛ ಶಹರ" ಯೋಜನೆಯಡಿ "ನನ್ನ ಜೀವನ ನನ್ನ ಸ್ವಚ್ಛ ನಗರ" ಕಾರ್ಯಕ್ರಮವನ್ನು ಬೆಳಗಾವಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Reduce/ಕಡಿಮೆಗೊಳಿಸುವುದು, Reuse/ಮರುಬಳಕೆ & Recycle/ ಮರುಬಳಕೆ ಕುರಿತು ಒಟ್ಟು 12 (RRR) ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸದರಿ ಕೇಂದ್ರಗಳನ್ನು ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ತೆರೆದಿಡಲಾಗುವುದು.

**ಕೇಂದ್ರಗಳ ವಿವರ :**

ಧನಶ್ರೀ ಗಾರ್ಡನ್ ಭಾಗ್ಯನಗರ–7996742132, ಒಣತ್ಯಾಜ್ಯ ಘಟಕ, ಉದ್ಯಮಬಾಗ –8073639893, ಚಿದಂಬರ್ ನಗರ – 7795120447, ಪೌರಕಾರ್ಮಿಕರ ವಸತಿ ಗೃಹ ಶಹಾಪೂರ – 8496044180, ಖಾಸಭಾಗ ನೈಟ್ ಶೆಲ್ಟರ್ – 8884868208, ಬೀಟ್ ಕಚೇರಿ ಕಪಿಲೇಶ್ವರ – 8892865133, ಕಾಂದಾ ಮಾರ್ಕೆಟ್ – 9535362132, ಬಡಕಲ್ ಗಲ್ಲಿ ಸೆಂಟ್ರಲ್ ಲೈಬ್ರರಿ ಹತ್ತಿರ – 7795762838, ಸ್ಪೋರ್ಟ ಕಾಂಪ್ಲೆಕ್ಸ್, ಸರದಾರ ಗ್ರೌಂಡ್–948055669, ಸದಾಶಿವ ನಗರ – 9945015371, ಅಶೋಕ ನಗರ ಸ್ಪೋರ್ಟ ಕಾಂಪ್ಲೆಕ್ಸ್ –9900680087, ಕೋಟೆಕೆರೆ – 8904893370

ಸದರಿ RRR ಕೇಂದ್ರಗಳಲ್ಲಿ ಈ ಕೆಳಗೆ ನಮೂದಿಸಿದ ತ್ಯಾಜ್ಯ ವಸ್ತುಗಳು ನೀಡಿದಲ್ಲಿ ಸಾರ್ವಜನಿಕ–ರಿಗೆ ಪ್ರೋತ್ಸಾಹ ಸಾಮಗ್ರಿಗಳನ್ನು ಹಾಗೂ ಡಿಜಿಟಲ್ ಪ್ರಮಾಣ ಪತ್ರವನ್ನು ನೀಡಲಾಗುವುದು. ಕೊಡುಗೆಗಳಿಗೆ ನೀಡುವ ಪ್ರೋತ್ಸಾಹಗಳ ವಿವರ:

ಆಟಿಕೆಗಳು–ಸ್ಟೇಷನರಿ ವಸ್ತುಗಳು (ಉದಾಹರಣೆಗೆ–ಪೆನ್, ಪೆನ್ಸಿಲ್, ಕ್ರೆಯಾನ್ಸ್) ಬಟ್ಟೆ–ಹಳೆಯ ಜೀನ್ಸ್, ಸಮವಸ್ತ್ರ ಮತ್ತು ಸೀರೆಗಳು (ಬಟ್ಟೆಯನ್ನು ಮರುಬಳಕೆ ಮಾಡುವಂತೆ ಒದಗಿಸಿದರೆ) –ಸಾವಯವ ಗೊಬ್ಬರ (1 ಕೆ.ಜಿ & 2 ಕೆ.ಜಿ)

ದಿನ ಪತ್ರಿಕೆ/ ಮಾಸಿಕ ಪತ್ರಿಕೆ–ಲೇಖನ ಸಾಮಗ್ರಿಗಳು (ಉದಾಹರಣೆ– ಪೆನ್, ಹಳೆಯ ಪುಸ್ತಕಗಳು)

ಪ್ಲಾಸ್ಟಿಕ್ ಕ್ಯಾರಿ ಬ್ಯಾಗಗಳು– ಪ್ರತಿ 250 ಗ್ರಾಂ ಪ್ಲಾಸ್ಟಿಕ್ ಚೀಲಗಳಿಗೆ 1 ಕೆ.ಜಿ ಸಾಮರ್ಥ್ಯದ ಬಟ್ಟೆಯ ಚೀಲ

ಎಲೆಕ್ಟ್ರಾನಿಕ್ ವಸ್ತುಗಳು – ಡಿಜಿಟಲ್ ಪ್ರಮಾಣ ಪತ್ರ

ಸಾರ್ವಜನಿಕರು ಮೇ–20 ರಿಂದ ಜೂನ್–05 ರ ವರೆಗೆ ಜರಗುವ "ನನ್ನ ಜೀವನ ನನ್ನ ಸ್ವಚ್ಛ ನಗರ" ಕಾರ್ಯಕ್ರಮದಡಿ 06 ವಿವಿಧ ಬಗೆಯ ಮರುಬಳಕೆ ವಸ್ತುಗಳನ್ನು ಮೇಲ್ಕಾಣಿಸಿದ (RRR) ಕೇಂದ್ರಗಳಿಗೆ ನೀಡಿ ಅಭಿಯಾನವನ್ನು ಯಶಸ್ವಿಗೊಳಿಸಲು ಮಹಾನಗರ ಪಾಲಿಕೆ ಬೆಳಗಾವಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುಜಿ ಸಿಇಟಿ ಪರೀಕ್ಷೆ: ಸಿಆರ್‌ಪಿಸಿ 144 ಕಲಂ ಜಾರಿ

ಬೆಳಗಾವಿ: 2023 ನೇ ಸಾಲಿನ ಯುಜಿ ಸಿಇಟಿ ಪರೀಕ್ಷೆಗಳು ಮೇ 20. 2023 ರಿಂದ ಮೇ 22. 2023 ರ ವರೆಗೆ ನಡೆಯುಲಿದ್ದು, ಪರೀಕ್ಷಾ ವೇಳೆಯಲ್ಲಿ ಪರೀಕ್ಷಾ ಕೇಂದ್ರದ ಸುತ್ತ ಮುತ್ತಲಿನ 200 ಮೀ. ಪ್ರದೇಶದಲ್ಲಿ ಸಿಆರ್‌ಪಿಸಿ 144 ಕಲಂ ಜಾರಿಗೊಳಿಸಿ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಆದೇಶ ಹೊರಡಿಸಿರುತ್ತಾರೆ.

ನಗರದ–17 ಕೇಂದ್ರಗಳಲ್ಲಿ 6728 ವಿದ್ಯಾರ್ಥಿಗಳು ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ನಾಲ್ಕು ತಾಲೂಕುಗಳಾದ ಚಿಕ್ಕೋಡಿ–07, ಗೋಕಾಕ–07, ನಿಪ್ಪಾನಿ–03, ಅಥಣಿ–06 ಹಿಗೆ ಒಟ್ಟು–23 ಕೇಂದ್ರಗಳಲ್ಲಿ 8483 ವಿದ್ಯಾರ್ಥಿಗಳು ಒಟ್ಟಾರೆಯಾಗಿ ಜಿಲ್ಲೆಯ 40 ಪರೀಕ್ಷಾ ಕೇಂದ್ರಗಳಲ್ಲಿ 15211 ವಿದ್ಯಾರ್ಥಿಗಳು ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗುತ್ತಿದ್ದಾರೆ.

ಮೇ 20. 2023 ರಂದು ಬೆಳಿಗ್ಗೆ 10.30 ರಿಂದ 11.50 ಗಂಟೆವರೆಗೆ ಜೀವಶಾಸ್ತ್ರ ಮತ್ತು (ಮಧ್ಯಾಹ್ನ) 2:30 ರಿಂದ 3:50 ಗಂಟೆವರೆಗೆ ಗಣಿತ ಹಾಗೂ ಮೇ 21. 2023 ರಂದು ಬೆಳಿಗ್ಗೆ 10.30 ರಿಂದ 11.50 ಗಂಟೆವರೆಗೆ ಭೌತಶಾಸ್ತ್ರ ಮತ್ತು (ಮಧ್ಯಾಹ್ನ) 2:30 ರಿಂದ 3:50 ಗಂಟೆವರೆಗೆ ರಸಾಯನಶಾಸ್ತ್ರ ಹಾಗೂ ಮೇ 22. 2023 ರಂದು ಬೆಳಿಗ್ಗೆ 11.30 ರಿಂದ 12.30 ಗಂಟೆವರೆಗೆ ಬೆಳಗಾವಿ ಜಿಲ್ಲೆಗೆ ಸಂಬಂಧಿಸಿದಂತೆ ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಪ್ರವೇಶ ಪರೀಕ್ಷೆಗಳು ನಡೆಯಲಿವೆ.

ಜಿಲ್ಲಾ ಖಜಾನೆ, ಉಪಖಜಾನೆಯಿಂದ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆಗಳನ್ನು ತಲುಪಿಸಲು ತ್ರಿಸದಸ್ಯರನ್ನು ಒಳಗೊಂಡ 12 ತಂಡಗಳನ್ನು ರಚಿಸಲಾಗಿದೆ.ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರನ್ನು ಜಿಲ್ಲಾ, ತಾಲ್ಲೂಕಾ ಮಟ್ಟದ ಎ ಮತ್ತು ಬಿ ವೃಂದದ ಅಧಿಕಾರಿಯನ್ನು ವೀಕ್ಷರರಾಗಿ ನೇಮಿಸಲಾಗಿದೆ.

ಪರೀಕ್ಷಾ ಕೇಂದ್ರದ ಸಮೀಪದಲ್ಲಿರುವ ಝರಾಕ್ಸ್ ಅಂಗಡಿಗಳನ್ನು ಬಂದ ಮಾಡಲು ಕ್ರಮಕೈಗೊಂಡಿದ್ದು ಜೊತೆಗೆ ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಹಾಗೂ ವಿದ್ಯುನ್ಮಾನ ವಸ್ತುಗಳನ್ನು ನಿಷೇಧಿಸಿದೆ.ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸೂಕ್ತ ಪೋಲೀಸ ಬಂಧೋಬಸ್ತ ಒದಗಿಸಲಾಗಿಸಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.20 ಹಾಗೂ 21 ರಂದು ವೃತ್ತಿಪರ ಕೋರ್ಸಗಳ ಪ್ರವೇಶಕ್ಕಾಗಿ ಕೆ–ಸಿಇಟಿ ಪರೀಕ್ಷೆ

ಧಾರವಾಡ: ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ವತಿಯಿಂದ ಜರುಗುವ ವೃತ್ತಿಪರ ಕೋರ್ಸ್ಗಳ ಪ್ರವೇಶಕ್ಕಾಗಿ 2023 ನೇ ಸಾಲಿನ ಸಾಮಾನ್ಯ ಪರೀಕ್ಷೆಗಳು ಮೇ.20 ಹಾಗೂ 21 ರಂದು ಜರುಗಲಿವೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ ತಿಳಿಸಿದ್ದಾರೆ.



ಅವರು ಈ ಕುರಿತು ಮೇ.18 ರಂದು ಸಂಜೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ಜರುಗಿಸಿ, ಕೆ–ಸಿಇಟಿ ಸಿದ್ಧತೆ ಪರಿಶೀಲಿಸಿ ಮಾತನಾಡಿದರು.

ಮೇ 20 ಮತ್ತು 21 ರಂದು ಪರೀಕ್ಷೆಯ 1ನೇ ಅಧಿವೇಶನ 10–30 ದಿಂದ 11–50 ಹಾಗೂ 2ನೇ ಅಧಿವೇಶನ 2–30 ರಿಂದ 3–50 ರವರೆಗೆ ನಡೆಯಲಿವೆ. ಒಟ್ಟು 11,101 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಧಾರವಾಡ–16, ಹುಬ್ಬಳ್ಳಿ–13 ಸೇರಿ ಒಟ್ಟು–29 ಪರೀಕ್ಷಾ ಕೇಂದ್ರಗಳಿವೆ. ಧಾರವಾಡ ಹಾಗೂ ಹುಬ್ಬಳ್ಳಿ ತಾಲ್ಲೂಕು ಕೇಂದ್ರಗಳಲ್ಲಿ ಪ್ರತಿ ತಾಲ್ಲೂಕಿಗೆ ತಹಶೀಲದಾರ ರವರನ್ನು ಒಳಗೊಂಡಂತೆ ತ್ರಿಸದಸ್ಯ ಸಮಿತಿ ರಚಿಸಲಾಗಿದೆ. ಹಾಗೂ ಪ್ರಶ್ನೆ ಪತ್ರಿಕೆಗಳನ್ನು ವಿತರಣೆ ಮಾಡಲು ಹಾಗೂ ಪರೀಕ್ಷೆ ಮುಗಿದ ನಂತರ ಪರೀಕ್ಷಾ ಸಾಮಗ್ರಿಗಳನ್ನು ಜಿಲ್ಲಾ ತ್ರಿಸದಸ್ಯ ಸಮಿತಿಗೆ ಒಪ್ಪಿಸಲು ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಮಾರ್ಗಗಳ ಒಂದನೇ ತಂಡದ ಅಧಿಕಾರಿರವರು ತಮ್ಮ ಕಛೇರಿ ವಾಹನವನ್ನು ಪಡೆದು ಪರೀಕ್ಷಾ ಕಾರ್ಯಕ್ಕೆ ಉಪಯೋಗಿಸಬೇಕು.

ಪ್ರತಿ ಪರೀಕ್ಷಾ ಕೇಂದ್ರಕ್ಕೆ ಒಬ್ಬರಂತೆ ಸಹಾಯಕ ಕಮೀಶನರ್ ಹುದ್ದೆಗಿಂತ ಕಡಿಮೆ ಅಲ್ಲದ ಒಟ್ಟು 29 ವಿವಿಧ ಕಾಲೇಜುಗಳ ಪ್ರಾಧ್ಯಾಪಕರನ್ನು ವೀಕ್ಷಕರನ್ನಾಗಿ ನೇಮಿಸಿದೆ. ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಅಭ್ಯರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪ್ರತಿ 24 ಅಭ್ಯರ್ಥಿಗಳಿಗೆ ಒಬ್ಬರು ಕೊಠಡಿ ಮೇಲ್ವಿಚಾರಕರನ್ನು ನೇಮಿಸಿದೆ. ವಿಜ್ಞಾನ ವಿಷಯದ ಉಪನ್ಯಾಸಕರನ್ನು ಕೊಠಡಿ ಮೇಲ್ವಿಚಾಕರನ್ನಾಗಿ ನೇಮಿಸಿಕೊಳ್ಳದಂತೆ ಕ್ರಮ ವಹಿಸಿದೆ ಎಂದು ಅವರು ಹೇಳಿದರು.

ಪೊಲೀಸ್ ಆಯುಕ್ತರು ಮತ್ತು ಪೊಲೀಸ್ ವರಿಗಣ್ಣಧಿಕಾರಿಗಳು ಪೊಲೀಸ್ ಬಿಗಿಬಂದೋಬಸ್ತಗಳ ಬಗ್ಗೆ ಸೂಕ್ತ ಕ್ರಮ ವಹಿಸಿದ್ದಾರೆ. ಪ್ರತಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ವ್ಯಾಪ್ತಿಯಲ್ಲಿ ಜೆರಾಕ್ಸ್ ಅಂಗಡಿಗಳನ್ನು, ಕಂಪ್ಯೂಟ–ರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಬಂದ ಮಾಡಲು ಕ್ರಮ ಜರುಗಿಸಲಾಗಿದೆ. ಹಾಗೂ ನಿಷೇದಾಜ್ಞೆ ಜಾರಿ ಮಾಡಲಾಗುವುದು. ಈಗಾಗಲೇ ಗುರುತಿಸಿದ ಮಾರ್ಗಗಳಿಗೆ ಮಾರ್ಗ ಭದ್ರತೆ ಒದಗಿಸಲು ಒಟ್ಟು 8 ಜನ ಸಶಸ್ತ್ರ ಪೊಲೀಸ್ ಸಿಬ್ಬಂದಿ ನೇಮಿಸಿದೆ. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲಾಗುವುದು. ಹೆಸ್ಕಾಂನವರು ಪರೀಕ್ಷಾ ದಿನಗಳಂದು ತಡೆರಹಿತ ವಿದ್ಯುತ್ ಪೂರೈಸಲು ಕ್ರಮ ಕೈಗೊಳ್ಳಬೇಕೆಂದು ಸ್ರಚಿಸಿದರು. ಸಭೆಯಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೃಷ್ಣಾ ನಾಯಕ, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು, ಜಿಲ್ಲಾಧಿಕಾರಿಗಳ ಹಾಗೂ ಪದವಿಪೂರ್ವ ಶಿಕ್ಷಣ ಇಲಾಖೆ, ಧಾರವಾಡ ಪರೀಕ್ಷಾ ವಿಭಾಗದ ಸಿಬ್ಬಂದಿಗಳು ಇದ್ದರು.

## ಲೋಕಾಯುಕ್ತ ಬಲೆಗೆ ಭೂ ಮಾಪನ ಅಧಿಕಾರಿ

ಚಿಕ್ಕೋಡಿ: ಸರ್ವೆ ಮಾಡಲು ಲಂಚ ಪಡೆಯುತ್ತಿದ್ದ ಚಿಕ್ಕೋಡಿಯ ಭೂ ಮಾಪನ ಇಲಾಖೆಯ ಅಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಭೂಮಾಪನ ಇಲಾಖೆಯ ಸೂಪರ್ ವೈಸರ್ ಎಸ್.ಎಂ.ಕಲ್ಯಾಣ ಶೆಟ್ಟಿ ಲೋಕಾಯುಕ್ತ ಬಲೆಗೆ ಬಿದ್ದವರು. 6 ಸಾವಿರ ರೂ. ಲಂಚ ಪಡೆಯುತ್ತಿದ್ದಾಗ ಅವರನ್ನು ರೆಡ್ ಹ್ಯಾಂಡ್ ಆಗಿ ಹಿಡಿಯಲಾಗಿದೆ.

ಸಿದ್ದಪ್ಪ ಪೂಜಾರಿ ಎನ್ನುವವರಿಂದ ಸರ್ವೆ ಕಾರ್ಯಕ್ಕಾಗಿ ಲಂಚ ಪಡೆಯುತ್ತಿದ್ದರು.

ವಿವರ: ಜಮೀನುಗಳ 11ಇ ನಕ್ಷೆ ಅವಧಿ ವಿಸ್ತರಿಸಿ ಕೊಡಲು ಲಂಚ ಸ್ವೀಕರಿಸುವ ವೇಳೆ ಚಿಕ್ಕೋಡಿಯ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿಯ ಸೂಪರ್‌ವೈಸರ್ ಲೋಕಾಯುಕ್ತ ಬಲೆಗೆ ಫಿರ್ಯಾದಿ ಸಿದ್ದಾರ್ಥ ಹಾಲಪ್ಪ ಪೂಜಾರಿ ಸಾ: ಸೌಂದಲಗಾ ತಾ: ನಿಪ್ಪಾಣಿ ಜಿ: ಬೆಳಗಾವಿ ಇವರ ಮಾಲ್ಕಿಯ ಸೌಂದಲಗಾ ಮತ್ತು ಭೀವಸಿ ಗ್ರಾಮದ ಒಟ್ಟು 12 ಸರ್ವೇ ನಂಬರ್‌ಗಳ 11ಇ ನಕ್ಷೆ ಅವಧಿಯನ್ನು ವಿಸ್ತರಿಸಿ ಕೊಡಲು ಚಿಕ್ಕೋಡಿಯ ಭೂದಾಖಲೆಗಳ ಸಹಾಯಕ ನಿರ್ದೇಶಕರ ಕಛೇರಿಯ ಸೂಪರ್‌ವೈಸರ್ ಸತೀಶ ಎಮ್ ಕಲ್ಯಾಣಶೆಟ್ಟಿ ಇವರು 6000/– ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರಿಂದ ದಿನಾಂಕ: 17.05.2023 ರಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ ಬೆಳಗಾವಿಯಲ್ಲಿ ದೂರು ನೀಡಿದ್ದರು. ಈ ದೂರಿನ ಹಿನ್ನಲೆಯಲ್ಲಿ ಲೋಕಾಯುಕ್ತ ಠಾಣೆಯ ಅನ್ನಪೂರ್ಣ ಹುಲಗೂರ ಪೊಲೀಸ್ ನಿರೀಕ್ಷಕರು ಇವರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಕೊಂಡಿರುತ್ತಾರೆ.

ಪ್ರಕರಣದಲ್ಲಿ ಕರ್ನಾಟಕ ಲೋಕಾಯುಕ್ತ ಡಿಜಿಪಿ ಪ್ರಶಾಂತಕುಮಾರ ಠಾಕೂರ ಐಪಿಎಸ್ ಹಾಗೂ ಸುಬ್ಬಮಣೇಶ್ವರ ರಾವ್ ಐಪಿಎಸ್, ಐಜಿಪಿ ರವರ ಮಾರ್ಗದರ್ಶನದಂತೆ ತನಿಖೆ ಕೈಕೊಂಡು ಬೆಳಗಾವಿ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಶ್ರೀಮತಿ ಅನಿತಾ ಬಿ ಹದ್ದಣ್ಣವರ ಐಪಿಎಸ್, ರವರ ಮುಂದಾಳತ್ವದಲ್ಲಿ ಬೆಳಗಾವಿ ಲೋಕಾಯುಕ್ತ ಅಧಿಕಾರಿ ಮತ್ತು ಸಿಬ್ಬಂದಿಗಳು, ನಿಪ್ಪಾಣಿಯಲ್ಲಿ ಆಪಾದಿತನು ಫಿರ್ಯಾದಿಯಿಂದ ರೂ. 6000/– ಲಂಚ ಸ್ವೀಕರಿಸುವ ವೇಳೆ ರೆಡ್ ಹ್ಯಾಂಡ್ ಆಗಿ ಹಿಡಿದು ದಸ್ತಗೀರ ಮಾಡಿ ಕಾನೂನು ಕ್ರಮ ಜರುಗಿಸಿರುತ್ತಾರೆ.

## ಶ್ರೀಗಳ ಭೇಟಿ ಮಾಡಿ ಆಶೀರ್ವಾದ ಪಡೆದ ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ: ಇತ್ತೀಚೆಗೆ ಗೋಕಾಕಕ್ಕೆ ಆಗಮಿಸಿದ್ದ ಹೊಸದುರ್ಗ ಭಗೀರಥ ಪೀಠದ ಜಗದ್ಗುರು ಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳನ್ನು ಅರಭಾವಿ ಶಾಸಕ ಹಾಗೂ ಕೆಎಂಎಫ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಅವರು ಭೇಟಿ ಮಾಡಿ ಆಶೀರ್ವಾದ ಪಡೆದರು.



ನಗರದ ಪ್ರವಾಸಿ ಮಂದಿರದಲ್ಲಿ ಜಗದ್ಗುರುಗಳನ್ನು ಭೇಟಿ ಮಾಡಿದ ಬಾಲಚಂದ್ರ ಜಾರಕಿಹೊಳಿ ಅವರು ಸುಮಾರು 20 ನಿಮಿಷ ಮಾತುಕತೆ ನಡೆಸಿದರು.

ಅರಭಾವಿಯಿಂದ ಸತತ 6ನೇ ಬಾರಿಗೆ ವಿಧಾನಸಭೆಗೆ ಆಯ್ಕೆಯಾಗಿರುವ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರನ್ನು ಸತ್ಕರಿಸಿದ ಪುರುಷೋತ್ತಮಾನಂದ ಮಹಾಸ್ವಾಮಿಗಳು, ಶಾಸಕರ ಜನಪರ ಕಾರ್ಯಗಳನ್ನು ಮುಕ್ತ ಕಂಠದಿಂದ ಶ್ಲಾಘಿಸಿದರು.

ಕಳೆದ 2004 ರಿಂದ ಅರಭಾವಿ ಕ್ಷೇತ್ರದಲ್ಲಿ ಎಲ್ಲ ಸಮಾಜಗಳನ್ನು ಒಗ್ಗೂಡಿಸಿ ಅಂತಹ ಸಮಾಜಗಳ ಪ್ರಗತಿಗಾಗಿ ಶ್ರಮಿಸಿ ಸಾಮಾಜಿ–ಕ ನ್ಯಾಯವನ್ನು ಎತ್ತಿ ಹಿಡಿಯುತ್ತಿರುವ ಬಾಲಚಂದ್ರ ಜಾರಕಿಹೊಳಿ ಅವರಿಗೆ ಮುಂದಿನ ದಿನಗಳಲ್ಲಿ ಒಳ್ಳೆಯದಾಗಲಿ.

ಯಾರೇ ತಮ್ಮ ಕಷ್ಟಗಳನ್ನು ಹೇಳಿಕೊಂಡು ಬರುವವ–ರಿಗೆ ಬಾಲಚಂದ್ರ ಜಾರಕಿಹೊಳಿ ಅವರು ಸಹಾಯ ಹಸ್ತ ನೀಡುವ ಶಕ್ತಿಯನ್ನು ಭಗವಂತನು ಕರುಣಿಸಲಿ. ಎಲ್ಲ ಸಮುದಾಯಗಳನ್ನು ಒಂದೇ ತಕ್ಕಡಿಯಲ್ಲಿ ತೂಗಿ ಸಮಾನತೆಯನ್ನು ಎತ್ತಿ ಹಿಡಿಯುವ ಮೂಲಕ 12ನೇ ಶತಮಾನದ ಅನುಭವ ಮಂಟಪದ ಮಾದರಿಯಲ್ಲಿ ನೂತನ ಶಾಸಕರು ಕರ್ತವ್ಯ ನಿರ್ವಹಿಸಲಿ. ಅವರಿಂದ ಜನರ ಕಷ್ಟಕಾರ್ಪಣ್ಯಗಳು ದೂರವಾಗಲಿ. ಕ್ಷೇತ್ರ ಸಮೃದ್ಧಿಯಾಗಲಿ. ಬಾಲಚಂದ್ರ ಜಾರಕಿಹೊಳಿ ಅವರು ಕಂಡ ಕನಸುಗಳು ಸಾಕಾರಗೊಳ್ಳಲಿ ಎಂದು ಶ್ರೀಗಳು ಇದೇ ಸಂದರ್ಭದಲ್ಲಿ ಶಾಸಕರನ್ನು ಸತ್ಕರಿಸಿ ಶುಭಾಶೀರ್ವಾದ ಮಾಡಿದರು.

ಈ ಸಂದರ್ಭದಲ್ಲಿ ಕಲ್ಲೋಳಿ ತಾಪಂ ಮಾಜಿ ಸದಸ್ಯ ಅಶೋಕ ಮಕ್ಕಳಗೇರಿ, ಪ್ರಭಾಶುಗರ ಮಾಜಿ ನಿರ್ದೇಶಕ ಮಹಾಂತೇಶ ಕಪ್ಪಲಗುದ್ದಿ, ತುಕ್ಕಾನಟ್ಟಿ ಅಮೋಘಸಿದ್ದೇಶ್ವರ ದೇವಸ್ಥಾನದ ಅರ್ಚಕ ಕಲ್ಲಪ್ಪ ಬಿ. ಉಪ್ಪಾರ ಸೇರಿದಂತೆ ಹಲವರು ಉಪಸ್ಥಿತ–ರಿದ್ದರು.

## ಉಚಿತ ಆರೋಗ್ಯ ಶಿಬಿರ ಬಡ ಜನರಿಗೆ ವರದಾನ: ಇಓ ನಿಂಗಪ್ಪ ಮಸಳಿ ಸಲಹೆ

ಬೆಳಗಾವಿ: ಉಚಿತ ಆರೋಗ್ಯ ತಪಾಸಣಾ ಶಿಬಿರಗಳು ಬಡವರು, ಮಧ್ಯಮ ವರ್ಗದವರಿಗೆ ವರದಾನವಾಗಿವೆ ಎಂದು ಕಾಗವಾಡ ತಾಪಂ ಇಓ ನಿಂಗಪ್ಪ ಮಸಳಿ ಹೇಳಿದರು.



ತಾಲೂಕಿನ ಮಂಗಸೂಳಿ ಗ್ರಾಮದ ಮಲ್ಲಯ್ಯ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಮನರೇಗಾ ಯೋಜನೆಯ ಐಇಸಿ ಚಟುವಟಿಕೆಯಡಿ ಕೂಲಿಕಾರ–ರಿಗೆ ಏರ್ಪಡಿಸಿದ ಆರೋಗ್ಯ ಶಿಬಿರದಲ್ಲಿ ಅವರು ಮಾತನಾಡಿದರು.

ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದೆ. ಗ್ರಾಮೀಣ ಭಾಗದ ಜನತೆಗೆ ಉದ್ಯೋಗ ಒದಗಿಸುವ ಜೊತೆಗೆ ಗ್ರಾಮ ಅಭಿವೃದ್ಧಿ ಒತ್ತು ನೀಡುತ್ತಿದೆ.

ಕೂಲಿಕಾರರ ಆರೋಗ್ಯದ ಹಿತದೃಷ್ಟಿಯಿಂದ ಉಚಿತ ಆರೋಗ್ಯ ಶಿಬಿರ ಆಯೋಜಿಸಲಾಗಿದೆ ಎಲ್ಲರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಬಿಪಿ, ಶುಗರ್, ಚರ್ಮ, ಎಚ್ ಐವಿ, ಟಿಬಿ ಹಗೂ ಹೃದಯ ಸಂಬಂಧಿ ಖಾಯಿಲೆಗಳ ತಪಾಸಣೆ ನಡೆಸಲಾಯಿತು. ನೂರಾರು ಜನ ಶಿಬಿರದ ಪ್ರಯೋಜನ ಪಡೆದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು(ಗ್ರಾಉ) ಗೋಪಾಲ ಮಾಳಿ, ಪಿಡಿಒ ಸಂಜೀವ ಸೂರ್ಯವಂಶಿ, ಐಇಸಿ ಸಂಂ–ಯೋಜಕ ಅಮೀತ ಇಂಗಳಗಾಂವಿ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಬೀರಪ್ಪ ಸಿಂಗಾಡಿ, ಶಿವಾನಂದ ಮುಂತಾದವರು ಭಾಗಿಯಾಗಿದ್ದರು.

## ಯುವತಿ ನಾಪತ್ತೆ



ಬೆಳಗಾವಿ: ಕಡೋಲಿ ಗ್ರಾಮದ ನಿವಾಸಿಯಾದ ಅನಿಸಾ ಮೌಲಾಲಿ ಮುಲ್ಲಾ (17) ಇವಳು ಮೇ.10 2023 ರಂದು ಬೆಳಗ್ಗೆ 7.20 ಗಂಟೆ ಸುಮಾ–ರಿಗೆ ಮನೆಯಿಂದ ಹೋದವಳು ಮರಳಿ ಬಂದಿಲ್ಲ ಎಂದು ಇವಳ ತಾಯಿಯಾದ ಮಮತಾಜ ಮೌಲಾಲಿ ಮುಲ್ಲಾ ಅವರು ದೂರು ದಾಖಲಿಸಿದ್ದಾರೆ. ಕಾಣೆಯಾದ ಹುಡುಗಿಯ ವಿವರ : 5 ಅಡಿ 4 ಇಂಚು ಎತ್ತರ, ಗೋದಿ ಬಣ್ಣ, ಸದೃಡ ಮೈಕಟ್ಟು, ತಲೆಯಲ್ಲಿ ಕಪ್ಪು ಕೂದಲು, ಅಗಲ ಮೂಖ, ಉದ್ದ ಮೂಗು ಇದ್ದು, ಮರಾಠಿ ಮತ್ತು ಹಿಂದಿ ಭಾಷೆ ಮಾತನಾಡುತ್ತಾಳೆ ಹಾಗೂ ವೈಟ್ ಕಲರ್ ಪಂಜಾಬಿ ಡ್ರೆಸ್ ಮತ್ತು ಕರಿ ಕಲರ್ ಬುರ್ಖಾ ಧರಿಸಿರುತ್ತಾಳೆ. ಈ ಪ್ರಕಾರ ಚಹರೆಯುಳ್ಳ ಹುಡುಗಿಯ ಬಗ್ಗೆ ಮಾಹಿತಿ ದೊರೆತಲ್ಲಿ ದೂರವಾಣಿ ಸಂಖ್ಯೆ 0831–2405203, 9480804083, 9480804115 ಗೆ ಸಂಪರ್ಕಿಸಬಹುದು ಎಂದು ಕಾಕತಿ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜುಗೌಡ ಪಾಟೀಲ ಶಾಸಕರಾದ ಹಿನ್ನಲೆ ದೀಡ್ ನಮಸ್ಕಾರ



ಬಸವನಬಾಗೇವಾಡಿ: ದೇವರ ಹಿಪ್ಪರಗಿ ಮತಕ್ಷೇತ್ರಕ್ಕೆ ರಾಜುಗೌಡ ಪಾಟೀಲ ಶಾಸಕರಾಗಿ ಆಯ್ಕೆಯಾದಲ್ಲಿ ದೀಡ್ ನಮಸ್ಕಾರದ ಹರಕೆ ತೀರಿಸುವೆವು ಎಂದು ಸಂಕಲ್ಪ ತೊಟ್ಟ ಹಿನ್ನಲೆಯಲ್ಲಿ ತಾಲೂಕಿನ ಬೂದಿಹಾಳದ ಗ್ರಾಪಂ ಸದಸ್ಯ ಸಿದ್ಧನಗೌಡ ಬಿರಾದಾರ ಹಾಗೂ ಯುವ ಮುಖಂಡ ಪ್ರಹ್ಲಾದ್ ತಳವಾರ ಇರ್ವರು ಸೇರಿ ಶುಕ್ರವಾರ ಬೆಳಗಿನ ಜಾವ ಗ್ರಾಮದ ಮಹಾಲಕ್ಷ್ಮಿದೇವಿ ದೇವಸ್ಥಾನದಿಂದ ಹೊರವಲಯದ ಕಂಠಿ ಲಕ್ಕಮ್ಮದೇವಿ ದೇವಸ್ಥಾನದವರೆಗೆ ದೀಡ್ ನಮಸ್ಕಾರ ಹಾಕಿದರು.ಈ ಸಂದರ್ಭದಲ್ಲಿ ಶಿವಲಿಂಗಯ್ಯ ಹಿರೇಮಠ, ಪ್ರಶಾಂತ ಬಿರಾದಾರ ಹಾಗೂ ಆನಂದ ತಾಳಿಕೋಟಿ ಸೇರಿದಂತೆ ಅನೇಕರು ಇದ್ದರು.

## ವೈಎಸ್ ಪಾಳ್ಯದ ಕಾಂಗ್ರೆಸ್ ಕಾರ್ಯಕರ್ತರಿಂದ ವಿಜಯೋತ್ಸವ

ಹುಳಿಯಾರು: ಕಾಂಗ್ರೆಸ್ ಪಕ್ಷದ ನಾಯಕ ಸಿದ್ದರಾಮಯ್ಯ ಅವರನ್ನು ರಾಜ್ಯದ ಮುಖ್ಯಮಂತ್ರಿ ಹಾಗೂ ಡಿ.ಕೆ. ಶಿವಕುಮಾರ ಅವರನ್ನು ಉಪಮುಖ್ಯಮಂತ್ರಿ ಎಂದು ವರಿಷ್ಠರು ಘೋಷಣೆ ಮಾಡಿದ ಹಿನ್ನಲೆಯಲ್ಲಿ ಹುಳಿಯಾರು ಹೋಬಳಿಯ ವೈ.ಎಸ್.ಪಾಳ್ಯದ ಕಾಂಗ್ರೆಸ್ ಕಾರ್ಯಕರ್ತರು ಭಾನುವಾರ ರಾತ್ರಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಾಚರಣೆ ಮಾಡಿದರು.



ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಜಮೀರ್ ಅಹಮದ್ ಹಾಗೂ ಮಾಜಿ ಶಾಸಕ ಕೆ.ಎಸ್.ಕಿರಣ್ ಕುಮಾರ್ ಪರ ಘೋಷಣೆ ಕೂಗಿದರು. ಸಿದ್ದು ಮತ್ತು ಡಿಕೆಶಿ ಭಾವಚಿತ್ರಕ್ಕೆ ಹಾಲಿನ ಅಭಿಷೇಕ ಮಾಡಿ ಅಭಿಮಾನ ವ್ಯಕ್ತಪಡಿಸಿದರು.

ಈ ವೇಳೆ ಮಾಜಿ ಶಾಸಕ ಕೆ. ಎಸ್.ಕಿರಣ್‌ಕುಮಾರ್ ಅವರು ಮಾತನಾಡಿ ರಾಜ್ಯದ ಜನತೆ ಆಶಯದಂತೆ ಕಾಂಗ್ರೆಸ್ ಪಕ್ಷ ರಾಜ್ಯದ ಚುಕ್ಕಾಣಿ ಹಿಡಿದಿದ್ದು, ಸುದೀರ್ಘ ರಾಜಕೀಯ ಅನುಭವ ಹೊಂದಿರುವ ಸಿದ್ದರಾಮಯ್ಯ ಪಕ್ಷ ಕಟ್ಟುವಲ್ಲಿ ಅವರು ನೀಡಿದ ಕೊಡುಗೆಯನ್ನು ಹಾಗೂ ಈ ಹಿಂದೆ ಅವರು ನಡೆಸಿದ ಆಡಳಿತವನ್ನು ಪರಿಗಣಿಸಿ ಮುಖ್ಯ ಮಂತ್ರಿಯನ್ನಾಗಿ ಘೋಷಣೆ ಮಾಡಿರುವುದು ಕಾರ್ಯಕರ್ತರಿಗೆ ಬಲ ತುಂಬಿದಂತಾಗಿದೆ ಎಂದರು.

ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಯುವಕರನ್ನು ಒಗ್ಗೂಡಿಸಿಕೊಂಡು ದಕ್ಷ ಹಾಗೂ ಪ್ರಾಮಾಣಿಕತೆಯಿಂದ ಪಕ್ಷವನ್ನು ಸಂಘಟಿಸಿದ ಡಿ.ಕೆ ಶಿವಕುಮಾರ ಅವರನ್ನು ಉಪಮುಖ್ಯಮಂತ್ರಿಯನ್ನಾಗಿ ನೇಮಿಸಿರುವುದು ಉತ್ತಮ ಆಡಳಿತ ನಿರೀಕ್ಷೆಯನ್ನು ಹೆಚ್ಚಿಸಿದೆ ಎಂದರು.

ಕಾಂಗ್ರೆಸ್ ಕೊಟ್ಟ ಗ್ಯಾರಂಟಿಗಳನ್ನು ಈಡೇ–ರಿಸುವುದರಲ್ಲಿ ಯಾವುದೇ ಸಂಶಯವಿಲ್ಲ. ರಾಜ್ಯದಲ್ಲಿ ಬಡವರು, ದೀನ, ದಲಿತರು, ಅಲ್ಪಸಂಖ್ಯಾತರು, ಸೇ–ರಿದಂತೆ ಎಲ್ಲ ವರ್ಗದ ಜನ–ರಿಗೆ ಸಾಮಾಜಿಕ ನ್ಯಾಯವನ್ನು ಸಿದ್ದರಾಮಯ್ಯ ಸರ್ಕಾರ ಒದಗಿಸಿಕೊಡಲಿದೆ ಎಂದು ಹೇಳಿದರು.

ಚುನಾವಣೆಯಲ್ಲಿ ವೈ. ಎಸ್.ಪಾಳ್ಯದ ಮತಬಾಂದವರು ಅತೀ ಹೆಚ್ಚು ಮತಗಳನ್ನು ನೀಡಿದ್ದಾರೆ. ನಾನು ಸೋತಿ–ರಬಹುದು. ಆದರೆ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದಿರುವುದರಿಂದ ಸರ್ಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಪ್ರಾಮಾಣಿಕವಾಗಿ ಸ್ಪಂಧಿಸುತ್ತೇನೆ. ಮುಂದಿನ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚು ಮತ ಕೊಡಿಸಲು ವಿರಮಿಸದೆ ಈಗಿನಿಂದಲೇ ಶ್ರಮಿಸುತ್ತೇನೆ ಎಂದರು.

ಕವಿತಾಕಿರಣ್, ಪಪಂ ಸದಸ್ಯ ಜುಬೇರ್, ಸಿದ್ದೀಕ್, ಜಬೂಸಾಬ್, ವೈ.ಎಸ್.ಪಾಳ್ಯ ಸಿದ್ದಿಕ್, ಮನ್ಸೂರ್, ಸೈಯದ್, ನವಾಬ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಅವ್ಯವಸ್ಥೆಯ ಆಗರವಾದ ಬಸವನಬಾಗೇವಾಡಿ ಬಸ್ ನಿಲ್ದಾಣ

ಬಸವನಬಾಗೇವಾಡಿ: ಇಲ್ಲಿಗೆ ವರ್ಷಪೂರ್ತಿ ರಾಜ್ಯವಲ್ಲದೇ ಇತರೆ ರಾಜ್ಯಗಳಿಂದ ಪ್ರವಾಸಿಗರು ಬಂದಿಳಿಯುತ್ತಾರೆ.

ಇಳಿಯುವ ಸ್ಥಳವನ್ನು ಕಂಡಾಗ ಅಸಹ್ಯ ಹುಟ್ಟಿಸುವ ಅಲ್ಲಿಯ ವಾತಾವರಣವನ್ನು ಕಂಡು ಬಹಳ ಹೊತ್ತು ನಿಲ್ಲದೇ ಮುಂದಿನ ಪ್ರವಾಸಿತಾಣಕ್ಕೆ ಪ್ರಯಾಣ ಬೆಳೆಸುವುದಂತೂ ಗ್ಯಾರಂಟಿ.

ಅದುವೆ ಪಟ್ಟಣದಲ್ಲಿರುವ ಬಸ್ ನಿಲ್ದಾಣ. ನಿಲ್ದಾಣಕ್ಕೆ ಕಾಲಿಟ್ಟ ತಕ್ಷಣ ಕಣ್ಣಿಗೆ ಕಾಣುವುದು.

ಅಲ್ಲಲ್ಲಿ ವಿಲೇವಾರಿಯಾಗದ ಕಸ, ಖಾಲಿ ಬಾಟಲಿಗಳು, ಗುಟಖಾ ಕಲೆಗಳು, ದುರಸ್ತಿಗೆ ಬಂದಿರುವ ಕಟ್ಟಡ, ಒಡೆದ ಕಿಡಕಿ ಗ್ಲಾಸುಗಳು, ಅಸಹ್ಯ ಹುಟ್ಟಿಸುವ ಶೌಚಾಲಯ, ತೆರೆಯದ ಅಂಗವಿಕಲರ ಶೌಚಾಲಯ, ವಿಶ್ರಾಂತಿ ಗೃಹ, ಉಪಹಾರ ಗೃಹ, ಅಸಮರ್ಪಕ ಕುಡಿಯುವ ನೀರು





ಸರಬರಾಜು ವ್ಯವಸ್ಥೆ ಹೀಗೆ ಹತ್ತು ಹಲವಾರು ಸಮಸ್ಯೆಗಳನ್ನು ಹೊತ್ತು ನಿಂತಿರುವ ನಿಲ್ದಾಣದತ್ತ ನಿಗಮ ಹಾಗೂ ಜನಪ್ರತಿನಿಧಿಗಳು ಗಮನಹ–ರಿಸಬೇಕಾಗಿದೆ.

ಇಕ್ಕಟ್ಟಾದ ನಿಲ್ದಾಣ: ನಿಲ್ದಾಣವು ತುಂಬಾ ಇಕ್ಕಟ್ಟಾಗಿದೆ. ಇದ–ರಿಂದ ಬಸ್ ಹಾಗೂ ಪ್ರಯಾಣಿಕರ ವಾಹನಗಳ ನಿಲುಗಡೆಗೆ ತುಂಬಾ ತೊಂದರೆಯಾಗಿದೆ.

ಇನ್ನಷ್ಟು ಜಾಗೆ ತೆಗೆದುಕೊಂಡು ನಿಲ್ದಾಣ ವಿಶಾಲವಾಗಬೇಕಾಗಿದೆ.

ದುರಸ್ತಿಯಲ್ಲಿರುವ ಮೂತ್ರಾಲಯ: ಮೂತ್ರಾಲಯದ ಕಟ್ಟಡ ಒಡೆದು ಹೋಗಿದೆ. ಸ್ವಚ್ಛತೆಯಿಂದ ಬಲು ದೂರ. ಮೂತ್ರ ಅಲ್ಲಿಯೇ ನಿಂತು ಮುಂದಕ್ಕೆ ಹೋಗದೇ ಗಬ್ಬು ನಾರುತ್ತಿದೆ.

ಬೆಳಕಿನ ವ್ಯವಸ್ಥೆ ಇಲ್ಲದ ಕಾರಣ ರಾತ್ರಿ ಹೊತ್ತು ಭಯದ ವಾತಾವರಣ ನಿರ್ಮಾಣವಾಗಿದೆ.

ಕುಡಿಯುವ ನೀರಿನ ಸಮಸ್ಯೆ: ನಿಲ್ದಾಣಕ್ಕೆ ಆಗಮಿಸುವ ಪ್ರಯಾಣಿಕ–ರಿಗೆ ಸಮರ್ಪಕವಾದ ಕುಡಿಯುವ ನೀರು ಇಲ್ಲದೇ ಪರದಾಡುವ ಪರಸ್ಥಿತಿ ನಿರ್ಮಾಣವಾಗಿದೆ.

ಭದ್ರತಾ ಸಿಬ್ಬಂದಿ: ಹಗಲು ಮತ್ತು ರಾತ್ರಿ ಭದ್ರತಾ ಸಿಬ್ಬಂದಿ ಇಲ್ಲದ ಕಾರಣ ನಿಲ್ದಾಣದ ಆವರಣ ಸ್ವಚ್ಛತೆ ಇಲ್ಲದಂತಾಗಿದೆ.

ನೇಮಿಸಿದ್ದಲ್ಲಿ ಪ್ರಯಾಣಿಕರಿಗೆ ಅನೂಕೂಲವಾಗುತ್ತದೆ.

ಸ್ವಚ್ಛತೆ ಮಾಯ: ನಿಲ್ದಾಣದಲ್ಲಿ ಕಂಡ ಕಂಡಲ್ಲಿ ಗುಟಕಾ ತಿಂದು ಉಗುಳುವವರ ಸಂಖ್ಯೆ ಹೆಚ್ಚಾಗಿದ್ದು. ನಿತ್ಯ ಸಂಗ್ರಹವಾಗುವ ಕಸ ವಿಲೇವಾರಿ ಸರಿಯಾಗಿ ಆಗದ ಕಾರಣ ಆವರಣ ಅಸಹ್ಯ ಹುಟ್ಟಿಸುವಂತಿದೆ.

ತೆರೆಯದ ಕೋಣೆಗಳು: ಉಪಹಾರ ಗೃಹ. ಕೆಲವು ಅಂಗಡಿಗಳು, ಪ್ರವಾಸಿಗರಿಗೆ ವಿಶ್ರಾಂತಿ ಕೋಣೆಗಳು ಬೀಗ ತೆಗೆಯದೇ ಉಪಯೋಗಕ್ಕೆ ಬಾರದ್ದಾಗಿವೆ.

ಅನೇಕ ಸಮಸ್ಯೆಗಳನ್ನು ಹೊತ್ತು ನಿಂತಿರುವ ಈ ನಿಲ್ದಾಣದತ್ತ ಸಾರಿಗೆ ಇಲಾಖಾಧಿಕಾರಿಗಳು ಹಾಗೂ ಜನಪ್ರನಿಧಿಗಳು ಗಮನಹರಿಸಿ ಕೂಡಲೇ ಸ್ಪಂದಿಸುವರೇ ಎಂದು ಪ್ರಯಾಣಿಕರು ಕಾದು ನೊಡುತ್ತಿದ್ದಾರೆ.

## ಭಾವ ಸಂಗಮ 9 ನೇ ವಾರ್ಷಿಕೋತ್ಸವ

ಬೆಳಗಾವಿ: ಭಾವ ಸಂಗಮ 9 ನೆಯ ವಾರ್ಷಿಕ ಸರ್ವ ಸದಸ್ಯರ ಮಹಾಸಮಾಗಮ ಕಾರ್ಯಕ್ರಮವನ್ನು ಇದೇ ದಿ. 21 ರವಿವಾರ ಮುಂಜಾನೆ 10–30 ಕ್ಕೆ ಕೋರ್ಟ ಆವರಣದ ರೇಣುಕಾ ಝೆರಾಕ್ಸ ಹತ್ತಿರವಿರುವ ಸರಕಾರಿ ನೌಕರರ ಭವನದಲ್ಲಿ ಭಾವಸಂಗಮ ಸಂಸ್ಥೆಯವರು ಹಮ್ಮಿಕೊಂಡಿದ್ದಾರೆ.

ಕಾರ್ಯಕ್ರಮವನ್ನು ಹಿರಿಯ ಸಾಹಿತಿ ಎಲ್. ಎಸ್. ಶಾಸ್ತ್ರಿ ಮತ್ತು ಶ್ರೀಮತಿ ಶಾರದಾ ಶಾಸ್ತ್ರಿಯವರು ಉದ್ಘಾಟಿಸಲಿದ್ದು ಸರ್ವಾಧ್ಯಕ್ಷತೆಯನ್ನು ಹಿರಿಯ ಲೇಖಕಿ ಶ್ರೀಮತಿ ಜ್ಯೋತಿ ಬದಾಮಿಯವರು ವಹಿಸಲಿದ್ದಾರೆ.

ಶ್ರೀಮತಿ ರಜನಿ ಜೀರಗ್ಯಾಳ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು ಸಾರ್ವಜನಿಕ ಶಿಕ್ಷಣ ಇಲಾಖೆಯ ಪದನಿಮಿತ್ತ ಸಹನಿರ್ದೇಶಕರಾದ ವಾಲ್ಟರ್ ಹೆಚ್ ಡಿಮೆಲ್ಲೊ ಉಪಸ್ಥಿತರಿರುತ್ತಾರೆ. ಅಧ್ಯಕ್ಷತೆಯನ್ನು ಭಾವಸಂಗಮದ ಸಂಸ್ಥಾಪಕ ಸಂಚಾಲಕರಾದ ರಾಜೇಂದ್ರ ಪಾಟೀಲ ವಹಿಸಲಿದ್ದಾರೆ.

ಒಂದು ದಿನದ ಈ ಕಾರ್ಯಕ್ರಮದಲ್ಲಿ ಉಮಾಶಂಕರ ಪುಸ್ತಕ ಪ್ರಶಸ್ತಿ, ಪ್ರತಿಭಾ ಪುರಸ್ಕಾರ, ಪುಸ್ತಕ ಬಿಡಗಡೆ, ಕವಿಗೋಷ್ಠಿ, ಸಾಧಕರಿಗೆ ಮತ್ತು ಸಹಕಾರಿಗಳಿಗೆ ಸನ್ಮಾನ ಅಲ್ಲದೇ ಸಾಂಸ್ಕೃತಿಕ ಕಾರ್ಯಕ್ರಮಗಳು ಈ ಸಂದರ್ಭದಲ್ಲಿ ಜರುಗಲಿವೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089